ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ: 13 ಸಂಚಿಕೆ: 85

17–09–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 85

## ಸಂಪಾದಕೀಯ.....

### ಗ್ರೇಟರ್ ನಿಕೋಬಾರ್ ಯೋಜನೆ ಅಭಿವೃದ್ಧಿಪರಿಸರ ನಡುವಣ ಸಮತೋಲನದ ಪ್ರಶ್ನೆ

ಭಾರತದ ಭೂಪಟದಲ್ಲಿ ಅತಿ ಪ್ರಮುಖವಾದ ಸಮುದ್ರ ತೀರ ಪ್ರದೇಶಗಳಲ್ಲಿ ಒಂದಾದ ಗ್ರೇಟರ್ ನಿಕೋಬಾರ್ ದ್ವೀಪ ಇದೀಗ ಮಹತ್ವಾಕಾಂಕ್ಷೆಯ ಅಭಿವೃದ್ಧಿ ಯೋಜನೆಯ ಕೇಂದ್ರಬಿಂದುವಾಗಿದೆ. ಕೇಂದ್ರ ಸರ್ಕಾರವು ಸುಮಾರು 72,000 ಕೋಟಿ ರೂಪಾಯಿ ವೆಚ್ಚದಲ್ಲಿ ನಡೆಯಲಿರುವ ಈ ಯೋಜನೆಯಡಿಯಲ್ಲಿ ಅಂತರರಾಷ್ಟ್ರೀಯ ಮಟ್ಟದ ಬಂದರು, ವಿಮಾನ ನಿಲ್ದಾಣ, ವಿದ್ಯುತ್ ಉತ್ಪಾದನಾ ಘಟಕ, ಹಾಗೂ ಪ್ರವಾಸೋದ್ಯಮಕ್ಕೆ ಬೇಕಾದ ಮೂಲಸೌಕರ್ಯಗಳನ್ನು ನಿರ್ಮಿಸಲು ಮುಂದಾಗಿದೆ. ಉದ್ದೇಶವೆಂದರೆ, ಅಂಡಮಾನ್–ನಿಕೋಬಾರ್ ದ್ವೀಪಗಳನ್ನು ಭಾರತದ "ಬ್ಲೂ ಎಕಾನಮಿ"ಯ ಹೃದಯಭಾಗವನ್ನಾಗಿ ರೂಪಿಸುವುದು.



ಆದರೆ, ಈ ಯೋಜನೆ ಅನೇಕ ತೀವ್ರವಾದ ಪ್ರಶ್ನೆಗಳನ್ನು ಎಬ್ಬಿಸಿದೆ. 130 ಚದರ ಕಿಲೋಮೀಟರ್ ಪ್ರದೇಶವನ್ನು ಅಭಿವೃದ್ಧಿಗೆ ಮೀಸಲಿಡಲಾಗುತ್ತಿದೆ. ಇದರ ಅರ್ಥ, ಸುಮಾರು 8.5 ಲಕ್ಷ ಮರಗಳನ್ನು ಕಡಿಯಬೇಕಾಗುತ್ತದೆ. ಇದು ದ್ವೀಪದ ಹಸಿರು ಆವರಣಕ್ಕೆ ದೊಡ್ಡ ಹೊಡೆತ ನೀಡುತ್ತದೆ. ನಿಕೋಬಾರ್ ದ್ವೀಪಗಳು ಯುನೆಸ್ಕೋ ಮಾನ್ಯತೆ ಪಡೆದ ಜೀವವೈವಿಧ್ಯದ ಹಾಟ್‌ಸ್ಪಾಟ್ ಆಗಿದ್ದು, ಇಲ್ಲಿ ಪ್ರಪಂಚದಲ್ಲೇ ವಿರಳವಾದ 1,800 ಕ್ಕೂ ಹೆಚ್ಚು ಸಸ್ಯಜೀವಿಗಳು ಮತ್ತು 500 ಕ್ಕೂ ಹೆಚ್ಚು ಪ್ರಾಣಿಜಾತಿಗಳು ಅಸ್ತಿತ್ವದಲ್ಲಿವೆ. ಇವುಗಳಲ್ಲಿ ಅನೇಕವು "ಎಂಡೆಂಜರ್ಡ್" ವರ್ಗದಲ್ಲಿ ಸೇರಿವೆ.

ಜನಸಂಖ್ಯೆಯ ದೃಷ್ಟಿಯಿಂದಲೂ ಇದು ಸಂವೇದನಾಶೀಲ ಯೋಜನೆ. ಗ್ರೇಟರ್ ನಿಕೋಬಾರ್‌ನಲ್ಲಿ ಶಾಂಪೆನ್, ನಿಕೋಬಾರೆಸ್ ಹಾಗೂ ಇತರ ಪಂಗಡದ ಜನರು ನೆಲೆಸಿದ್ದಾರೆ. ಇವರ ಜೀವನಶೈಲಿ ಪ್ರಕೃತಿ ಅವಲಂಬಿತವಾಗಿದೆ. ಅಭಿವೃದ್ಧಿ ಕಾರ್ಯಗಳು ಇವರ ಭೂಮಿ ಕಳೆದುಕೊಂಡು ಸಾಂಸ್ಕೃತಿಕ ಮತ್ತು ಅಸ್ತಿತ್ವ ಸಂಕಟ ಉಂಟುಮಾಡುವ ಸಾಧ್ಯತೆ ಹೆಚ್ಚು.

ಭದ್ರತಾ ದೃಷ್ಟಿಯಿಂದ, ಈ ಯೋಜನೆಯು ಭಾರತದ ಸ್ಟ್ರಾಟೆಜಿಕ್ ಪೋಜಿಷನ್ ಬಲಪಡಿಸುವಂತದ್ದಾಗಿದೆ. ನಿಕೋಬಾರ್ ದ್ವೀಪಗಳು ಮಲಕ್ಕಾ ಜಲಸಂಧಿಯ ಹತ್ತಿರವಿದ್ದು, ಜಾಗತಿಕ ಸಮುದ್ರ ಮಾರ್ಗದ ಪ್ರಮುಖ ಕೇಂದ್ರ. ಇಲ್ಲಿ ನಿರ್ಮಾಣವಾಗುವ ಬಂದರು ಭಾರತಕ್ಕೆ ಚೀನಾ ಮತ್ತು ಇತರ ದಕ್ಷಿಣ ಏಷ್ಯನ್ ರಾಷ್ಟ್ರಗಳ ವಿರುದ್ಧ ಸಮುದ್ರದ ಮೇಲೆ ನಿಗಾವಹಿಸುವ ಸಾಮರ್ಥ್ಯ ನೀಡುತ್ತದೆ. ವಾಸ್ತವವಾಗಿ, ರಾಷ್ಟ್ರೀಯ ಭದ್ರತೆ ಮತ್ತು ಆರ್ಥಿಕ ಪ್ರಗತಿಯ ಹಿತಾಸಕ್ತಿ ಹಿನ್ನಲೆಯಲ್ಲಿ ಈ ಯೋಜನೆಗೆ ತುರ್ತು ಮಹತ್ವವಿದೆ.

ನಿಕೋಬಾರ್ ದ್ವೀಪಗಳು ಈಗಾಗಲೇ ಭೂಕಂಪ ಪ್ರಬಲ ವಲಯ IV ಮತ್ತು ಗಿಯಲ್ಲಿ ಸೇರಿವೆ. ದೊಡ್ಡ ಮಟ್ಟದ ನಿರ್ಮಾಣ ಕಾರ್ಯಗಳಿಂದ ಭೂಕಂಪ–ಸುನಾಮಿ ಅಪಾಯ ಹೆಚ್ಚಾಗಬಹುದು.

ಪರಿಸರ ಪರಿಣಾಮ ಮೌಲ್ಯಮಾಪನ ವರದಿ ಸ್ಪಷ್ಟಪಡಿಸುವಂತೆ, "ಪರಿಸರ ಹಾನಿ ಸರಿಪಡಿಸಲಾಗದ ಮಟ್ಟಕ್ಕೆ ಹೋಗಬಹುದು.

ಸ್ಥಳೀಯ ಸಮುದಾಯಗಳ ಪರಾಮರ್ಶೆ ಸಮರ್ಪಕವಾಗಿಲ್ಲ ಎಂಬ ಟೀಕೆಗಳು ಕೇಳಿ ಬರುತ್ತಿವೆ.

ಅಭಿವೃದ್ಧಿ ಮತ್ತು ಪರಿಸರದ ನಡುವಣ ಸಮತೋಲನವನ್ನು ಸಾಧಿಸುವುದು ಈ ಯೋಜನೆಯ ಅತ್ಯಂತ ದೊಡ್ಡ ಸವಾಲು. ಒಂದು ಕಡೆ ಭಾರತ ತನ್ನ ಅಂತರರಾಷ್ಟ್ರೀಯ ವಾಣಿಜ್ಯ ಮತ್ತು ಭದ್ರತಾ ಹಿತಾಸಕ್ತಿಗಳನ್ನು ಸಾಧಿಸಲು ಮುಂದಾಗಿದೆ, ಇನ್ನೊಂದು ಕಡೆ ಪರಿಸರ ಹಾನಿ ಮತ್ತು ಪಂಗಡದ ಜನರ ಹಕ್ಕುಗಳ ಹಿನ್ನಡೆ ಉಂಟಾಗುವ ಆತಂಕ ತೀವ್ರವಾಗಿದೆ.

**ಮಲ್ಲಿಕಾರ್ಜುನ್ ಕಬ್ಬೂರು**
ಸಂಪಾದಕರು

---

## ದಾವಣಗೆರೆ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉದ್ಘಾಟನೆ

# ಮೊದಲ ಅರ್ಥಶಾಸ್ತ್ರ ಪ್ರಯೋಗಾಲಯ

**ದಾವಣಗೆರೆ:** ನಗರದ ರಾಜನಹಳ್ಳಿ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ನವೀನ ಶೈಕ್ಷಣಿಕ ಕಲಿಕೆಗೆ ಮುಂದಾಗಿ ಶಿಕ್ಷಣ ತಜ್ಞರ ಗಮನ ಸೆಳೆದಿದೆ.

ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕ ಶಂಶುದ್ದೀನ್ ಖಾನ್ ಅವರ ಸೃಜನಶೀಲ ಪ್ರಯತ್ನದಿಂದ ಜಿಲ್ಲೆಯಲ್ಲೇ ಮೊದಲ ಬಾರಿಗೆ ಅರ್ಥಶಾಸ್ತ್ರ ಪ್ರಯೋಗಾಲಯವನ್ನು ಕಾಲೇಜಿನಲ್ಲಿ ಆರಂಭಿಸಲಾಯಿತು.

ಪ್ರಯೋಗಾಲಯದಲ್ಲಿ ಸೂಕ್ಷ್ಮ ಮತ್ತು ಸ್ಥೂಲ ಆರ್ಥಿಕ ಚಾರ್ಟ್‌ಗಳು, ವಿವಿಧ ಆರ್ಥಿಕ ಕ್ರಾಂತಿಗಳ ಮಾಹಿತಿ, ಭಾರತೀಯ ಆರ್ಥಿಕತೆಯ ಹಾದಿ ಹಾಗೂ ಪ್ರವೃತ್ತಿಗಳ ವಿಶ್ಲೇಷಣೆ, ರಾಷ್ಟ್ರೀಕೃತ ಮತ್ತು ಖಾಸಗಿ ಬ್ಯಾಂಕುಗಳ ವಿವರಗಳು, ಆರ್‌ಬಿಐ ಗವರ್ನರ್‌ಗಳ ಇತಿಹಾಸ, ಪ್ರಸಿದ್ಧ ಅರ್ಥಶಾಸ್ತ್ರಜ್ಞರ ಚಿಂತನೆಗಳ ತುಲನಾತ್ಮಕ ಚಿತ್ರಣ, ಗ್ರಾಮೀಣಾಭಿವೃದ್ಧಿ ಮಾದರಿಗಳು, ಬಜೆಟ್ ಅಧ್ಯಯನ, ನೊಬೆಲ್ ಪ್ರಶಸ್ತಿ ವಿಜೇತರ ಸಾಧನೆ ಹಾಗೂ ಆರ್ಥಿಕ ಕ್ಷೇತ್ರದ ಮಹಾನ್ ಚಿಂತಕರ ಪ್ರೊಫೈಲ್‌ಗಳನ್ನು ಒಳಗೊಂಡ ಅನೇಕ ಶೈಕ್ಷಣಿಕ ಸಂಪನ್ಮೂಲಗಳನ್ನು ಅಳವಡಿಸಲಾಗಿದೆ.

ಉದ್ಘಾಟನಾ ಸಮಾರಂಭವನ್ನು ದಾವಣಗೆರೆಯ ಡಿಡಿಪಿಯು ಡಾ. ಪಳನಿವೇಲು ದೊರೈಸ್ವಾಮಿ, ನೆರವೇರಿಸಿದರು.





ಬೆಂಗಳೂರಿನ ಪದವಿ ಪೂರ್ವ ಶಿಕ್ಷಣ ಮಂಡಳಿಯ ಜಂಟಿ ನಿರ್ದೇಶಕ ಎನ್. ರಾಜು ಅವರು ವಿಶೇಷವಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ತುಂಬಿದರು.

ಈ ಉಪಕ್ರಮವು ವಿದ್ಯಾರ್ಥಿಗಳಲ್ಲಿ ಅರ್ಥಶಾಸ್ತ್ರ ಅಧ್ಯಯನದ ಆಸಕ್ತಿ ಹೆಚ್ಚಿಸುವ ನೂತನ ಪ್ರಯೋಗವಾಗಿ ವ್ಯಾಪಕ ಮೆಚ್ಚುಗೆ ಗಳಿಸಿದೆ. ಉಪನ್ಯಾಸಕ ಶಂಶುದ್ದೀನ್ ಖಾನ್ ಅವರ ನಿಸ್ವಾರ್ಥ ಪರಿಶ್ರಮ ಮತ್ತು ವಿದ್ಯಾರ್ಥಿಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ಸಾಧ್ಯವಾದ ಈ ಪ್ರಯೋಗಾಲಯ, ಜಿಲ್ಲೆಯಲ್ಲಿಯೇ ಅರ್ಥಶಾಸ್ತ್ರ ಶಿಕ್ಷಣಕ್ಕೆ ಸ್ಮರಣೀಯ ಮೈಲುಗಲ್ಲಾಗಿ ಗುರುತಿಸಲ್ಪಟ್ಟಿದೆ.

ದಾವಣಗೆರೆ ಜಿಲ್ಲಾ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘದ ಅಧ್ಯಕ್ಷ ಓಹಿಲೇಶ್ವರ .ಎನ್, ಜಿಲ್ಲಾ ಸರ್ಕಾರ ನೌಕರರ ಸಂಘದ

ಕಾರ್ಯದರ್ಶಿ ಪಾಲಾಕ್ಷಿ ಬಿ., ಮಾಜಿ ಪುರಸಭೆ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಆರ್. ಸುರೇಶ್, ಸೀತಮ್ಮ ಕಾಲೇಜಿನ ಕುಸಗಟ್ಟೆ, ನಲ್ಲೂರು ನಾಗರಾಜಪ್ಪ, ಉಪನ್ಯಾಸಕ ಮಂಜಪ್ಪ ಹಿತ್ಲಮನಿ ಉಪಸಿತರಿದ್ದರು.

> ಅರ್ಥಶಾಸ್ತ್ರ ಸಿದ್ಧಾಂತಗಳನ್ನು ಸರಳವಾಗಿ ವಿದ್ಯಾರ್ಥಿಗಳು ಅರಿಯಲು ಈ ಪ್ರಯೋಗಾಲಯ ಸಹಕಾರಿಯಾಗಿದೆ. ಮುಂದಿನ ದಿನಗಳಲ್ಲಿ ಇತರೆ ಸರ್ಕಾರಿ ಕಾಲೇಜು ಮಕ್ಕಳಿಗೆ ವಿಸ್ತರಣೆ ಮಾಡಲು ಚಿಂತಿಸಲಾಗುವುದು.
>
> **– ಡಾ. ಪಳನಿವೇಲು ದೊರೈಸ್ವಾಮಿ, ಡಿ.ಡಿ.ಪಿ.ಯು**

---

## ಯುಟ್ಯೂಬ್ ಚಾನಲ್‌ಗಳ ಆರಂಭಕ್ಕೆ ಪರವಾನಗಿ ನಿಗಧಿ ಮಾಡುವ ಬಗ್ಗೆ ಪರಿಶೀಲನೆ

**ಹುಬ್ಬಳ್ಳಿ:** ಮೊದಲು ನೀವೆಲ್ಲಾ ಊಹಾ ಪತ್ರಿಕೋದ್ಯಮವನ್ನು ನಿಲ್ಲಿಸಿ. ಇದು ಸಮಾಜಕ್ಕೆ ಹಾನಿಕರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲೆಕ್ಟ್ರಾನಿಕ್ ಮೀಡಿಯಾ ಪತ್ರಕರ್ತರಿಗೆ ಕರೆ ನೀಡಿದರು.



ಕರ್ನಾಟಕ ಎಲೆಕ್ಟ್ರಾನಿಕ್ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ಉದ್ಘಾಟಿಸಿ, ಲೋಗೋ ಬಿಡುಗಡೆ ಮಾಡಿ ಮಾತನಾಡಿದರು.

ನಾನು ರಾಜಕಾರಣಕ್ಕೆ ಬಂದು ಇಷ್ಟು ವರ್ಷದಲ್ಲಿ ಯಾವ ಮಾಧ್ಯಮಗಳಿಗೂ ನನ್ನ ಬಗ್ಗೆ ಹೀಗೇ ಬರೆಯಿರಿ, ಹಾಗೇ ಬರೆಯಿರಿ ಎಂದು ಯಾವತ್ತೂ ಹೇಳಿಲ್ಲ. ನನ್ನ ಬಗ್ಗೆ ಸುಳ್ಳುಗಳನ್ನು ಸತತವಾಗಿ ತೋರಿಸುವಾಗಲೂ ಯಾಕೆ ಹೀಗೆ ತೋರಿಸ್ತೀರಿ ಅಂತಲೂ ಯಾರಿಗೂ ಕೇಳಿಲ್ಲ. ನಿಮ್ಮಿಂದ ನನಗೆ ಏನೇನೂ ಅಪೇಕ್ಷೆ ಇಲ್ಲ. ಸಾಧ್ಯವಾದರೆ ಸತ್ಯ ತೋರಿಸಿ, ಸತ್ಯ ಬರೆಯಿರಿ ಎಂದರು.


ನನ್ನ ಕಾರಿನ ಮೇಲೆ ಕಾಗೆ ಕುಳಿತದ್ದೇ ಏನ್ ದೊಡ್ಡ ದೊಡ್ಡ ಚರ್ಚೆ ನಡೆಸಿದರು. ತೋರಿಸಿದ್ದೆಲ್ಲಾ ಅಪ್ಪಟ ಸುಳ್ಳಾಯ್ತು. ನೀವು ಹೀಗೆಲ್ಲಾ ತೋರಿಸಿದರೆ ಜನ ಒಪ್ತಾರಾ ಯೋಚನೆ ಮಾಡಿ ಎಂದರು.

ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ನಮ್ಮ ಸರ್ಕಾರ ಸದಾ ಸಿದ್ದ. ಯಾವತ್ತೂ ಇದಕ್ಕೆ ಧಕ್ಕೆ ತರುವ ಕೆಲಸವನ್ನು ನಾನೂ ಯಾವತ್ತೂ ಮಾಡಿಲ್ಲ, ನಮ್ಮ ಸರ್ಕಾರವೂ ಮಾಡುವುದಿಲ್ಲ ಎಂದರು.

ಸಂಘದ ಬೇಡಿಕೆ ಬ್ಲಾಕ್ ಮೇಲ್ ಮತ್ತು ಕೀಳು ಮಟ್ಟದ ಪ್ರಾಕ್ಟೀಸ್ ಮಾಡುತ್ತಿರುವ ಯು ಟ್ಯೂಬ್ ಚಾನಲ್ ಗಳು ಸಮಾಜಕ್ಕೆ ಶಾಪ ಆಗಿದ್ದು, ಇಂಥವರಿಂದ ಪತ್ರಿಕೋದ್ಯಮದ ಘನತೆ ಹಾಳಾಗಿದೆ. ಹೀಗಾಗಿ ಯುಟ್ಯೂಬ್ ಚಾನಲ್ ಗಳ ಹಾವಳಿ ತಡೆಯಲು ಇವರಿಗೂ ಲೈಸೆನ್ಸ್ ಕಡ್ಡಾಯಗೊಳಿಸಬೇಕು ಎಂದು ಸಂಘ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಿತು. ಈ ಬೇಡಿಕೆ ಬಗ್ಗೆ ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿಗಳು ನುಡಿದರು.

---

## ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಆಹ್ವಾನ



**ಹಾಸನ :** ಕಂದಾಯ ಸಚಿವರು ಹಾಗೂ ಜಿಲ್ಲಾಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಅಕ್ಟೋಬರ್ 9 ರಿಂದ 23ರ ವರೆಗೆ ಜರುಗಲಿರುವ ನಾಡಿನ ವಿಖ್ಯಾತ ಹಾಸನಾಂಬ ಜಾತ್ರಾ ಮಹೋತ್ಸವಕ್ಕೆ ಆಹ್ವಾನ ಪತ್ರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಶಿವಲಿಂಗೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ಜಿಲ್ಲಾಧಿಕಾರಿ ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್ ಪೂರ್ಣಿಮಾ, ಉಪ ವಿಭಾಗಾಧಿಕಾರಿ ಮಾರುತಿ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

---

## ರೇಣುಕಾಚಾರ್ಯರನ್ನು ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟಿಸಿ: ಬಿಜೆಪಿ ಮುಖಂಡರ ಒತ್ತಾಯ

**ದಾವಣಗೆರೆ:** ಪದೇ ಪದೇ ಪಕ್ಷದ್ರೋಹಿ ಚಟುವಟಿಕೆ ನಡೆಸುತ್ತಿರುವ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರನ್ನು ಕೂಡಲೇ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಬೇಕೆಂದು ಬಿಜೆಪಿಯ ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಾಂತರಾಜ್ ಪಾಟೀಲ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೇಣುಕಾಚಾರ್ಯ ಕಳೆದ ಲೋಕಸಭಾ ಚುನಾವಣೆಯಲ್ಲಿ ಯಾವ ಪಕ್ಷದ ಅಭ್ಯರ್ಥಿ ಪರ ಕೆಲಸ ಮಾಡಿದರು ಎಂದು ಈಗಾಗಲೇ ಜಗಜ್ಜಾಹೀರಾಗಿದೆ. ಈಗ ಮತ್ತದೇ ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿರುವ ರೇಣುಕಾಚಾರ್ಯ, ಸೆ.14ರಂದು ನ್ಯಾಮತಿ ತಾಲ್ಲೂಕಿನ ತಾಲ್ಲೂಕು ವ್ಯವಸಾಯ ಉತ್ಪನ್ನ ಸಹಕಾರ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆದಿದ್ದು, ಬಿಜೆಪಿ ಬೆಂಬಲಿತ ಅಭ್ಯರ್ಥಿಯಾಗಿದ್ದ ಗೋವಿನಕೋವಿಯ ಆರ್.ಪ್ರವೀಣ್ ಇವರನ್ನು ಬಿಟ್ಟು, ಇದೇ ಸ್ಥಾನಕ್ಕೆ ನ್ಯಾಮತಿ ತಾಲ್ಲೂಕಿನ ಹಾಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಜಿ.ವಿಶ್ವನಾಥ್ ಅವರಿಗೆ ಬೆಂಬಲ ನೀಡಿದ್ದು ಪಕ್ಷ ವಿರೋಧಿ ಚಟುವಟಿಕೆ ಎಂದು ದೂರಿದರು.

ಜಿಲ್ಲೆಯಲ್ಲಿ ಬಿಜೆಪಿ ಪಕ್ಷವನ್ನು ನಿತ್ರಾಣ ಮಾಡುವ ಹುನ್ನಾರವನ್ನು ಎಂ.ಪಿ.ರೇಣುಕಾಚಾರ್ಯ ಮಾಡುತ್ತಿದ್ದಾರೆ. ಅಲ್ಲದೇ ಮುಂಬರುವ ದಿನಗಳಲ್ಲಿ ಅವರು ಕಾಂಗ್ರೆಸ್ ಪಕ್ಷಕ್ಕೆ ಹೋಗುವ ತಯಾರಿ ನಡೆಸುತ್ತಿದ್ದಾರೆ. ಈ ಬಗ್ಗೆ ಈಗಾಗಲೇ ನಾವು ರಾಜ್ಯ ಘಟಕದ ಗಮನಕ್ಕೆ ತರಲಾಗಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳಲು ಮುಂದಾಗಿಲ್ಲ. ಕಾರಣ ರಾಷ್ಟ್ರೀಯ ನಾಯಕರ ಗಮನಕ್ಕೆ ತರಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇದು ಪ್ರಜಾ ತಂತ್ರದ ವ್ಯವಸ್ಥೆಯಲ್ಲಿ ನಡೆಯುವ ಚುನಾವಣೆಯ ಒಂದು ಪ್ರಕ್ರಿಯೆ. ಆದರೆ ಭಾರತೀಯ ಜನತಾ ಪಾರ್ಟಿ ನನ್ನ ಆತ್ಮ, ನನ್ನ ಆಸ್ತಿ, ನಾನು ಪಕ್ಷದ ಶಿಸ್ತಿನ ಸಿಪಾಯಿ ಎಂದು ಯಾವ ಜವಾಬ್ದಾರಿ ಇಲ್ಲದೇ ಇದ್ದರೂ ರಾಜ್ಯವನ್ನೇ ಸುತ್ತಾಡುವ ಹವ್ಯಾಸ ಹೊಂದಿರುವ ಮಾಜಿ ಸಚಿವ ರೇಣುಕಾಚಾರ್ಯ, ಹಲವಾರು ಅಧಿಕಾರ ಅನುಭವಿಸಿದ್ದು, ಇದೀಗ ಪಕ್ಷ ವಿರೋಧಿ ಚಟುವಟಿಕೆ ಮಾಡುತ್ತಿದ್ದಾರೆ. ಬಿಜೆಪಿಗೆ ದ್ರೋಹ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಆದ್ದರಿಂದ ಇಂತಹ ಪಕ್ಷದ ವಿಶ್ವಾಸ ದ್ರೋಹಿ ರೇಣುಕಾಚಾರ್ಯರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಕೂಡಲೇ ಉಚ್ಚಾಟನೆ ಮಾಡಿ ಪಕ್ಷದ ನಿಷ್ಠೆಯನ್ನು ಪ್ರದರ್ಶಿಸಬೇಕೆಂದು ಪಕ್ಷದ ರಾಜ್ಯಾಧ್ಯಕ್ಷರಿಗೆ, ಪಕ್ಷದ ಶಿಸ್ತುಪಾಲನ ಸಮಿತಿಯ ರಾಜ್ಯಾಧ್ಯಕ್ಷರಿಗೆ ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಎ.ಬಿ.ಹನುಮಂತಪ್ಪ, ಕೆ.ವಿ.ಚನ್ನಪ್ಪ, ಸಿ.ಕೆ.ರವಿ, ಮಂಜಣ್ಣ, ನೆಲಹೊನ್ನೆ ದೇವರಾಜ್, ಸೋಗಿಲು ಪ್ರಭು, ಅಜಯರೆಡ್ಡಿ ಇತರರು ಇದ್ದರು.

---

## ಕಾಂಗ್ರೆಸ್‌ನಿಂದ ಇಂದು ಪ್ರಧಾನಿಗೆ ರಕ್ತ ಪತ್ರ ಚಳವಳಿ

**ದಾವಣಗೆರೆ:** ಭಾರತೀಯ ರಾಷ್ಟ್ರೀಯ ಯುವ ಕಾಂಗ್ರೆಸ್ ವತಿಯಿಂದ ಸೆ. 17ರಂದು ಮಧ್ಯಾಹ್ನ 12ಗಂಟೆಗೆ ನಗರದ ಮುಖ್ಯ ಅಂಚೆ ಕಛೇರಿ ಮುಂಭಾಗದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಜನ್ಮ ದಿನದ ಅಂಗವಾಗಿ ರಾಷ್ಟ್ರೀಯ ಯುವ ಕಾಂಗ್ರೆಸ್ ವತಿಯಿಂದ ದೇಶಾದ್ಯಂತ ರಾಷ್ಟ್ರೀಯ ನಿರುದ್ಯೋಗಿ ದಿನಾಚರಣೆಯನ್ನು ನೌಕರಿ ಚೋರ್ ಗದ್ದಿ ಛೋಡ್ ಎಂಬ ಘೋಷಣೆಯೊಂದಿಗೆ ಆಚರಿಸಲಾಗುತ್ತಿದ್ದು ಜೊತೆಗೆ



ಪ್ರಧಾನಿಯವರಿಗೆ ರಕ್ತದಲ್ಲಿ ಪತ್ರ ಬರೆಯುವ ಕಾರ್ಯಕ್ರಮ ಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ನೇತೃತ್ವವನ್ನು ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಅವರು ವಹಿಸಲಿದ್ದಾರೆ.

ಮತ ಕಳವು ಮಾಡಿ ಅಧಿಕಾರಕ್ಕೆ ಬಂದಿರುವ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಸಲುವಾಗಿ ಪ್ರಧಾನಿ ಹುಟ್ಟುಹಬ್ಬದ ದಿನದಂದೇ ಮತಗಳ್ಳರೇ ಅಧಿಕಾರ ಬಿಡಿ ಎನ್ನುವ ಘೋಷಣೆಯೊಂದಿಗೆ ಪ್ರಧಾನಿ ನರೇಂದ್ರ ಮೋದಿಯವರಿಗೆ ಯುವ ಕಾಂಗ್ರೆಸ್ ನ ನೂರಾರು ಯುವಕರು ರಕ್ತದಲ್ಲಿ ಪತ್ರ ಬರೆಯಲಿದ್ದಾರೆ.

ಈ ಕಾರ್ಯಕಮದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಮುಖಂಡರು, ಎಲ್ಲಾ ಮುಂಚೂಣಿ ಕಾಂಗ್ರೆಸ್ ಘಟಕಗಳ ಅಧ್ಯಕ್ಷರು, ಮುಖಂಡರುಗಳು ಭಾಗವಹಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸುವಂತೆ ಭಾರತೀಯ ಯುವ ಕಾಂಗ್ರೆಸ್ ರಾಷ್ಟ್ರೀಯ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

---

## ಅರ್ಚರಿಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

**ದಾವಣಗೆರೆ:** ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ಈಚೆಗೆ ನಡೆದ ಬೆಂಗಳೂರು ಗ್ರಾಮಾಂತರ ವಿಭಾಗದ ಅರ್ಚರಿ ಕ್ರೀಡಾಕೂಟದಲ್ಲಿ ದಾವಣಗೆರೆಯ ಶಿವಮೂರ್ತಿ ಪ್ರಥಮ ಹಾಗೂ ಹೆಚ್. ಪ್ರಥಮ್ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ಇವರಿಗೆ ತರಬೇತುದಾರ ಅನಿಲಕುಮಾರ್ ಮಾರ್ಗದರ್ಶನ ಮಾಡಿದ್ದಾರೆ.




---

## ಕೆಯುಡಬ್ಲ್ಯುಜೆ ಚುನಾವಣೆ ಅಧಿಕಾರಿಯಾಗಿ ರವಿ ಟೆಲೆಕ್ಸ್ ನೇಮಕ

**ಬೆಂಗಳೂರು:** ರಾಜ್ಯದ ಕಾರ್ಯ ನಿರತ ಪತ್ರಕರ್ತರ ಪ್ರಾತಿನಿಧಿಕ ಪ್ರತಿಷ್ಠಿತ ಸಂಘಟನೆಯಾಗಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) 2025–28 ಸಾಲಿನ ನೂತನ ಕಾರ್ಯಕಾರಿ ಮಂಡಳಿಯ ಚುನಾವಣೆ ನಡೆಸಲು ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಯಾಗಿ ಹಿರಿಯ ಪತ್ರಕರ್ತ ಎನ್. ರವಿಕುಮಾರ್ (ಟೆಲೆಕ್ಸ್ ) ಅವರು ನೇಮಕಗೊಂಡಿದ್ದಾರೆ.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ಹತ್ತು ಸಾವಿರಕ್ಕೂ ಹೆಚ್ಚಿನ ಪತ್ರಕರ್ತ ಸದಸ್ಯರನ್ನು ಹೊಂದಿದ್ದು, ರಾಜ್ಯ ಕಾರ್ಯಕಾರಿ ಸಮಿತಿ ಮತ್ತು ಎಲ್ಲಾ ಸಂಘದ ಎಲ್ಲಾ ಜಿಲ್ಲಾ ಸಮಿತಿಗಳಿಗೂ ಏಕಕಾಲದಲ್ಲಿ ಚುನಾವಣೆ ನಡೆಯಲಿದ್ದು , ಶೀಘ್ರದಲ್ಲೇ ಚುನಾವಣಾ ವೇಳಾಪಟ್ಟಿ ಪ್ರಕಟಗೊಳ್ಳಲಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಅಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

## ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ

**ಚಿಕ್ಕಮಗಳೂರು:** ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪಲೋಕಾಯುಕ್ತರಾದ ಶ್ರೀ ಕೆ.ಎನ್. ಫಣೀಂದ್ರ ಅವರು ಸೆಪ್ಟಂಬರ್ 24 ರಿಂದ 26 ರವರೆಗೆ ಚಿಕ್ಕಮಗಳೂರು ಜಿಲ್ಲಾ ಪ್ರವಾಸ ಕೈಗೊಂಡು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಈ ಪ್ರವಾಸದ ಅವಧಿಯಲ್ಲಿ ಸೆಪ್ಟಂಬರ್ 24 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆಯನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ಪ್ರಕಾರ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದಲ್ಲಿ ಅಥವಾ ಅಧಿಕಾರಿ, ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ನಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಗೌರವಾನ್ವಿತರ ಮುಂದೆ ತಮ್ಮ ಅಹವಾಲುಗಳನ್ನು ಅರ್ಜಿ ನಮೂನೆ–1 ಮತ್ತು ನಮೂನೆ–2 ರಲ್ಲಿ ಲಿಖಿತ ರೂಪದಲ್ಲಿ ದಾಖಲೆ, ಸಾಕ್ಷ್ಯಾಧಾರಗಳೊಂದಿಗೆ ಸಲ್ಲಿಸಬಹುದು.

ಸೆಪ್ಟಂಬರ್ 25 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ (ತನಿಖೆ, ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ದೂರುದಾರರು ಹಾಗೂ ಕಾನೂನು ಪ್ರಕಾರ ವಿಚಾರಣೆ ನಡೆಸುತ್ತಾರೆ. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಲಿಂಗತ್ವ ಅಲ್ಪಸಂಖ್ಯಾತ, ದಮನಿತ ಮಹಿಳೆಯರಿಗೂ ಸಮಾನ ಹಕ್ಕು ಸಿಗುವಂತಾಗಲಿ

**ದಾವಣಗೆರೆ:** ಲಿಂಗತ್ವ ಅಲ್ಪಸಂಖ್ಯಾತ ಮತ್ತು ದಮನಿತ ಮಹಿಳೆಯರಿಗೂ ಸಮಾನ ಅವಕಾಶಗಳಿದ್ದು ಹಕ್ಕುಗಳು ಸಿಗುವಂತಾಗಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠಲ ರಾವ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ದುರ್ಗಾಶಕ್ತಿ ಏಡ್ಸ್ ತಡೆಗಟ್ಟುವ ಮಹಿಳಾ ಸಂಘದ ಸಹಯೋಗದಲ್ಲಿ ಮಂಗಳವಾರ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಆಯೋಜಿಸಲಾಗಿದ್ದ "ಲಿಂಗತ್ವ ಅಲ್ಪಸಂಖ್ಯಾತ ಮತ್ತು ದಮನಿತ ಮಹಿಳೆಯರಿಗೆ ಕಾನೂನು ಅರಿವು" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪಸಂಖ್ಯಾತರು ಎಂದಾಕ್ಷಣ ಸಮಾಜ ಅವರನ್ನು ನೋಡುವ ದೃಷ್ಟಿಕೋನವೇ ಬೇರೆ. ಈ ರೀತಿ ತಾರತಮ್ಯ ಮಾಡದೇ ಪ್ರತಿಯೊಬ್ಬರನ್ನು ಸಮಾನ ದೃಷ್ಟಿಯಲ್ಲಿ ಕಾಣಬೇಕು. ಅವರು ಕೂಡ ಈ ವ್ಯವಸ್ಥೆಯ ಒಂದು ಭಾಗ. ಎಲ್ಲರಂತೆ ಅವರಿಗೂ ಕೂಡ, ಸಮಾನತೆ, ಸ್ವಾತಂತ್ರ್ಯದ ಹಕ್ಕುಗಳಿವೆ. ಆದರೆ ಇಂದಿಗೂ ಅವರಿಗೆ ಸಮಾನ ಅವಕಾಶ, ಹಕ್ಕುಗಳು ದೊರೆಯುತ್ತಿಲ್ಲ. ಆದ್ದರಿಂದ ಅರ್ಹರಿಗೆ ಸರ್ಕಾರದ ಯೋಜನೆ, ಮೂಲಭೂತ




ಸೌಕರ್ಯಗಳು ಸಿಗುವಂತಾಗಬೇಕು. ಎಲ್ಲಿಯವರೆಗೂ ಸಮಾಜದ ದೃಷ್ಟಿಕೋನ ಬದಲಾಗುವುದಿಲ್ಲವೋ ಅಲ್ಲಿಯವರೆಗೂ ಅವರಿಗೆ ಸಮಾನ ಅವಕಾಶಗಳು ಸಿಗುವುದಿಲ್ಲ.

ಯಾವುದೇ ಸಮಾಜದಲ್ಲಿ ಬಡವ, ಶ್ರೀಮಂತ, ಪುರುಷ ಮತ್ತು ಮಹಿಳೆಯರು ಮಕ್ಕಳೆನ್ನದೇ, ಲಿಂಗ ತಾರತಮ್ಯ ಮಾಡದೇ, ಸಮಾನ ದೃಷ್ಟಿಯಲ್ಲಿ ಕಾಣಬೇಕು. ಸರ್ಕಾರದ ಯೋಜನೆಗಳು ಅರ್ಹರಿಗೆ ಸಿಗುವಂತಾಗಬೇಕು. ಲಿಂಗತ್ವ ಅಲ್ಪಸಂಖ್ಯಾತ ಮತ್ತು ದಮನಿತ ಮಹಿಳೆಯರ ಹಿತದೃಷ್ಟಿಗಾಗಿ ಹಲವು ಕಾನೂನು ರೂಪಿಸಿದ್ದು, ತುಂಬಾ ಕಠಿಣವಾಗಿವೆ. ಭಾರತೀಯ ಆಡಳಿತ ಸೇವೆಯಲ್ಲಿ 3 ಅಧಿಕಾರಿಗಳು ತೃತೀಯ ಲಿಂಗಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ದೇಶವನ್ನು ಸಂಸ್ಕೃತಿಯಲ್ಲಿ ಉನ್ನತ ಮಟ್ಟದಲ್ಲಿ ಕಾಣುವರು. ತಾರತಮ್ಯ ಮಾಡದೇ ಉತ್ತಮ ರೀತಿಯಲ್ಲಿ ಬಳಸಿಕೊಂಡಲ್ಲಿ ದೇಶದ ಅಭಿವೃದ್ಧಿಗೆ ಸಹಾಯವಾಗಲಿದ್ದಾರೆ. ಸರ್ಕಾರವು ಜನಸಾಮಾನ್ಯರಿಗೂ ಸಮಾನ ಹಕ್ಕು, ಮೂಲಭೂತ ಸೌಕರ್ಯಗಳನ್ನು ನೀಡಲು ಹಲವು ಯೋಜನೆ, ಕಾಯ್ದೆಗಳನ್ನು ರೂಪಿಸಿದೆ. ಅಷ್ಟೇ ಅಲ್ಲದೇ ಎಲ್ಲಾ ಕ್ಷೇತ್ರಗಳಲ್ಲೂ ಕಾರ್ಯನಿರ್ವಹಿಸಲು ಅವಕಾಶ ನೀಡಿದೆ. ಆದ್ದರಿಂದ ಎಲ್ಲರೂ ಕಾನೂನು ಅರಿವು ಪಡೆದು ಸರ್ಕಾರದ ಯೋಜನೆಗಳನ್ನು ಸದುಪಯೋಗ ಪಡೆದುಕೊಳ್ಳಬೇಕು. ಸರ್ಕಾರದ ಉನ್ನತ ಹುದ್ದೆಗಳನ್ನು ಅಲಂಕರಿಸಿ ಉನ್ನತ ಮಟ್ಟಕ್ಕೆ ಬೆಳೆಯಬೇಕು ಎಂದರು.

**ಕಾನೂನು ಅರಿವು ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್ ಹೇಳಿಕೆ**

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪರಮೇಶ್ವರ ಹೆಗಡೆ ಮಾತನಾಡಿ, ಸಾರ್ವಜನಿಕವಾಗಿ ಸಂಘರ್ಷ ಉಂಟಾದಲ್ಲಿ ಪೊಲೀಸ್ ಇಲಾಖೆ ಪಾಲುದಾರಿಕೆ ವಹಿಸುತ್ತದೆ. ಸಂಘರ್ಷಕ್ಕೆ ಎಡೆ ಮಾಡದ ರೀತಿಯಲ್ಲಿ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಂಡು, ಇದಕ್ಕೆ ಕಾನೂನಿನ ಚೌಕಟ್ಟಿನಲ್ಲಿ ರಕ್ಷಣೆ ನೀಡಲಿದೆ. ಸಮಾಜದಲ್ಲಿ ಎಲ್ಲರಿಗೂ ತಮ್ಮದೇ ಆದ ಜವಾಬ್ದಾರಿ ಕರ್ತವ್ಯಗಳಿವೆ. ಅವುಗಳನ್ನು ಸರಿಯಾದ ರೀತಿಯಲ್ಲಿ ಅರ್ಥ ಮಾಡಿಕೊಂಡು ಜೀವನ ಮಾಡಬೇಕು. ಪೊಲೀಸ್ ಅಧಿಕಾರಿಗಳು ಕೆಲವೊಮ್ಮೆ ದೌರ್ಜನ್ಯ ಮಾಡುವರು ಎಂಬ ಆಪಾದನೆ ಇದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರಿಗೂ ಸ್ವಾತಂತ್ರ್ಯವಿದೆ. ಆದರೆ ಸ್ವೇಚ್ಛಾಚಾರಕ್ಕೆ ಅವಕಾಶವಿಲ್ಲ. ಲಿಂಗತ್ವ ಅಲ್ಪಸಂಖ್ಯಾತ ಮತ್ತು ಪೊಲೀಸ್ ಅಧಿಕಾರಿಗಳ ನಡುವೆ ಹಲವಾರು ಭಾರಿ ಮಾತಿನ ಚಕಮಕಿ ನಡೆದಿರುವ ನಿದರ್ಶನಗಳಿವೆ. ಆದರೂ ಅನೇಕ ಬಾರಿ ಕೆಲವು ಪ್ರಕರಣಗಳಿಗೆ ಸಾಕ್ಷ್ಯ ಆಗಿರುತ್ತೀರಿ. ಕಾನೂನು ಚೌಕಟ್ಟಿನಲ್ಲಿ ಯಾವುದೇ ಹಿಂಜರಿಕೆ ಇಲ್ಲದೇ ಮುಂದೆ ಬಂದಲ್ಲಿ ತಮ್ಮ ಹಕ್ಕು, ಕರ್ತವ್ಯ ಕಾಪಾಡುವಲ್ಲಿ ಇಲಾಖೆ ಸದಾ ಬದ್ಧವಾಗಿರಲಿದೆ. ಭಿಕ್ಷಾಟನೆ ಮಾಡದೇ, ಮತ್ತೊಬ್ಬರಿಗೆ ತೊಂದರೆಯಾಗದಂತೆ ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳುವುದರ ಜೊತೆಗೆ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜನಾಯ್ಕ್ ಮಾತನಾಡಿ, ಇಲಾಖೆ ವತಿಯಿಂದ ಲಿಂಗತ್ವ ಅಲ್ಪಸಂಖ್ಯಾತರ ಶ್ರೇಯೋಭಿವೃದ್ಧಿಗಾಗಿ ಸಮೀಕ್ಷೆ ಕಾರ್ಯ ನಡೆಸಲಾಗುತ್ತದೆ. ಅಂತಹವರಿಗೆ ಕಾನೂನಾತ್ಮಕ ಬೆಂಬಲ ಸಿಗಲಿ ಎಂಬ ಕಾರಣಕ್ಕೆ ಕಾರ್ಯಗಾರ ಆಯೋಜನೆ. ರಾಷ್ಟ್ರದಲ್ಲೇ ಪ್ರಥಮ ಬಾರಿಗೆ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ಕಾರ್ಯ ನಡೆಸುತ್ತಿದೆ. ತಾವು ಸಮೀಕ್ಷೆಯಲ್ಲಿ ಭಾಗವಹಿಸಿ ಎಲ್ಲಾ ರೀತಿಯಲ್ಲಿ ಸಹಕರಿಸಿ ಸರ್ಕಾರದ ಯೋಜನೆ, ಮೂಲ ಸೌಲಭ್ಯ ಪಡೆದುಕೊಳ್ಳಬೇಕು. ಯಾವುದೇ ಅಂಜಿಕೆ ಇಲ್ಲದೆ ತಮಗೆ ಸಿಗಬೇಕಾದ ಹಕ್ಕುಗಳನ್ನು ಸಮನಾಗಿ ಪಡೆದು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಎಂ.ಪೂರ್ಣಿಮಾ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ, ಅಭಯ ಸ್ಪಂದನ ಸಂಸ್ಥೆ ಅಧ್ಯಕ್ಷೆ ಎಸ್.ಟಿ.ಚೈತ್ರ, ದುರ್ಗಾಶಕ್ತಿ ಏಡ್ಸ್ ತಡೆಗಟ್ಟುವ ಮಹಿಳಾ ಸಂಘದ ಅಧ್ಯಕ್ಷೆ ಶಾಂತಿಬಾಯಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಗುರುಪ್ರಸಾದ್, ಸಖಿ ಒನ್ ಸ್ಟಾಫ್ ಸೆಂಟರ್ ಕಾನೂನು ಸಲಹೆಗಾರರಾದ ತಂಜಿಮಾ ಕೌಸರ್, ಮಹಿಳಾ ಸಬಲೀಕರಣ ಘಟಕ ಜಿಲ್ಲಾ ಸಂಯೋಜಕ ಜಗದೀಶ್ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.ನೀವು ನಿಮ್ಮ ಪ್ರೀತಿಪಾತ್ರರನ್ನು ಅವಳ ಹಿಂದಿನ ಉದಾಸೀನತೆಯನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಮೌಲ್ಯಯುತವಾಗಿಸುತ್ತೀರಿ.

### ವೃಷಭ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಮಿಥುನ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು.

### ಕರ್ಕ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ - ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತಿದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು. ನೀವು ಅವರೊಂದಿಗೆ ಮಾತನಾಡುವ ಅಗತ್ಯವಿದೆ. ಪ್ರಣಯಕ್ಕೆ ಒಳ್ಳೆಯ ದಿನ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ.

### ಸಿಂಹ ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಕನ್ಯಾ ರಾಶಿ

ಕಣ್ಣಿನ ಪೋರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ಥಿಮಿತ ಕಳೆದುಕೊಳ್ಳಬಾರದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೌಟುಂಬಿಕ ಜೀವನ ಸರಾಗವಾಗಿ ನಡೆಯುತ್ತಿರುವಂತೆ ತೋರುತ್ತದೆ ಮತ್ತು ನಿಮ್ಮ ಯೋಜನೆಗಳಿಗೆ ಪೂರ್ಣ ಬೆಂಬಲವನ್ನು ನೀವು ನಿರೀಕ್ಷಿಸಬಹುದು.

### ವೃಶ್ಚಿಕ ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಧನು ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ - ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಅರ್ಹ ನೌಕರರಿಗೆ ಬಡ್ತಿ ಅಥವಾ ಆರ್ಥಿಕ ಲಾಭ.

### ಮಕರ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ

### ಮೀನ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಕೆಲವರಿಗೆ ಸುಂದರ ಉಡಗೊರೆಗಳು ಮತ್ತು ಹೂಗಳಿಂದ ತುಂಬಿದ ಪ್ರಣಯದ ಸಂಜೆ.

## ದಾವಣಗೆರೆಯ ಐತಿಹಾಸಿಕ ಪರಂಪರೆಯನ್ನು ಈಗಿನ ನವ ಪೀಳಿಗೆಗಳಿಗೆ ಅರಿವು ಮೂಡಿಸಬೇಕಾಗಿದೆ-ಸಾಲಿಗ್ರಾಮ ಗಣೇಶ್ ಶೆಣೈ



**ದಾವಣಗೆರೆ:** ದಾವಣಗೆರೆಯು ಕರ್ನಾಟಕದ ಹೃದಯ ಭಾಗ. ಇಡೀ ಭಾರತದಲ್ಲಿ ಇಲ್ಲದ ಇತಿಹಾಸ ದಾವಣಗೆರೆಗೆ ಇದೆ. ದಾವಣಗೆರೆಯ ಐತಿಹಾಸಿಕ ಪರಂಪರೆಯನ್ನು ಈಗಿನ ನವ ಪೀಳಿಗೆಗಳಿಗೆ ಅರಿವು ಮೂಡಿಸಬೇಕಾಗಿದೆ. ಬಸವ ಜಯಂತಿಯು ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಈಗಲೂ ನಡೆಯುತ್ತಿದೆ ಈ ಬಸವ ಜಯಂತಿಯು ಪ್ರಾರಂಭವಾಗಿದ್ದು 1913ನೇ ಇಸವಿಯಲ್ಲಿ ನಗರದ ವಿರಕ್ತಮಠದಲ್ಲಿ ಅದನ್ನು ಪ್ರಾರಂಭಿಸಿದ್ದು ಹರ್ಡೆಕರ್ ಮಂಜಪ್ಪ, ಮೃತ್ಯುಂಜಯಪ್ಪ ಸ್ವಾಮೀಜಿ ಕಣಕುಪ್ಪಿ ಕುಟುಂಬದವರು ದಾವಣಗೆರೆಯಲ್ಲಿ ಹುಟ್ಟಿ ಬೆಳೆದವರು ಪುಣ್ಯವಂತರು ಎಂದು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ತಮ್ಮ ಅನುಭಾವ ಅನಿಸಿಕೆ ಹಂಚಿಕೊಂಡರು.

ದಾವಣಗೆರೆಯ ದೊಡ್ಡಪೇಟೆಯ ಶ್ರೀ ವಿರಕ್ತಮಠದ ಹೊರಾಂಗಣದಲ್ಲಿ ಇತ್ತೀಚಿಗೆ ಉತ್ತರ ವಲಯದ ಭಾರತ ಸ್ಕೌಟ್ ಮತ್ತು ಗೈಡ್, ಕರ್ನಾಟಕ ನೇತಾಜಿ ಓಪನ್ ಸ್ಕೌಟ್ ಗ್ರೂಪ್, ಚೇತನ ಓಪನ್ ಸ್ಕೌಟ್ ಗ್ರೂಪ್‌ವತಿಯಿಂದ 2025-26ನೇ ಸಾಲಿನ ಸ್ಕೌಟ್ ಗೈಡ್ ದಳವನ್ನು ಪ್ರಾರಂಭದ ಸಮಾರಂಭದಲ್ಲಿ ಶೆಣೈಯವರು ಉದ್ಘಾಟಕರಾಗಿ ಸ್ಕೌಟ್ ಮತ್ತು ಗೈಡ್ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಕಂಠವಸ್ತ್ರ, ಕ್ಯಾಪ್ ಹಾಕಿ ಶೆಣೈಯವರು ಆಶೀರ್ವದಿಸಿದರು.

ಕಲಾಕುಂಚ ಸದಸ್ಯರಾದ ಸಂಗೀತ ಸಾಧಕಿ, ಹಿರಿಯ ಯೋಗ ಪಟು ಶ್ರೀಮತಿ ಮುಕ್ತಾ ಶ್ರೀನಿವಾಸಪ್ರಭು, ನೇತಾಜಿ ಓಪನ್ ಸ್ಕೌಟ್ ಗ್ರೂಪ್‌ನ ಮುಖ್ಯಸ್ಥರಾದ ರಾಮಮೂರ್ತಿ ಬಿ., ಕುಮಾರಿ ತೇಜಸ್ವಿನಿ ಹೆಚ್.ಸುರ್ವೆ ಉಪಸ್ಥಿತರಿದ್ದರು.

## ಅಡಿಕೆ ಬೆಳೆಗಾರರ ಹೆಮ್ಮೆಯ ಸಂಸ್ಥೆಯಾದ ತುಮ್‌ಕೋಸ್‌ನ 41 ನೇ ವರ್ಷದ ವಾರ್ಷಿಕ ಮಹಾಸಭೆ



**ಚನ್ನಗಿರಿ :** ಚನ್ನಗಿರಿಯ ಅಡಿಕೆ ಬೆಳೆಗಾರರ ಹೆಮ್ಮೆಯ ಸಂಸ್ಥೆಯಾದ ತುಮ್‌ಕೋಸ್‌ನ 41 ನೇ ವರ್ಷದ ವಾರ್ಷಿಕ ಮಹಾಸಭೆಯನ್ನು ಸೆಪ್ಟಂಬರ್ 22 ರ ಸೋಮವಾರದಂದು ಬೆಳಗ್ಗೆ 11 ಗಂಟೆಗೆ ಪಟ್ಟಣದ ಹೊರವಲಯದಲ್ಲಿರುವಂತಹ ಚನ್ನಮ್ಮಾಜಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತುಮ್‌ಕೋಸ್ ಅಧ್ಯಕ್ಷ ಎಚ್.ಎಸ್.ಶಿವಕುಮಾರ್ ಹೇಳಿದರು.

ಸೋಮವಾರ ಮಾದ್ಯಮದೊಂದಿಗೆ ಮಾತನಾಡಿ ಅಡಳಿತ ಮಂಡಳಿಯ ಎಲ್ಲಾ ನಿರ್ದೇಶಕರು ಬಾಗವಹಿಸಲಿದ್ದು ಸಭೆಯ ನಿಯಮವಾಳಿಯಂತೆ ಷೇರುದಾರ ಬಂಧುಗಳಿಗೆ ವರದಿ ಮಂಡನೆ ಮತ್ತು ಸಂಸ್ಥೆಯ ಅಭಿವೃದ್ದಿಯ ಕಾರ್ಯಗಳ ಬಗ್ಗೆ ವಿಶೇಷ ಚೆರ್ಚೆ ಮಾಡಲಿದ್ದು ಎಲ್ಲಾ ಅಡಿಕೆ ಬೆಳೆಗಾರರು ಈ ಸಭೆಯಲ್ಲಿ ಬಾಗವಹಿಸುವ ಮೂಲಕ ತಮ್ಮ ಸಲಹೆ ಸೂಚನೆಗಳನ್ನು ನೀಡುವಂತೆ ತಿಳಿಸಿದ್ದಾರೆ.

## ಫ್ಲೆಕ್ಸ್‌ಗಳನ್ನು ತೆರವು ಮಾಡಲು ಹಾಲೇಶ್ ಒತ್ತಾಯ

**ದಾವಣಗೆರೆ:** ನಗರದಲ್ಲಿ ಫ್ಲೆಕ್ಸ್‌ಗಳನ್ನು ಅಳವಡಿಸಲು ಮಹಾನಗರ ಪಾಲಿಕೆಯು ಅನುಮತಿಯನ್ನು ಪಡೆಯುವ ನಿಯಮವಾಗಿದ್ದು ಅದರಂತೆ ಯಾರೇ ಫ್ಲೆಕ್ಸ್ ಅಥವಾ ಬ್ಯಾನರ್‌ಗಳನ್ನು ಅಳವಡಿಸಲು ಪರವಾನಿಗೆ ಪಡೆದು ಹಾಕಿದ್ದನ್ನು ನೋಡಿದ್ದೇವೆ. ಇನ್ನು ಪರವಾನಿಗೆ ಪಡೆಯದ ಕೆಲವರಿಗೆ ನೋಟೀಸ್ ಸಹ ನೀವು ನೀಡಿದ್ದೀರಿ. ಇನ್ನು ವಿರೋಧ ಪಕ್ಷದ ಮುಖಂಡರುಗಳು ಅಳವಡಿಸಿರುವ ಫ್ಲೆಕ್ಸ್‌ಗಳನ್ನು ನಿಮ್ಮಲ್ಲಿ ಕಸ ವಿಲೇವಾರಿ ಮಾಡುವ ಕಾರ್ಮಿಕರಿಂದ ತೆರವು ಮಾಡಿಸಿದ್ದೀರಿ. ಅದಕ್ಕೆ ನಮ್ಮಲ್ಲಿ ಸಾಕ್ಷಿ ಆಧಾರಗಳು ನಮ್ಮಲ್ಲಿ ಇವೆ ಆದರೂ ಈ ನಾಲ್ಕೈದು ದಿನಗಳಿಂದ ಆಡಳಿತ ಪಕ್ಷದ ಸಚಿವರೊಬ್ಬರಾದ ಎಸ್.ಎಸ್. ಮಲ್ಲಿಕಾರ್ಜುನ್‌ರವರ ಜನಮ ದಿನದ ಅಂಗವಾಗಿ ದಾವಣಗೆರೆ ನಗರದ ವೃತ್ತಗಳಲ್ಲಿ, ನಗರದ ಮುಖ್ಯ ರಸ್ತೆಗಳಲ್ಲಿ ಮತ್ತು ನಗರದ ಗಲ್ಲಿ ಗಲ್ಲಿಗಳಲ್ಲಿ ಯಾವುದೇ ಅನುಮತಿ ಇಲ್ಲದೆ ಫ್ಲೆಕ್ಸ್‌ಗಳು ಅಳವಡಿಸಿದರೂ ಯಾವುದೇ ಕ್ರಮ ಜರುಗಿಸದೆ ಫ್ಲೆಕ್ಸ್‌ಗಳನ್ನು ತೆರವು ಮಾಡದೇ ಇರುವುದು ಎಷ್ಟರಮಟ್ಟಿಗೆ ಸರಿ ಎಂದು ಎನ್‌ಹೆಚ್. ಹಾಲೇಶ್‌ರವರು ಪ್ರಶ್ನೆ ಮಾಡಿದ್ದಾರೆ.

ಈ ಕೂಡಲೇ ಪರವಾನಿಗೆ ಇಲ್ಲದೆ ಅಳವಡಿಸಿರುವ ಬ್ಯಾನರ್ ಹಾಗೂ ಫ್ಲೆಕ್ಸ್‌ಗಳನ್ನು ತೆರವು ಮಾಡಬೇಕು, ಒಂದು ವೇಳೆ ತೆರವು ಮಾಡದೇ ಮುಂದುವರೆಸಿದಲ್ಲಿ ಮಹಾನಗರ ಪಾಲಿಕೆಯ ಫ್ಲೆಕ್ಸ್ ಅನುಮತಿಯ ನಿಯಮವನ್ನು ರದ್ದುಪಡಿಸಬೇಕು. ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಕಾನೂನಿನ ಪ್ರಕಾರ ಎಲ್ಲರಿಗೂ ಒಂದೇ ನ್ಯಾಯವಿರಬೇಕು ಎಂದು ಎನ್.ಹೆಚ್. ಹಾಲೇಶ್ ಕಾರ್ಯದರ್ಶಿಗಳು ಬಿಜೆಪಿ ಉತ್ತರ ವಿಧಾನಸಭಾ ಕ್ಷೇತ್ರ ದಾವಣಗೆರೆ ಇವರು ಒತ್ತಾಯಿಸಿದರು.

### ಅಶೋಕ ಮಂದಾಲಿ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆ

## ರೇಶನ್ ಕಾರ್ಡಗೆ ಅರ್ಹರಿರುವ ಫಲಾನುಭವಿಗಳ ಸರ್ವೆ ಕಾರ್ಯ ನಡೆಸಿ



**ಗದಗ :** ಗದಗ ತಾಲೂಕಿನಲ್ಲಿ ರೇಶನ್ ಕಾರ್ಡಗೆ ಅರ್ಹರಿರುವ ಫಲಾನುಭವಿಗಳ ಸರ್ವೆ ಕಾರ್ಯವನ್ನು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ಯಾರಂಟಿ ಸಮಿತಿ ಸದಸ್ಯರು ಜಂಟಿಯಾಗಿ ನಡೆಸುವಂತೆ ತಾಲೂಕಾ ಗ್ಯಾರಂಟಿ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ವಿಸಿ ಹಾಲ್ ದಲ್ಲಿ ಸೋಮವಾರ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರದಿಂದ ಜಾರಿಯಾಗಿರುವ ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು ಈ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಒದಗಿಸುವಲ್ಲಿ ವಿಳಂಬವಾಗಬಾರದು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಂತಾಗಬೇಕು. ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಶೇ 100 ರಷ್ಟು ಸಾಧಿಸಲು ಸಂಬಂಧಿತ ಅಧಿಕಾರಿಗಳು ಆಸಕ್ತಿಯಿಂದ ಕಾರ್ಯ ನಿರ್ವಹಿಸಬೇಕು ಎಂದರು.

ಗ್ಯಾರಂಟಿ ಯೋಜನೆ ಅನುಷ್ಟಾನದಲ್ಲಿ ಪ್ರಾಮಾಣಿಕತನವಿರಬೇಕು. ಪಾರದರ್ಶಕ ಆಡಳಿತ ನಡೆಸಿ ಅರ್ಹರು ಇದರ ಲಾಭ ಪಡೆಯುವಂತಾಗಬೇಕು. ಪಂಚಗ್ಯಾರಂಟಿ ಯೋಜನೆಯ ಮಹತ್ವವನ್ನು ಅರ್ಥೈಸಿಕೊಳ್ಳುವುದು ಹಾಗೂ ಅವುಗಳ ಪೂರ್ಣ ಪ್ರಮಾಣದ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಸಂಬಂಧಿತ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಅಶೋಕ ಮಂದಾಲಿ ಹೇಳಿದರು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ ಮಾತನಾಡಿ ಪಂಚಗ್ಯಾರಂಟಿ ಯೋಜನೆ ಲಭಿಸುವಲ್ಲಿ ಫಲಾನುಭವಿಗಳಿಗೆ ಯಾವುದೇ ಅಡಚಣೆಗಳು ಉಂಟಾದರೆ ಅಂತಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಆದ್ದರಿಂದ ಪ್ರತಿ ಮೂರು ಪಂಚಾಯಿತಿ ಸೇರಿಸಿ ಜನಸ್ಪಂದನ ಸಭೆ ಮಾಡಲಾಗುವುದು ಎಂದು ಸಭೆಯ ಗಮನಕ್ಕೆ ತಂದರು. ಗ್ರಾಮೀಣ ಭಾಗದ ಅಧಿಕಾರಿಗಳು ಪಿಡಿಓ ಸೇರಿದಂತೆ ಸ್ಥಳದಲ್ಲಿಯೇ ಸಮಸ್ಯೆಗೆ ಸ್ಪಂದಿಸುವಂತಾಗಬೇಕು. ಕೆಎಸ್‌ಆರ್ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ಜಿಲ್ಲೆಯ ವಿವಿಧ ಬಸ್ ನಿಲ್ದಾಣಗಳಿಗೆ ವಾರಕ್ಕೊಮ್ಮೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯ ಸೇರಿದಂತೆ ಸ್ವಚ್ಛತೆಯ ಕುರಿತು ನಿಗಾ ವಹಿಸಬೇಕು ಎಂದು ಸೂಚಿಸಿದರು.

ಪಂಚಗ್ಯಾರಂಟಿ ಯೋಜನೆಯ ಗದಗ ತಾಲೂಕಿಗೆ ಸಂಬಂದಿಸಿದಂತೆ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಜೂನ್ 2025 ರವರೆಗೆ ಗದಗ ತಾಲೂಕಿನಲ್ಲಿ ಯಜಮಾನಿ ಹೆಸರಿನಲ್ಲಿ ಒಟ್ಟು 81959 ಜನರು ಪಡಿತರ ಹೊಂದಿರುತ್ತಾರೆ'. 80911 ಅರ್ಜಿಗಳು ನೊಂದಣಿಯಾಗಿದ್ದು ಅದರಲ್ಲಿ 80447 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ 99.42 ರಷ್ಟು ಪ್ರಗತಿ ಸಾಧಿಸಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಗದಗ-ಬೆಟಗೇರಿ ಯಲ್ಲಿ ( ಐಆರ್‌ಎ) ಅಗಸ್ಟ್ 2025 ರ ಮಾಹೆಯಲ್ಲಿ ರಾಜ್ಯ ಸರಕಾರಿ ಅನ್ನಭಾಗ್ಯ ಹಂಚಿಕೆ ಯೋಜನೆಯಡಿ ಒಟ್ಟು 33558 ಪಡಿತರ ಕಾರ್ಡುಗಳಿದ್ದು ( ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುಗಳು) 5536.05 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಅಗಸ್ಟ್ -2025 ಮಾಹೆಯಲ್ಲಿ ( ಕೇಂದ್ರ ಸರ್ಕಾರ ) ಎನ್‌ಎಫ್‌ಎಸ್‌ಎ ಅಕ್ಕಿ ಹಂಚಿಕೆಯಡಿ ಒಟ್ಟು 33558 ಕಾರ್ಡುಗಳಿದ್ದು (ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುಗಳೂ) 2326.76 ಕ್ವಿಂಟಾಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ 31-8-2025 ರವರೆಗೆ ಗದಗ ಶಹರ ಉಪವಿಭಾಗದಲ್ಲಿ 46482 ಸ್ಥಾವರಗಳು ಅರ್ಹವಾಗಿದ್ದು, 46267 ಸ್ಥಾವರಗಳ ನೋಂದಣಿಯಾಗಿದ್ದು ಶೇ 99.54 ಪ್ರಗತಿಯಾಗಿದೆ. ದಿ: 31-8-2025 ರವರೆಗೆ ಗೃಹ ಜ್ಯೋತಿ ಯೋಜನೆಯಡಿ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಾಗಿದ್ದು 53070 ಸ್ಥಾವರಗಳ ನೊಂದಣಿಯಾಗಿವೆ. ಶೇ 99.63 ಪ್ರಗತಿಯಾಗಿದೆ.


ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ 31-8-2025 ರವರೆಗೆ 2231 ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ಅದರಲ್ಲಿ 1761 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು.

ಸಭೆಗೂ ಮುನ್ನ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಸಂವಿಧಾನದ ಪ್ರಸ್ತಾವನೆಯನ್ನು ಜಿಲ್ಲಾ ಸಮಿತಿ ಸದಸ್ಯ ಶರೀಫ್ ಬೆಳೆಯಲಿ ಅವರು ಬೋಧಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಉಪಾಧ್ಯಕ್ಷೆ ಶ್ರೀಮತಿ ನಿಲಮ್ಮ ಬೋಳನವರ,

ಸದಸ್ಯರುಗಳಾದ ಈರಣ್ಣ ಹುನಸಿಕಟ್ಟಿ, ಶರೀಫ ಬೆಳೆಯಲಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ದಯಾನಂದ ಪವಾರ, ಶಂಭು ಕಾಳೆ, ಶ್ರೀಮತಿ ಸಾವಿತ್ರಿ ಹೂಗಾರ, ಸಂಗು ಕೆರಕಲಕಟ್ಟಿ, ಎನ್.ಬಿ.ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿಕಾಯ್ಕರ, ದೇವರಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ ಚಿಂಚಲಿ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಎಚ್ ಬಾರಕೇರ , ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಹಾಗೂ ಪಂಚ ಗ್ಯಾರಂಟಿ ಯೋಜನೆಗೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

## ಬಾರತ ಭವ್ಯ ದೇಶದ ನಿರ್ಮಾಣದಲ್ಲಿ ಸರ್.ಎಂ.ವಿಶ್ವೇಶ್ವರಯ್ಯನವರ ಪಾತ್ರಅಪಾರ




**ಚನ್ನಗಿರಿ:** ಬಾರತ ಭವ್ಯ ದೇಶದ ನಿರ್ಮಾಣದಲ್ಲಿ ಸರ್.ಎಂ.ವಿಶ್ವೇಶ್ವರಯ್ಯನವರ ಪಾತ್ರ ಕೊಡುಗೆ ಅಪಾರವಾಗಿದ್ದು ಅವರ ಜನ್ಮದಿನಾಚರಣೆ ಎಂಜನಿಯರ್‌ಗಳಿಗೆ ಕಾಯಕವನ್ನು ಎಚ್ಚರಿಸುವ ದಿನವಾಗಿದೆ ಎಂದು ಡಾ.ಪವಿತ್ರ ಸಂತೋಷ್ ಹೇಳಿದರು.

ಚನ್ನಗಿರಿ ಪಟ್ಟಣದಲ್ಲಿ ಅರೇಕಾ ಸಮುದಾಯ ಭವನದಲ್ಲಿ ಚನ್ನಗಿರಿ ತಾಲೂಕು ಇಂಜಿನಿಯರ್ ಸಂಘದ ವತಿಯಿಂದ ಸರ್. ಎಂ. ವಿಶ್ವೇಶ್ವರಯ್ಯನವರ ಜನ್ಮ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಇಂಜನಿಯರ್ಸ್ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ದೇಶದ ನಿರ್ಮಾಣದಲ್ಲಿ ಇಂಜಿನಿಯರ್‌ಗಳ ಕೊಡುಗೆ ಆಪಾರವಾಗಿದ್ದು ಸರ್‌ಎಂ.ವಿ.ಯವರು ಇಂದಿನ ಇಂಜಿನಿಯರ್‌ಗಳಿಗೆ ಮಾದರಿಯಾಗಿದ್ದಾರೆ ಎಂದರು.ಇಂದಿನ ದಿನಮಾನಗಳಲ್ಲಿ ಸಾಕಷ್ಟು ಯುವ ಇಂಜಿನಿಯರ್‌ಗಳು ಇದ್ದು ತಮ್ಮ ಕರ್ತವ್ಯವದಲ್ಲಿ

ತಾವು ತೊಡಗಿಸಿಕೊಂಡಾಗ ಗುಣಮಟ್ಟದ ಕಟ್ಟಡಗಳ ನಿರ್ಮಾಣ ಮಾಡಬಹುದಾಗಿದೆ ಎಂದರು. ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ಯುವಕರು ಒತ್ತಡದಲ್ಲಿ ಬದುಕುತ್ತಿದ್ದು ತಮ್ಮ ಆರೋಗ್ಯದ ಕಡೆಯೂ ಗಮನಹರಿಸಬೇಕು ಎಂದರು. ರಕ್ತದಾನ ಶಿಬಿರದಲ್ಲಿ ಉತ್ತಮ ಸೇವೆ ಸಲ್ಲಿಸಿದ್ದು ಯುವಕರು ಹೆಚ್ಚು ಹೆಚ್ಚು ರಕ್ತದಾನಕ್ಕೆ ಮುಂದಾಗಬೇಕು ಎಂದರು.

ಇಂಜನಿಯರ್ ರಾಕೇಶ್ ಮಾತನಾಡಿ ಸರ್.ಎಂ.ವಿ.ಯವರು ಒಬ್ಬ ಭಾರತೀಯ ಸಿವಿಲ್ ಎಂಜನಿಯರ್ ಅಡಳಿತಗಾರ ಮತ್ತು ರಾಜಕಾರಣಿಯಾಗಿದ್ದು 1912 ರಿಂದ 1918 ರವರೆಗೆ ಮೈಸೂರಿನ 19 ನೇ ದಿವಾನರಾಗಿ ಸೇವೆ ಸಲ್ಲಿಸಿದರು

.ಕನ್ನಡ ಸಾಹಿತ್ಯ ಪರಿಷತ್, ಮೈಸೂರು ಬ್ಯಾಂಕ್, ಕೃಷ್ಣರಾಜಸಾಗರ ಅಣೆಕಟ್ಟು, ಬೆಂಗಳೂರಿನ ಸಾಬೂನು ಕಾರ್ಖಾನೆ, ಭದ್ರಾವತಿಯ ಉಕ್ಕು ಮತ್ತು ಕಬ್ಬಿಣ ಕಾರ್ಖಾನೆ, ಬೆಂಗಳೂರಿನ ಕೃಷಿ ವಿಶ್ವ ವಿದ್ಯಾಲಯ ಸ್ಥಾಪಿಸಿದರು.ಇವರ ಸಾದನೆಯನ್ನು ಗುರುತಿಸಿ ಭಾರತ ಸರಕಾರವು 1955 ರಲ್ಲಿ ಬಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ ಎಂದರು. ಈ ಹಿಂದೆ 4 ವರ್ಷಗಳ ಹಿಂದೆ ನಾಲ್ಕೈದು ಜನ ಸೇರಿ ಪ್ರಾರಂಬಿಸಿದ ಸಂಘವು ಇಂದು 70 ಜನ ಸದಸ್ಯರನ್ನು ಹೊಂದಿದೆ. ಸಂಘವು ತಮ್ಮ ಕೆಲಸ ಕಾರ್ಯಗಳ ಜೊತೆಯಲ್ಲಿ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಳ್ಳುವ ಪ್ರಯತ್ನ ಮಾಡುತ್ತಿದೆ ಎಂದರು.

ಈ ಸಂದರ್ಭದಲ್ಲಿ ಚನ್ನಗಿರಿ ತಾಲೂಕು ಇಂಜಿನಿಯರ್ ಸಂಘದ ಅಧ್ಯಕ್ಷ ರಂಜನ್, ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ಮ್ಯಾನೇಜರ್, ತುಷಾಂತ್, ಚನ್ನಗಿರಿ ಚನ್ನಮ್ಮಾಜಿ ಲಯನ್ಸ್ ಕ್ಲಬ್ ಅಧ್ಯಕ್ಷ ನಾಗರಾಜ್, ಜೆ.ಎಸ್.ಡಬ್ಲ್ಯು ಕಂಪನಿಯ ಸೇಲ್ಸ್ ಮ್ಯಾನೇಜರ್ ಅಬ್ದುಲ್ ಗಫಾರ್, ಇಂಜನಿಯರ್‌ಗಳಾದ ಮಧು, ಸ್ವರೂಪ್, ಯಶವಂತ್ ಇತರರು ಹಾಜರಿದ್ದರು.

## ಸರ್ ಎಂವಿ ಸಮೂಹ ಸಂಸ್ಥೆಗಳ ಸಂಸ್ಥಾಪನಾ ದಿನಾಚರಣೆ

**ದಾವಣಗೆರೆ:** ದಾವಣಗೆರೆಯ ಲೋಕಿಕೆರೆ ರಸ್ತೆಯಲ್ಲಿರುವ ಸರ್ ಎಂವಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಸರ್ ಎಂವಿ ಸಮೂಹ ಸಂಸ್ಥೆಗಳ ಸಂಸ್ಥಾಪನಾ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಸೆ.16ರಂದು ಮಧ್ಯಾಹ್ನ 2 ಗಂಟೆಗೆ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಗಾಯಕಿ ಸಂಗೀತ ಕಟ್ಟಿ ಕುಲಕರ್ಣಿ, ಸಂಗೀತಗಾರು, ಸಂಶೋಧಕರು ಆದ ಬಿ. ಸುಬ್ಬಾರೆಡ್ಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲರು ತಿಳಿಸಿದ್ದಾರೆ.

## ಜನ ಸಂಪರ್ಕ ಸಭೆ

**ಶಿವಮೊಗ್ಗ:** ಜೋಗ ಮೆಸ್ಕಾಂ ಉಪವಿಭಾಗ ಕಛೇರಿಯಲಿ ಸೆ. 19 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ದೀಕ್ಷಾ ಭೂಮಿ ಯಾತ್ರೆಗೆ ಬಸ್ ವ್ಯವಸ್ಥೆ

**ಚಿಕ್ಕಮಗಳೂರು:** 2025-26ನೇ ಸಾಲಿನಲ್ಲಿ ಅಕ್ಟೋಬರ್ 2 (ವಿಜಯದಶಮಿ) ರಂದು ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನದ ಕಾರ್ಯಕ್ರಮಕ್ಕೆ ಸೆಪ್ಟಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಕರ್ನಾಟಕ ರಾಜ್ಯದಿಂದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಾಗಪುರ ದೀಕ್ಷಾಭೂಮಿಗೆ ಯಾತ್ರೆ ಕರೆದೊಯ್ಯಲು ಕ್ರಮ ಕೈಗೊಳ್ಳಲಾಗಿದೆ.

ಸಾರಿಗೆ ವ್ಯವಸ್ಥೆ, ರೈಲು ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯಡಿ 2025-26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿಗೆ ಭೇಟಿ ನೀಡಲಿರುವ ಯಾತ್ರಾರ್ಥಿಗಳಿಗೆ ಕೆ.ಎಸ್.ಆರ್.ಟಿ.ಸಿ. ರಾಜಹಂಸ ಬಸ್ಸುಗಳ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ದೀಕ್ಷಾಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ವೆಬ್‌ಸೈಟ್ ಲಿಂಕ್ (<https://swdservices.karnataka.gov.in/>) ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೆಪ್ಟಂಬರ್ ರವರೆಗೆ 15 ನಿಗದಿಪಡಿಸಲಾಗಿದ್ದು ಆಸಕ್ತರು ಅರ್ಜಿ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.


## ಲಿಂಗತ್ವ ಅಲ್ಪಸಂಖ್ಯಾತ ಹಾಗೂ ವಿಮುಕ್ತ ದೇವದಾಸಿಯರ ಸಮೀಕ್ಷೆ

**ದಾವಣಗೆರೆ:** : ಸೆಪ್ಟೆಂಬರ್ 15 ರಿಂದ 45 ದಿನಗಳವರೆಗೆ ಲಿಂಗತ್ವ ಅಲ್ಪಸಂಖ್ಯಾತ ಹಾಗೂ ಮಾಜಿ ದೇವದಾಸಿಯರ ಸಮೀಕ್ಷಾ ಕಾರ್ಯವನ್ನು ಆಯೋಜಿಸಲಾಗಿದೆ.

ಈ ಸಮೀಕ್ಷೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಹಾಗೂ ಮಾಜಿ ದೇವದಾಸಿಯರ ಮರುಸಮೀಕ್ಷೆ ಕಾರ್ಯವನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಹರಿಹರ ಪಿ.ಎಲ್.ಡಿ ಬ್ಯಾಂಕ್ ಬಿಲ್ಡಿಂಗ್, ಶಿವಮೊಗ್ಗ ರಸ್ತೆ, ಹರಿಹರ ಇಲ್ಲಿ ಸಮೀಕ್ಷೆಗೆ ಒಳಪಡಿಸಲು ಹರಿಹರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

## ನಿಧನ ಸುದ್ದಿಗಳು

### ವೇಣುಗೋಪಾಲ್ ನಿಧನ



**ಶಿವಮೊಗ್ಗ:** ನಗರದ ದುರ್ಗಿಗುಡಿ ಶ್ರೀ ದುರ್ಗಾಪರಮೇಶ್ವರಿ ದೇವಾಲಯ ಸಮಿತಿಯ ಖಜಾಂಚಿ ಮತ್ತು ಗುತ್ತಿಗೆದಾರ ಯು. ವೇಣುಗೋಪಾಲ್ (70) ಸೋಮವಾರ ಮಧ್ಯಾಹ್ನ ತೀವ್ರ ಹೃದಯಘಾತದಿಂದ ನಿಧನರಾದರು.

ಹೊಸಮನೆ ಎರಡನೇ ತಿರುವಿನ ನಿವಾಸಿಯಾದ ಇವರು ಪತ್ನಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನ ಅಗಲಿದ್ದಾರೆ.

ಇವರ ಅಂತ್ಯಸಂಸ್ಕಾರ ಮಂಗಳವಾರ ಬೆಳಿಗ್ಗೆ 8ಗಂಟೆಗೆ ರೋಟರಿ ಚಿತಾಗಾರದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಪ್ರಜಾಪ್ರಭುತ್ವ ಮಾನವೀಯ ಮೌಲ್ಯಗಳನ್ನು ಒಳಗೊಂಡ ಜೀವನ ಕ್ರಮ : ಎಸ್.ಎನ್.ಚನ್ನಬಸಪ್ಪ

**ಶಿವಮೊಗ್ಗ :** ಪ್ರಜಾಪ್ರಭುತ್ವ ಕೇವಲ ಒಂದು ಸರ್ಕಾರವಲ್ಲ, ಅದು ಮಾನವೀಯ ಮೌಲ್ಯಗಳನ್ನು ಒಳಗೊಂಡ ಜೀವನ ಕ್ರಮ. ಜಾತಿ ಆಧಾರಿತ ವ್ಯವಸ್ಥೆ ಇರುವ ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಉಳಿದರಷ್ಟೇ ಬಹುಸಂಖ್ಯಾತರಿಗೆ ಬದುಕು. ಪ್ರಜಾಪ್ರಭುತ್ವದಿಂದ ದೊರೆತ ಸ್ವಾತಂತ್ರ್ಯವನ್ನು, ಕಲಿತ ಮೌಲ್ಯಗಳನ್ನು, ಪಡೆದ ಅಧಿಕಾರವನ್ನು ಪ್ರಜಾಪ್ರಭುತ್ವದ ರಕ್ಷಣೆಗಾಗಿಯೇ ಬಳಸಬೇಕಾದ ಅಗತ್ಯವಿದೆ ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಅವರು ಹೇಳಿದರು.

ಅವರು ಇಂದು ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ. ಉನ್ನತ ಶಿಕ್ಷಣ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸ್ಥಳೀಯ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದ ಆವರಣದಲ್ಲಿ ಏರ್ಪಡಿಸಲಾಗಿದ್ದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಭಾರತ ದೇಶಕ್ಕೆ ಭವ್ಯ ಇತಿಹಾಸವಿದೆ. ಪ್ರಜಾಪ್ರಭುತ್ವದ ಭದ್ರಬುನಾದಿಯ ಮೇಲೆ ದೇಶದ ಭವಿಷ್ಯ ನಿಂತಿದೆ ಎಂದ ಅವರು, ಪ್ರಜಾಪ್ರಭುತ್ವವು ಎಲ್ಲಾ ನಾಗರಿಕರ ಪಾಲ್ಗೊಳ್ಳುವಿಕೆಯನ್ನು ಪುಷ್ಠೀಕರಿಸುತ್ತದೆ ಎಂಬ ನಂಬಿಕೆಯಿಂದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಕ್ಕೆ ಮಹತ್ವ ಬಂದಿದೆ. ಈ ಸಂದರ್ಭದಲ್ಲಿ ನಮ್ಮನ್ನಾಳುವ ಸರ್ಕಾರಗಳ ಪಾತ್ರವನ್ನು ಎತ್ತಿ ತೋರಿಸಲು, ನ್ಯಾಯ, ಶಾಂತಿ, ಅಭಿವೃದ್ಧಿ ಮತ್ತು ಮಾನವ ಹಕ್ಕುಗಳನ್ನು ತಲುಪಿಸುವಲ್ಲಿ ಇರುವ ಸದವಕಾಶವಾಗಿರಲಿದೆ ಎಂದವರು ನುಡಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ವಿಧಾನ ಪರಿಷತ್ಸದಸ್ಯ ಡಿ.ಎಸ್.ಅರುವರು ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರೀಕರು ತಮ್ಮ ಹಕ್ಕುಗಳನ್ನು ಬಳಸಿಕೊಳ್ಳುವಂತೆಯೇ ಕರ್ತವ್ಯಗಳನ್ನು ನಿರ್ವಹಿಸಬೇಕು. ಸಮರ್ಥ ಜನನಾಯಕನನ್ನು ಆಯ್ಕೆಗೊಳಿಸುವಲ್ಲಿ ಎಲ್ಲರೂ ಸಕ್ರಿಯವಾಗಿ ಮತದಾನದಲ್ಲಿ ಪಾಲ್ಗೊಳ್ಳಬೇಕು. ಮತ ಚಲಾಯಿಸದವರಿಗೆ ಸರ್ಕಾರದ ಯಾವುದೇ ಸೌಲಭ್ಯವನ್ನು ನೀಡದಿರುವ ಕಾನೂನು ಜಾರಿಗೊಳ್ಳಬೇಕೆಂದವರು ನುಡಿದರು.

ಜನರಿಂದ ಜನರಿಗಾಗಿ ಜನರಿಗೋಸ್ಕರವೇ ನಿರ್ಮಾಣಗೊಂಡ ಸಂವಿಧಾನ ವ್ಯವಸ್ಥೆ ಹೊಂದಿರುವ ಭಾರತದ ಬೆಳವಣಿಗೆಯ ವೇಗ ಅಸಾಧಾರಣವಾದುದಾಗಿದೆ ಮಾತ್ರವಲ್ಲ ದೇಶದ ಬೆಳವಣಿಗೆ ಪಾರದರ್ಶಕವಾಗಿದೆ ಎಂದ ಅವರು, ತಂತ್ರಜ್ಞಾನ ಕ್ಷೇತ್ರದಲ್ಲಿನ ಅದ್ಭುತವಾದ ಬದಲಾವಣೆಗಳಾಗಿವೆ. ತಂತ್ರಜ್ಞಾನ ಕ್ಷೇತ್ರದ ಉನ್ನತಿಗೆ ಭಾರತದ ಕೊಡುಗೆ ಅಪಾರವಾದುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ವಿಧಾನ ಪರಿಷತ್ಸದಸ್ಯ ಡಾ॥ ಧನಂಜಯ ಸರ್ಜಿ ಅವರು ಮಾತನಾಡಿ, ವಿವಿಧತೆಯಲ್ಲಿ ಏಕತೆಯನ್ನು ಕಾಣುವ ಭಾರತ ದೇಶದ ಬೆಳವಣಿಗೆಯನ್ನು ವಿಶ್ವವೇ ಬೆರಗುಗಣ್ಣಿನಿಂದ ನೋಡುತ್ತಿದೆ. ಇದುವೇ ಭಾರತದ ಸುವರ್ಣಕಾಲ. ವಿಶ್ವಗುರುವಾಗುವ ಪುಣ್ಯಕಾಲ ಎಂದವರು ಬಣ್ಣಿಸಿದರು.

ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಬಲ್ಕೀಸ್ಬಾನು ಅವರು ಮಾತನಾಡಿ, ಜನಪರ ಮತ್ತು ಜನಸ್ನೇಹಿ ಆಡಳಿತ ನೀಡುವ ಜನಪ್ರತಿನಿಧಿ ಮತ್ತು ಪಕ್ಷಗಳನ್ನು ಮತದಾರರು ಆಯ್ಕೆಗೊಳಿಸಬೇಕು ಎಂದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಎಲ್ಲಾ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮತದಾನದ ಹಕ್ಕಿನ ಮಹತ್ವದ ಬಗ್ಗೆ ಅರಿವು ಮೂಡಿಸುವ ಕುರಿತು ಏರ್ಪಡಿಸಲಾಗಿದ್ದ ಚಿತ್ರಕಲಾ ಸ್ಪರ್ಧೆ, ಚರ್ಚಾ ಸ್ಪರ್ಧೆ ಮತ್ತು ಛಾಯಾಚಿತ್ರ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಸೈಕಲ್ ರ್ಯಾಲಿಯಲ್ಲಿ ಭಾಗವಹಿಸಿದವರಿಗೆ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎನ್. ಹೇಮಂತ್, ಅಪರ ಜಿಲ್ಲಾಧಿಕಾರಿ ಅಭಿಷೇಕ್ವ್., ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮಲ್ಲೇಶಪ್ಪ, ಉಪನ್ಯಾಸಕ ಸುರೇಶ್ಲಮಾಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೈನ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರ್ಸ್ ಡೇ ಆಚರಣೆ

**ದಾವಣಗೆರೆ :** ಜೈನ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಇಂಜಿನಿಯರ್ಸ್ ಡೇ 2025 ಕಾರ್ಯಕ್ರಮವನ್ನು ಭಾರತ ರತ್ನ ಸರ್ ಎಂ. ವಿಶ್ವೇಶ್ವರಯ್ಯ ಅವರ ಸ್ಮರಣಾರ್ಥವಾಗಿ ಕಾಲೇಜು ಸಭಾಂಗಣದಲ್ಲಿ ಭವ್ಯವಾಗಿ ಆಚರಿಸಲಾಯಿತು.

ವಿಭಾಗದ ಮುಖ್ಯಸ್ಥರಾದ ಡಾ. ರಾಹುಲ್ ಪಾಟೀಲ್ ಅವರು ಸರ್ ಎಂ.ವಿ. ಅವರ ನಿಖರ ಸಮಯ ಪಾಲನೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು. ಡಾ. ಪ್ರಕಾಶ್ ಕೆ. ಬಿ., ಅಕಾಡೆಮಿಕ್ ಡೀನ್ ಅವರು ಸರ್ ಎಂ.ವಿ. ಅವರ ದೇಶ ನಿರ್ಮಾಣಕ್ಕೆ ನೀಡಿದ ಅಮೂಲ್ಯ ಕೊಡುಗೆಗಳನ್ನು ವಿವರಿಸಿ, ಮೈಸೂರಿನ ಅನೇಕ ಮನೆಗಳಲ್ಲಿ ಇಂದಿಗೂ ಅವರ ಚಿತ್ರವನ್ನು ಪೂಜಾ ಕೊಠಡಿಯಲ್ಲಿ ಪೂಜಿಸುತ್ತಾರೆ ಎಂಬುದನ್ನು ಹಂಚಿಕೊಂಡರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಇಂಜಿನೀಯರ್ ಅಭಿಷೇಕ್ ಕೆ. ಆರ್., ಕಾರ್ಯನಿರ್ವಾಹಕ ಇಂಜಿನಿಯರ್, ನಗರ ಪಾಲಿಕೆ ದಾವಣಗೆರೆ,

ಅವರು ಸರ ಎಂ.ವಿ. ಅವರ ಸಮಯ ಪಾಲನೆಗೆ ಸಂಬಂಧಿಸಿದ ಹಲವು ಉದಾಹರಣೆಗಳನ್ನು ನೀಡಿದರು ಮತ್ತು ಅವರ ಕೆಲಸದ ಅಪ್ರತಿಮ ನಿಷ್ಠೆಯನ್ನು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿ ಹೇಳಿದರು.

ಡಾ. ಮಂಜಪ್ಪ ಸಾರಥಿ, ಸಲಹೆಗಾರರು, ಸರ್ ಎಂ.ವಿ. ಅವರು ನೀರಾವರಿ, ಅಣೆಕಟ್ಟುಗಳು ಮತ್ತು ಕೈಗಾರಿಕಾ ಅಭಿವೃದ್ಧಿ ಸೇರಿದಂತೆ ಅನೇಕ ಕ್ಷೇತ್ರಗಳಿಗೆ ನೀಡಿದ ಕೊಡುಗೆಗಳನ್ನು ಸ್ಮರಿಸಿ, ಅವರ ಕಾಲನಿಷ್ಠೆಯ ಮಹತ್ವವನ್ನು ಒತ್ತಿ ಹೇಳಿದರು. ಡಾ. ಗಣೇಶ್ ಡಿ. ಬಿ., ಪ್ರಾಂಶುಪಾಲರು,

ಸರ್ ಎಂ.ವಿ. ಅವರ ಆದರ್ಶ ಗುಣಗಳನ್ನು ವಿದ್ಯಾರ್ಥಿಗಳಿಗೆ ವಿವರಿಸಿ, ಅವರು ಜೀವನದಲ್ಲಿ ಅನುಸರಿಸಬೇಕಾದ ಮಾದರಿ ವ್ಯಕ್ತಿತ್ವವಾಗಿದ್ದಾರೆಂದು ಹೇಳಿದರು. ಕೊನೆಗೆ ಕಾರ್ಯಕ್ರಮದ ಸಂಯೋಜಕರಾದ ಶ್ರೀ. ಭರತ್ ಎಚ್. ಎಂ. ಅವರು ಕೃತಜ್ಞತಾ ಭಾಷಣ ಮಾಡುತ್ತಾ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಲು ಸಹಕರಿಸಿದ ಎಲ್ಲಾ ಗಣ್ಯರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿಗೆ ಧನ್ಯವಾದಗಳನ್ನು ಸಲ್ಲಿಸಿದರು.

# ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ 5 ಪಾಲಿಕೆಗಳಿಗೆ ಹೊಸ ಬಜೆಟ್

**ಬೆಂಗಳೂರು:** ಬಿಬಿಎಂಪಿ ಹೋಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಬಂದು ಐದು ನಗರ ಪಾಲಿಕೆ ರಚನೆಯಾಗುತ್ತಿದ್ದಂತೆ ಹೊಸ ಪಾಲಿಕೆಗಳಿಗೆ ಹೊಸ ಬಜೆಟ್ ಮಂಡನೆ ಮಾಡಲು ಜಿಬಿಎ ಅಧಿಕಾರಿಗಳು ತೀರ್ಮಾನಿಸಿದ್ದಾರೆ.ಗ್ರೇಟರ್ ಬೆಂಗಳೂರು ವ್ಯಾಪ್ತಿಯ 5 ನಗರ ಪಾಲಿಕೆಗೆ ಹೊಸ ಬಜೆಟ್ ಮಂಡನೆಗೆ ದಿನಗಣನೆ ಆರಂಭವಾಗಿದ್ದು, ಆಕ್ಟೊಬರ್ 10 ರೊಳಗೆ ಎಲ್ಲಾ ಪಾಲಿಕೆಗಳಲ್ಲೂ ಬಜೆಟ್ ಮಂಡನೆಯಾಗುವುದು ಖಚಿತವಾಗಿದೆ.

ಈಗಾಗಲೇ ಹೊಸ ಬಜೆಟ್ ಮಂಡನೆಗೆ ಪೂರ್ವ ಬಾವಿ ಸಿದ್ದತೆ ಆರಂಭವಾಗಿದ್ದು, ಆರ್ಥಿಕ ವರ್ಷದ ಕೊನೆಗೆ ಇನ್ನು ಬಾಕಿ ಇರುವ 8 ತಿಂಗಳ ಅವಧಿಗೆ ಪ್ರತ್ಯೇಕ ಬಜೆಟ್ ಮಂಡನೆ ಮಾಡಲಾಗುತ್ತಿದೆ5 ನಗರ ಪಾಲಿಕೆಗಳಿಗೆ ಈಗಾಗಲೇ ಆಯುಕ್ತರುಗಳನ್ನು ನಿಯೋಜನೆ ಮಾಡಲಾಗಿದೆ. ಎಲ್ಲಾ ಆಯುಕ್ತರುಗಳು ತಮ ವ್ಯಾಪ್ತಿಯ ಪಾಲಿಕೆಯಲ್ಲಿ ಬಜೆಟ್ ಮಂಡನೆ ಮಾಡಲು ತಯಾರಿ ಆರಂಭಿಸಿದ್ದಾರೆ.

ತಮ್ಮ ನಗರ ಪಾಲಿಕೆ ವ್ಯಾಪ್ತಿಗೆ ಬರುವ ಸಿಬ್ಬಂದಿ ವೇತನ, ಆಡಳಿತಾತ್ಮಕ ವೆಚ್ಚ, ಸಭೆ ಸಮಾರಂಭಗಳ ವೆಚ್ಚ, ಕಲ್ಯಾಣ ಕಾರ್ಯಕ್ರಮಗಳು, ಕಾಮಗಾರಿಗಳು, ಉದ್ಯಾನವನಗಳು, ಮೈದಾನ, ಶಾಲಾ. ಕಾಲೇಜು, ಅಸ್ಪತ್ರೆ, ರಸ್ತೆ ನಿರ್ವಹಣೆ, ಇಂದಿರಾ ಕ್ಯಾಂಟೀನ್ ಖರ್ಚು ವೆಚ್ಚ ಹಾಗೂ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿದ ಬಜೆಟ್ ಮಂಡನೆ ಮಾಡಲು ತೀರ್ಮಾನಿಸಲಾಗಿದೆ ಎಂದು ಜಿಬಿಎ ಮೂಲಗಳು ತಿಳಿಸಿವೆ.ಎಲ್ಲಾ ಅಂದುಕೊಂಡತೆ ನಡೆದರೆ, ಈ ತಿಂಗಳ ಅಂತ್ಯ ಇಲ್ಲವೇ ಅ.10ರೊಳಗೆ ಬಜೆಟ್ ಮಾಡುವುದು ಪಕ್ಕಾ ಎನ್ನುತ್ತಿವೆ ಮೂಲಗಳು.ನಗರದಲ್ಲಿ ನಡೆಯುತ್ತಿರುವ ಬೃಹತ್ ಕಾಮಗಾರಿಗಳು ಹಾಗೂ ಕಸ ವಿಲೇವಾರಿ ವಿಚಾರಗಳು ಜಿಬಿಎ ವ್ಯಾಪ್ತಿಗೆ ಬರುವ ಹಿನ್ನೆಲೆಯಲ್ಲಿ ಅಂತಹ ಕಾಮಗಾರಿಗಳನ್ನು ಬಿಟ್ಟು ಉಳಿದ ಕಾಮಗಾರಿಗಳ ಅಭಿವೃದ್ಧಿ ಗೆ ಹೊಸ ಬಜೆಟ್ ಮಂಡನೆ ಮಾಡಲಾಗುತ್ತಿದೆಯಂತೆ.

## ವಿಕಲಚೇತನ ವೈಯಕ್ತಿಕ ಕಾರ್ಯಕ್ರಮಗಳನ್ನು ಪಡೆಯಲು ಅರ್ಜಿ ಆಹ್ವಾನ

**ಶಿವಮೊಗ್ಗ:** 2023-24, 2024-25 ನೇ ಸಾಲಿನ ಸಾಗರ ನಗರಸಭಾ ಸಾಮಾನ್ಯ ನಿಧಿ ಮತ್ತು ಎಸ್ಎಫ್ಸಿ ಮುಕ್ತ ನಿಧಿ, ಮಂಜೂರಾದ ಕ್ರಿಯಾ ಯೋಜನೆಯಡಿಯಲ್ಲಿ ಉಳಿಕೆ ಕಾರ್ಯಕ್ರಮಗಳ ಹಾಗೂ 2025-26 ನೇ ಸಾಲಿನ ಸಾಮಾನ್ಯ ನಿಧಿ ಮತ್ತು ಎಸ್ಎಫ್ಸಿ ಮುಕ್ತನಿಧಿ ಮಂಜೂರಾತಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ವಿಕಲಚೇತನ ಫಲಾನುಭವಿಗಳಿಂದ ವೈಯಕ್ತಿಕ ಕಾರ್ಯಕ್ರಮಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ನಿಗದಿತ ನಮೂನೆಯನ್ನು ಸಾಗರ ನಗರಸಭೆ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಕಚೇರಿಗೆ ಅ .16 ರೊಳಗಾಗಿ ಸಲ್ಲಿಸುವಂತೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08183-226021 ನ್ನು ಹಾಗೂ ವಿಷಯ ನಿರ್ವಾಹಕರನ್ನು ಸಂಪರ್ಕಿಸುವುದು.

## ಚಂದ್ರಗುತ್ತಿ ಶ್ರೀ ರೇಣುಕಾಂಬ ಉತ್ಸವಕ್ಕೆ ವಿವಿಧ ಕಲಾತಂಡಗಳಿಂದ ಅರ್ಜಿ ಆಹ್ವಾನ

**ಶಿವಮೊಗ್ಗ:** ಸೊರಬ ತಾಲೂಕಿನ ಚಂದ್ರಗುತ್ತಿ ಗ್ರಾಮದ ಶ್ರೀ ರೇಣುಕಾಂಬ ದೇವಸ್ಥಾನದಲ್ಲಿ ಸೆ.22 ರಿಂದ ಅ.02 ರವರೆಗೆ ದಸರಾ ಉತ್ಸವದ ಅಮ್ಮನವರ ಪಲ್ಲಕ್ಕಿ ಮೆರವಣಿಗೆಯಲ್ಲಿ ಭಾಗವಹಿಸಲು ಇಚ್ಚೆಯುಳ್ಳ ವಿವಿಧ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಿದೆ.

ಶ್ರೀ ರೇಣುಕಾ ಪರಮೇಶ್ವರಿ ಅಮ್ಮನವರ ಶರನ್ನವರಾತ್ರಿ ಉತ್ಸವದ ಅಂಗವಾಗಿ ಪ್ರತಿ ದಿನ ದೇವಿ ಪಾರಾಯಣ, ನವಗ್ರಹ ಜಪ, ಮೃತ್ಯುಂಜಯ ಜಪ, ಪವಮಾನ, ಶ್ರೀ ರೇಣುಕಾ ಸಹಸ್ರನಾಮ, ಶ್ರೀ ದುರ್ಗಾ ಸಹಸ್ರನಾಮ, ಲಲಿತಾ ಸಹಸ್ರನಾಮ ಪೂಜಾ ವಿಧಿಗಳನ್ನು ನಡೆಯುವುದು. ಅ. 02 ರಂದು ವಿಜಯದಶಮಿಯ ಬನ್ನಿ ಉತ್ಸವದಂದು ಅಮ್ಮನವರ ಪಲ್ಲಕ್ಕಿ ಮೆರವಣಿಗೆ ನಡೆಯುವುದರಿಂದ ಮೆರವಣಿಗೆಯಲ್ಲಿ ಭಾಗವಹಿಸಿ ಇಚ್ಚೆಯುಳ್ಳ ವಿವಿಧ ಕಲಾತಂಡಗಳು ಸೆ. 18ರೊಳಗಾಗಿ ತಮ್ಮ ತಂಡದ ಹೆಸರು, ತಾವು ನೀಡಿರುವ ಕಾರ್ಯಕ್ರಮದ ಸಂಪೂರ್ಣ ವಿವರಗಳೊಂದಿಗೆ ಕಾರ್ಯನಿರ್ವಾಹಣಾಧಿಕಾರಿಗಳು, ಶ್ರೀ ರೇಣುಕಾಂಬ ದೇವಸ್ಥಾನ ಚಂದ್ರಗುತ್ತಿ, ಸೊರಬ ತಾಲೂಕು, ಶಿವಮೊಗ್ಗ ಜಿಲ್ಲೆ ಇಲ್ಲಿ ಮನವಿ ಪತ್ರವನ್ನು ಸಲ್ಲಿಸುವುದು.

## ಮಹಿಳಾಶ್ರಮ ಸಭೆ

**ಚಿಕ್ಕಮಗಳೂರು :** ಬಸವನಹಳ್ಳಿ ಮಹಿಳಾಶ್ರಮದ 2025-26ನೆಯ ಸಾಲಿನ ಸರ್ವ ಸದಸ್ಯರ ಸಭೆ ಸೆ.20ರಂದು ನಡೆಯಲಿದೆ.
ಶನಿವಾರ ಪೂರ್ವಾಹ್ನ 11ಗಂಟೆಗೆ ಮಹಿಳಾಶ್ರಮದಲ್ಲಿ ನಡೆಯುವ ಸಭೆಯ ಅಧ್ಯಕ್ಷತೆಯನ್ನು ಅನಿತಾನಾಗೇಂದ್ರ ವಹಿಸುವರೆಂದು ಕಾರ್ಯದರ್ಶಿ ವಸುಧಾಹರೀಶ್ ತಿಳಿಸಿದ್ದಾರೆ.

## ನಾಳೆ ಮರಡಿ ಗ್ರಾಮಕ್ಕೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್

**ದಾವಣಗೆರೆ:** ಚನ್ನಗಿರಿ ತಾಲ್ಲೂಕಿನ ಮರಡಿ ಗ್ರಾಮದ ಶ್ರೀ ಬಸವೇಶ್ವರ ವಿನಾಯಕ ಗೆಳೆಯರ ಬಳಗ ವತಿಯಿಂದ ಸೆ.17 ರಂದು ಬೆಳಿಗ್ಗೆ 11 ಗಂಟೆಗೆ ಮಹಾಗಣಪತಿ ಮಹೋತ್ಸವ ಹಾಗೂ ಧರ್ಮಜಾಗೃತಿ ಸಮಾವೇಶಕ್ಕೆ ವಿಜಯಪುರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಆಗಮಿಸಲಿದ್ದಾರೆ ಎಂದು ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಆರ್.ವಿ.ಅಶೋಕ್ ಗೋಪನಾಳು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯತ್ನಾಳ್ ಅವರು ಸೆ.17 ರಂದು ಬೆಂಗಳೂರಿಂದ ಹೊರಟು ಬೆಳಿಗ್ಗೆ 11 ಗಂಟೆಗೆ ನಗರದ ಹೊರವಲಯ ಬಾಡ ಕ್ರಾಸ್ ಬಳಿ ಬರಲಿದ್ದು, ಅಲ್ಲಿಂದ ಮರಡಿ ಗ್ರಾಮದ ವರೆಗೆ ಬೃಹತ್ ಬೈಕ್ ಮತ್ತು ಕಾರ್ ರ್ಯಾಲಿ ಮೂಲಕ ಗ್ರಾಮಕ್ಕೆ ಸ್ವಾಗತಿಸಲಾಗುವುದು. ಈ ರ್ಯಾಲಿಯಲ್ಲಿ ಸುಮಾರು 5 ಸಾವಿರ ಜನ ಸೇರುವ ನಿರೀಕ್ಷೆ ಇದೆ ಎಂದರು.

ಮಧ್ಯಾಹ್ನ 12 ಗಂಟೆಗೆ ಗ್ರಾಮದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ಚನ್ನಗಿರಿ ಶಾಸಕ ಬಸವರಾಜ ವಿ.ಶಿವಗಂಗಾ ಭಾಗಿಯಾಗಲಿದ್ದಾರೆ. ಈ ಕಾರ್ಯಕ್ರಮಕ್ಕೆ ಹಿಂದೂ ಸಮಾಜದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾವೇಶವನ್ನು ಯಶಸ್ವಿಗೊಳಿಸಬೇಕಾಗಿ ಶ್ರೀ ಬಸವೇಶ್ವರ ವಿನಾಯಕ ಗೆಳೆಯರ ಬಳಗದ ಸದಸ್ಯರು ವಿನಂತಿಸಿಕೊಂಡರು.ಸುದ್ದಿಗೋಷ್ಠಿಯಲ್ಲಿ ಬಳಗದ ಮಹಾಂತೇಶ್, ಕೊಟ್ರೇಗೌಡ ಕ್ಯಾರಕಟ್ಟೆ, ವೀರೇಶ್ವರ ಮರಡಿ, ರುದ್ರೇಶ್ ಗೋಪನಾಳ್, ಬಸವರಾಜ್ ಬೆಳಲಗೆರೆ ಇದ್ದರು.

# ಅಭಿವೃದ್ಧಿ ವಿಚಾರದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಹಕಾರ ಮುಖ್ಯವಾಗುತ್ತದೆ

**ಚಿತ್ರದುರ್ಗ:** ಅಭಿವೃದ್ಧಿ ವಿಚಾರದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಹಕಾರ ಮುಖ್ಯವಾಗುತ್ತದೆ. ಎಂದು ನಗರಸಭೆ ನೂತನ ಅಧ್ಯಕ್ಷೆ ಎಂ.ಪಿ.ಅನಿತಾರಮೇಶ್ ಅಭಿಪ್ರಾಯಪಟ್ಟರು.



ಇಲ್ಲಿನ ನಗರಸಭೆ ಕಚೇರಿಯಲ್ಲಿ ಸೋಮವಾರದಂದು ಅಧಿಕಾರ ಸ್ವಿಕಾರ ಮಾಡಿದ ಬಳಿಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಸಭೆಯಲ್ಲಿ ಅವರು ಮಾತನಾಡಿದ ಅವರು. ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಚುನಾಯಿತ ಪ್ರತಿನಿಧಿಗಳ ನಡುವೆ ಉತ್ತಮ ಬಾಂಧವ್ಯ ಇದ್ದರೆ ಮಾತ್ರ ಏನಾದರೂ ಪ್ರಗತಿ ಕಾಣಲು ಸಾದ್ಯವಾಗುತ್ತದೆ. ಎಲ್ಲರೂ ಅವರವರ ಕರ್ತವ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕಾಗುತ್ತದೆ. ಕಾನೂನು ಮತ್ತು ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿ ವರ್ಗ ಜನರ ನೋವು ನಲಿವುಗಳನ್ನು ಅರ್ಥಮಾಡಿಕೊಂಡು ಮುನ್ನಡೆಯಬೇಕು ಎಂದರು.

ಚಿತ್ರದುರ್ಗ ನಗರಸಭೆ ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ನಗರದ ವ್ಯಾಪ್ತಿಯೂ ವಿಸ್ತಾರಗೊಳ್ಳುತ್ತಿದ್ದು, ಸಮಸ್ಯೆಗಳೂ ಸಹ ಅಷ್ಟೇ ಪ್ರಮಾಣದಲ್ಲಿ ಉಲ್ಬಣಗೊಳ್ಳುವುದು ಸಹಜ. ಆದರೆ ಸಾರ್ವಜನಿಕ ಕ್ಷೇತ್ರದಲ್ಲಿರುವ ನಾವು ಯಾರೂ ಸಹ ನಮ್ಮ ಕರ್ತವ್ಯಗಳಿಂದ ವಿಮುಖರಾಗಕೂಡದು ಪರಸ್ಪರ ಸೇವಾ ಮನೋಭಾವಗಳಿಂದ ಮತ್ತು ಅವರವರ ಕರ್ತವ್ಯಗಳನ್ನು ಅರಿತು ಕಾರ್ಯನಿರ್ವಹಿಸಿದಾಗ ಮಾತ್ರ ವ್ಯವಸ್ಥೆಯಲ್ಲಿ ಬದಲಾವಣೆ ತರಲು ಸಾಧ್ಯವಾಗುತ್ತದೆ ಎಂದು ಎಂ.ಪಿ.ಅನಿತಾ ರಮೇಶ್ ಹೇಳಿದರು.

ನಗರಸಭೆಯ ಪ್ರಭಾರಿ ಅಧ್ಯಕ್ಷೆಯಾಗಿದ್ದ ಉಪಾಧ್ಯಕ್ಷೆ ಶಕೀಲಾಭಾನು ಅವರು ನೂತನ ಅಧ್ಯಕ್ಷೆ ಎಂ.ಪಿ.ಅನಿತಾ ರಮೇಶ್ ಅವರಿಗೆ ಅಧಿಕಾರ ಹಸ್ತಾಂತರ ಮಾಡಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪೌರಾಯುಕ್ತರಾದ ಶ್ರೀಮತಿ ಲಕ್ಷ್ಮೀ, ಸ್ಥಾಯಿ ಸಮಿತಿ ಅಧ್ಯಕ್ಷ ನಸ್ರುಲ್ಲಾ, ನಗರಸಭೆ ಸದಸ್ಯರಾದ ಮೀನಾಕ್ಷಿ, ಹರೀಶ್, ನರಸಿಂಹಮೂರ್ತಿ, ಮಾಜಿ ಸದಸ್ಯರಾದ ಟಿ.ರಮೇಶ್, ಮೀನಾಕ್ಷಿ, ಹರೀಶ್, ನರಸಿಂಹ ಮೂರ್ತಿ, ಶ್ರೀನಿವಾಸ್, ನಗರಸಭೆ ಅಧಿಕಾರಿಗಳಾದ ಶ್ರೀಮತಿ ರೇಣುಕಾ, ಇಂಜಿನಿಯರ್ ರಾಜು, ಗುತ್ತಿಗೆದಾರ ಜೋಗಿಮಟ್ಟಿ ಈ.ಶಿವಕುಮಾರ್ ಹಾಜರಿದ್ದರು.

## ದೆಹಲಿ ಬಳಿಕ ಈಗ ಬೆಂಗಳೂರಲ್ಲೂ ರೆಡಿಯಾಗುತ್ತಿದೆ 15 ವರ್ಷ ಹಳೆಯ ವಾಹನಗಳನ್ನು ಗುಜರಿಗೆ ಹಾಕುವ ಪ್ಲಾನ್

**ಬೆಂಗಳೂರು:** ರಾಷ್ಟ್ರ ರಾಜಧಾನಿ ದೆಹಲಿ ಮಾದರಿಯಲ್ಲೆ ರಾಜ್ಯದಲ್ಲೂ ಹೆಚ್ಚು ಹೊಗೆ ಹೊರಸೂಸುವ ಹಳೆ ವಾಹನಗಳನ್ನು ಗುಜರಿಗೆ ಹಾಕುವ ಪ್ಲಾನ್ ರೆಡಿಯಾಗುತ್ತಿದೆ. ಪರಿಸರಕ್ಕೆ ಮಾರಕವಾಗುವಂತಹ 15 ವರ್ಷಗಳು ಮೇಲ್ಪಟ್ಟ ವಾಹನಗಳನ್ನು ಗುಜರಿಗೆ ಹಾಕುವ ನಿರ್ಧಾರವನ್ನು ಈಗಾಗಲೇ ಕೇಂದ್ರ ಸರ್ಕಾರ ಕೈಗೊಂಡಿದೆ.
ದೇಶದಲ್ಲೆ ಅತಿ ಹೆಚ್ಚು ಪರಿಸರ ಮಾಲಿನ್ಯವಿರುವ ರಾಷ್ಟ್ರ ರಾಜಧಾನಿ ದೆಹಲಿಯಲ್ಲೂ ಸ್ಕ್ರ್ಯಾಪ್ ಪಾಲಿಸಿಯನ್ನು ಜಾರಿಗೊಳಿಸಲಾಗಿದೆ. ಇದೀಗ ದೆಹಲಿ ಮಾದರಿಯಲ್ಲೆ ರಾಜ್ಯದಲ್ಲೂ 15 ವರ್ಷ ಮೇಲ್ಪಟ್ಟ ವಾಹನಗಳನ್ನು ಸ್ಕ್ರ್ಯಾಪ್ ಮಾಡುವ ನೀತಿಯನ್ನು ಜಾರಿಗೊಳಿಸಲಾಗುತ್ತಿದೆ.
ಕೇಂದ್ರ ಸರ್ಕಾರದ ಸೂಚನೆ ಮೇರೆಗೆ ರಾಜ್ಯದಲ್ಲೂ ಸ್ಕ್ರ್ಯಾಪ್ ಪಾಲಿಸಿಯನ್ನು ಸಾರಿಗೆ ಇಲಾಖೆ ಜಾರಿಗೊಳಿಸಿದೆ. 15 ವರ್ಷ ಮೇಲ್ಪಟ್ಟ ವಾಹನಗಳನ್ನು ಗುಜರಿಗೆ ಹಾಕುವಂತೆ ಈಗಾಗಲೇ ನೋಟೀಸ್ ನೀಡಲಾಗಿದೆ.
ಟೂ ಸ್ಟ್ರೋಕ್ ಆಟೋಗಳ ಜತೆಗೆ 15 ವರ್ಷ ತುಂಬಿರೋ ಲಾರಿಗಳನ್ನೂ ಸ್ಕ್ರ್ಯಾಪ್ ಮಾಡುವಂತೆ ಸೂಚಿಸಲಾಗಿದೆ. ಸ್ಕ್ರ್ಯಾಪ್ ಪಾಲಿಸಿಗೆ ವಾಹನದ ಮಾದರಿ ಆಧರಿಸಿ ಸಾರಿಗೆ ಇಲಾಖೆ ಪರಿಹಾರ ನೀಡುತ್ತಿದೆ.

## ಮೈಸೂರಿನಲ್ಲಿ ದಸರಾ ಸಂಭ್ರಮ : ಅರಮನೆಯಲ್ಲಿ ಸಿಂಹಾಸನ ಜೋಡಣೆ ಕಾರ್ಯ ಆರಂಭ



**ಮೈಸೂರು:** ದಸರಾ ಹಿನ್ನೆಲೆಯಲ್ಲಿ ಅರಮನೆಯಲ್ಲಿ ಇಂದು ಸಿಂಹಾಸನ ಜೋಡಣೆ ಕಾರ್ಯ ಆರಂಭ. ಈ ಹಿನ್ನೆಲೆ ಮಂಗಳವಾರ ಮಧ್ಯಾಹ್ನದವರೆಗೆ ಪ್ರವಾಸಿಗರಿಗೆ ಅರಮನೆ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ.

ರಾಜವಂಶಸ್ಥರು ನಡೆಸುವ ಧಾರ್ಮಿಕ ಕಾರ್ಯ, ಖಾಸಗಿ ದರ್ಬಾರ್‌ಗಾಗಿ ಈ ಸಿಂಹಾಸನ ಜೋಡಣೆ ನಡೆಯುತ್ತಿದೆ. ಸ್ಟ್ರಾಂಗ್ ರೂಂನಿಂದ ಬಿಗಿ ಭದ್ರತೆಯೊಂದಿಗೆ ರಾಜವಂಶಸ್ಥರಾದ ಪ್ರಮೋದಾ ದೇವಿ ಒಡೆಯರ್ ಅವರ ಸಮ್ಮುಖದಲ್ಲಿ ಸಿಂಹಾಸನ ಜೋಡಣೆ ನಡೆಯಲಿದೆ.

ಬೆ. 8:30 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ಅರಮನೆಗೆ ಪ್ರವಾಸಿಗರ ಪ್ರವೇಶ ನಿಷೇಧಿಸಲಾಗಿದೆ. ಚಿನ್ನದ ಸಿಂಹಾಸನದ ಬಿಡಿಭಾಗ ಹಾಗೂ ಬೆಳ್ಳಿಯ ಭದ್ರಾಸನದ ಬಿಡಿ ಭಾಗಗಳನ್ನ ದರ್ಬಾರ್ ಹಾಲ್‌ಗೆ ತಂದು ಜೋಡಣೆ ಮಾಡಲಾಗುವುದು.ಬೆಳ್ಳಿ ಭದ್ರಾಸನವನ್ನ ಕನ್ನಡಿ ತೊಟ್ಟಿಯಲ್ಲಿ ಜೋಡಣೆ ಮಾಡಲಾಗುವುದು.

ಸಿಂಹಾಸನ ಜೋಡಣೆ ಕಾರ್ಯ ನಡೆಯುವ ವೇಳೆ ದರ್ಬಾಲ್ ಹಾಲ್ ಸೇರಿದಂತೆ ವಿವಿಧೆಡೆ ಅಳವಡಿಸಿರುವ ಸಿಸಿ ಕ್ಯಾಮೆರಾಗೆ ಪರದೆ ಹಾಕಲಾಗುವುದು.ಸಿಂಹಾಸನ ಜೋಡಣೆ ಕಾರ್ಯದ ನಿಮಿತ್ತ ಬೆಳಗ್ಗೆಯೇ ದರ್ಬಾರ್ ಹಾಲ್‌ನಲ್ಲಿ ಗಣಪತಿ, ಚಾಮುಂಡಿ ಪೂಜೆ ಸೇರಿಂದತೆ ಕೆಲ ಹೋಮ ಹವನ ನಡೆಯಲಿದೆ. ಪೂಜೆ ಮುಗಿದ ಬಳಿಕ ಸಿಂಹಾಸನ ಬಿಡಿಭಾಗವನ್ನ ದರ್ಬಾರ್ ಹಾಲ್‌ಗೆ ತಂದು ಸಿಂಹಾಸನ ಜೋಡಣೆ ಮಾಡಲಾಗುವುದು.

## ಜಿಲ್ಲಾ ಕಾರ್ಯಕ್ರಮ ಸಂಯೋಜಕರ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲಾ ಬಾಲಭವನ ಕಾರ್ಯಕ್ರಮ ಸಂಯೋಜಕರ ಹುದ್ದೆಗೆ ತಾತ್ಕಾಲಿಕ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಹತೆ: ಯಾವುದಾದರು ಪದವಿ ಮತ್ತು ಕಂಪ್ಯೂಟರ್ ಜ್ಞಾನದೊಂದಿಗೆ ಸೃಜನಾತ್ಮಕ ಮತ್ತು ಕ್ರೀಯಾತ್ಮಕ ಚಟುವಟಿಕೆಗಳ ಯಾವುದಾದರೂ ಒಂದು ಕಲಾ ಕ್ಷೇತ್ರಗಳಲ್ಲಿ ಕೌಶಲ್ಯ ಹೊಂದಿರಬೇಕು. ರೂ. 19,223/- ಗಳು ಗೌರವಧನ ನೀಡಲಾಗುತ್ತದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು ಹೆಚ್ಚಿನ ವಿವರ, ಷರತ್ತು ಮತ್ತು ನಿಬಂಧನೆಗಳ ಬಗ್ಗೆ ಹಾಗೂ ನಿಗಧಿತ ನಮೂನೆಯ ಅರ್ಜಿಯನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 1ನೇ ಮಹಡಿ. ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಮುಚ್ಚಿದ ಲಕೋಟೆಯಲ್ಲಿ ಅಕ್ಟೋಬರ್ 10 ರೊಳಗೆ ಸಲ್ಲಿಸಬಹುದು. ಅವಧಿ ಮೀರಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9353567367 ಗೆ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಆರ್. ವೆಂಕಟೇಶರೆಡ್ಡಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ನಗರಸಭೆ ಕಚೇರಿ ಸೇರಿ ಜಿಲ್ಲೆಯ 5 ಕಡೆ ಲೋಕಾಯುಕ್ತ ದಾಳಿ

**ಕೊಪ್ಪಳ:** ಇಲ್ಲಿನ ನಗರಸಭೆ ಕಚೇರಿ ಸೇರಿ ಐದು ಕಡೆ ಜಿಲ್ಲೆಯಲ್ಲಿ ಇಂದು ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಭ್ರಷ್ಟಾಚಾರದ ಆರೋಪ ಹಾಗೂ ವಿವಿಧ ದೂರಿನ ಹಿನ್ನೆಲೆ ದಾಳಿ ನಡೆಸಿರುವುದಾಗಿ ಮೂಲಗಳು ತಿಳಿಸಿವೆ.

ಕೊಪ್ಪಳದ ನಗರಸಭೆ ಕಚೇರಿ, ನಗರಸಭೆ ಜೆಇ ಸೋಮಲಿಂಗಪ್ಪ, ಕಂದಾಯ ನಿರೀಕ್ಷಕ ಉಜ್ವಲ್, ಗುತ್ತಿಗೆದಾರರಾದ ಶಕೀಲ್ ಪಟೇಲ್,

ಪ್ರವೀಣ ಕಂದಾರಿ ಮನೆಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಲೋಕಾಯುಕ್ತ ಡಿವೈಎಸ್ಪಿ ವಸಂತಕುಮಾರ್,ಇನ್ಸ್ಪೆಕ್ಟರ್ ವಿಜಯಕುಮಾರ್,

ಚಂದ್ರಪ್ಪ, ನಾಗರತ್ನ, ಶೈಲಾ, ಅಮರೇಶ ಹುಬ್ಬಳ್ಳಿ ಸೇರಿಸಿಬ್ಬಂದಿ ಐದು ತಂಡಗಳು ಏಕ ಕಾಲದಲ್ಲಿ ದಾಳಿ ನಡೆಸಿದೆ. ನಗದುಹಣ ,ಚಿನ್ನಾಭರಣ




ಸೇರಿ ಹಲವು ಆಸ್ತಿ ದಾಖಲೆ ಪತ್ತೆಯಾಗಿದ್ದು,ಕೆಲವು ಕಚೇರಿಯ ಕಡತ ಮತ್ತು ಹಣಕಾಸಿನ ವ್ಯವಹಾರದ ಡೈರಿ ವಶಕ್ಕೆ ಪಡೆಯಲಾಗಿದೆ.

## 9 ಮತ್ತು 11ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ


**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ 8ನೇ ಮತ್ತು 10ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಜವಾಹರ್ ನವೋದಯ ವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ವರ್ಷಕ್ಕೆ 9 ಮತ್ತು 11ನೇ ತರಗತಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸೆಪ್ಟೆಂಬರ್ 23 ರೊಳಗೆ ಸಲ್ಲಿಸಬಹುದೆಂದು ಏನಿಗದಲೆ ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶನ ಹುಂಡಿಯಲ್ಲಿ ವಿದೇಶಿ ಕರೆನ್ಸಿ ಪತ್ತೆ

**ಚಿಕ್ಕಮಗಳೂರು;** ಇಲ್ಲಿನ ಶ್ರೀ ಗಣಪತಿ ಸೇವಾ ಸಮಿತಿ ಬೋಳರಾಮೇಶ್ವರ ದೇವಸ್ಥಾನದ ಆವರಣದಲ್ಲಿ ಪ್ರತಿಷ್ಠಾಪಿಸಿರುವ ದೊಡ್ಡ ಗಣಪತಿಗೆ ಭಕ್ತರು ವಿದೇಶಿ ಕರೆನ್ಸಿಗಳನ್ನು ಅರ್ಪಿಸಿದ್ದಾರೆ.

ಭಕ್ತರು ಹಣ, ಚಿನ್ನ, ಬೆಳ್ಳಿ ನಾಣ್ಯಗಳನ್ನು ಅರ್ಪಣೆ ಮಾಡುವುದು ಸರ್ವೆ ಸಾಧಾರಣವಾದರೂ ಈ ಬಾರಿ ಹುಂಡಿಯಲ್ಲಿ ವಿದೇಶಿ ಕರೆನ್ಸಿಗಳನ್ನು ಹಾಕಿರುವುದು ವಿಶೇಷ.

ಭಕ್ತರೊಬ್ಬರು ಯುನೈಟೆಡ್ ಎಮಿರೇಟ್‌ನ 50 ದೀನರ್ ಹುಂಡಿಗೆ ಹಾಕಿದ್ದಾರೆ ಭಾರತದಲ್ಲಿ ಇದರ ಬೆಲೆ 1200 ರೂಪಾಯಿಗಳು. ಹಾಗೆಯೇ ಶ್ರೀಲಂಕಾ ದೇಶದ ರೂಪಿ ಕೂಡ ಹಾಕಲಾಗಿದ್ದು 20 ರೂಪಿ ಎರಡು ನೋಟುಗಳು ಹಾಗೂ 50 ರೂಪಿ ಎರಡು ನೋಟುಗಳು ಹುಂಡಿಯಲ್ಲಿ ಸಿಕ್ಕಿದೆ. ಶ್ರೀಲಂಕಾದ ರೂಪಿಗೆ ಭಾರತದಲ್ಲಿ ಕಡಿಮೆ ಬೆಲೆ. ವಿದೇಶಿ ನೋಟುಗಳನ್ನು ಬ್ಯಾಂಕಿಗೆ ನೀಡಿ ಭಾರತದ ನೋಟುಗಳಾಗಿ ಪರಿವರ್ತಿಸಿಕೊಳ್ಳಲಾಗುವುದು ಎಂದು ಸೇವಾ ಸಮಿತಿಯ ಅಧ್ಯಕ್ಷ ಸಿ.ಎಸ್ ಕುಬೇರ ತಿಳಿಸಿದ್ದಾರೆ.



ಈಗಾಗಲೇ ಎರಡು ಬಾರಿ ಹುಂಡಿ ಎಣಿಕೆ ಮಾಡಿದ್ದು ಯಾವುದೇ ಚಿನ್ನ ಹಾಗೂ ಬೆಳ್ಳಿಯ ವಸ್ತುಗಳು ಬಂದಿಲ್ಲ. ಕೇವಲ ಹಣವನ್ನು ಮಾತ್ರ ಹುಂಡಿಗೆ ಹಾಕಿದ್ದಾರೆ. ಸೆ.7ರಂದು ಹುಂಡಿ ಎಣಿಕೆಯಲ್ಲಿ 68,224 ರೂ.ಸಂಗ್ರಹವಾದರೆ ನಿನ್ನೆಯ ಹುಂಡಿ ಎಣಿಕೆಯಲ್ಲಿ 86,424 ರೂ. ಸಂಗ್ರಹವಾಗಿದೆ ಎಂದು ಹೇಳಿದ್ದಾರೆ.

ಚಲಾವಣೆಯಲ್ಲಿ ಇಲ್ಲದ 25 ಪೈಸೆ 50 ಪೈಸೆ ಕಾಯಿನ್‌ಗಳು ಕೂಡ ಹುಂಡಿಯಲ್ಲಿ ಸಂಗ್ರಹವಾಗಿದೆ. ಸಂಗ್ರಹವಾದ ಹಣವನ್ನು ಧಾರ್ಮಿಕ ಕಾರ್ಯಕ್ರಮಗಳಿಗೆ ಬಳಸಲಾಗುವುದು ಎಂದು ತಿಳಿಸಿದ್ದಾರೆ.

# 17 ರಂದು ಪದ್ಮಭೂಷಣ ಪುಟ್ಟರಾಜರ 15 ನೇ ಪುಣ್ಯಾರಾಧನೆ

**ಗದಗ :** ಗಾನ ಗಂಧರ್ವ ಕಲಾ ಟ್ರಸ್ಟ್ (ರಿ). ಗದಗ– ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು ಸಹಕಾರದೊಂದಿಗೆ ಸೆ .17 ರಂದು ಸಂಜೆ 6 ಗಂಟೆಗೆ ವಿವೇಕಾನಂದ ಬಡಾವಣೆಯ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ನಡೆಯಲಿದೆ.

ಪೂಜ್ಯ. ಪುಟ್ಟರಾಜ ಗವಾಯಿಗಳವರ 15ನೇ ಪುಣ್ಯಾರಾಧನೆ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ 2ನೇ ವಾರ್ಷಿಕೋತ್ಸವದ ದಿವ್ಯ ಸಾನಿಧ್ಯವನ್ನು .ಮ. ನಿ. ಪ್ರ. ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹಠಯೋಗಿ ಕೊಟ್ಟೂರೇಶ್ವರ ಮಠ, ಸುಕ್ಷೇತ್ರ ಹರ್ಲಾಪುರ ನಡೆಯಲಿದೆ.

ಮುಂಡರಗಿ ಬ್ರಹನ್ಮಠದ ಡಾ. ವೀರೇಶ್ವರ ಶರಣರ ಸಮ್ಮುಖದಲ್ಲಿ ಗಾನಗಂಧರ್ವ ಕಲಾ ಟ್ರಸ್ಟ್ ಬಿ. ಎಂ. ಪಂಚಾಕ್ಷರಿ ಅಧ್ಯಕ್ಷ ಇವರ ಅಧ್ಯಕ್ಷತೆ ವಹಿಸುವರು.

ರಾಜೀವ ಗಾಂಧಿ ನಗರ ಪೊಲೀಸ್ ಠಾಣೆಯ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪಿ ಎಸ್ ಐ . ಮಾರುತಿ. ಎಸ್. ಜೋಗದಂಡಕರ ಕಾರ್ಯಕ್ರಮ ಉದ್ಘಾಟನೆ ಮಾಡಲ್ಲಿದ್ದಾರೆ.

ಕಾರ್ಯಕ್ರಮದ ಅತಿಥಿಗಗಳಾಗಿ ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ, ಡಾ. ಬಸವರಾಜ ಬಳ್ಳಾರಿ. ಗಣ್ಯ ವರ್ತಕ
ಶರಣಪ್ಪ,ಸಂಗಪ್ಪ ಗುಡಿಮನಿ, ನವರತ್ನ ಜ್ಯೂವೆಲರ್ಸ್ ಮಾಲೀಕ ಸಿದ್ದಲಿಂಗೇಶ ಮುರಶಿಳ್ಳಿನ ಆಗಮಿಸುವರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಉಮೇಶ ಸಿ. ಕಪ್ಪತ್ತನವರ, ಶ ದ್ರುವಕುಮಾರ ಬಸಪ್ಪ ಮೆಣಸಿನಕಾಯಿ, ಅಂಬಾದಾಸ ಜಮಾದಾರರಿಗೆ ಸನ್ಮಾನ ನಡೆಯಲಿದೆ.

ಹೊಸಪೇಟೆ ಗುಂಡಿಭಾರತ ಗಾಯನ,ಪುಟ್ಟರಾಜೇಶ ಗುತ್ತರಗಿ. ಪುಣೆಯವರಿಂದ ತಬಲಾ ಹಾಗೂ ಹಾರ್ಮೋನಿಯಂ ಸೇವೆ, ಗದಗ ಹರ್ಷತ್ ಕುಮಾರ್ ಸ್ವರನಮನ ಕಾರ್ಯಕ್ರಮ ನಡೆಸಿಕೊಡುವರು. ಗದಗ ಹರ್ಷತ್ ಕುಮಾರ್ ಎಂ. ಕಲಕಂಬಿ ಭರತನಾಟ್ಯ, ನಾದಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ಹಾಡು – ನೃತ್ಯಗಳ ಪ್ರದರ್ಶನ ನಡೆಯಲಿದೆ ಎಂದು ಗಾನಗಂಧರ್ವ ಕಲಾಟ್ರಸ್ಟ್ ಕಾರ್ಯದರ್ಶಿ ಸಿದ್ದಲಿಂಗಯ್ಯ ಶಾಸ್ತ್ರಿ ಎಸ್. ಗಡ್ಡದಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.24–26 ಜಿಲ್ಲೆಯಲ್ಲಿ ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ

**ಚಿಕ್ಕಮಗಳೂರು:** ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪಲೋಕಾಯುಕ್ತರಾದ ಶ್ರೀ ಕೆ.ಎನ್. ಫಣೀಂದ್ರ ಅವರು ಸೆಪ್ಟಂಬರ್ 24 ರಿಂದ 26 ರವರೆಗೆ ಚಿಕ್ಕಮಗಳೂರು ಜಿಲ್ಲಾ ಪ್ರವಾಸ ಕೈಗೊಂಡು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಈ ಪ್ರವಾಸದ ಅವಧಿಯಲ್ಲಿ ಸೆಪ್ಟಂಬರ್ 24 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆಯನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ಪ್ರಕಾರ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದಲ್ಲಿ ಅಥವಾ ಅಧಿಕಾರಿ, ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ಯಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದ ಸಾರ್ವಜನಿಕರು ಗೌರವಾನ್ವಿತರ ಮುಂದೆ ತಮ್ಮ ಅಹವಾಲುಗಳನ್ನು ಅರ್ಜಿ ನಮೂನೆ–1 ಮತ್ತು ನಮೂನೆ–2 ರಲ್ಲಿ ಲಿಖಿತ ರೂಪದಲ್ಲಿ ದಾಖಲೆ, ಸಾಕ್ಷಾಧಾರಗಳೊಂದಿಗೆ ಸಲ್ಲಿಸಬಹುದು.

ಸೆಪ್ಟಂಬರ್ 25 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ (ಗೌರವಾನ್ವಿತ ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ) ತನಿಖೆ, ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ಪ್ರಕಾರ ವಿಚಾರಣೆ ನಡೆಸುತ್ತಾರೆ. ಈ ಹಿನ್ನೆಲೆಯಲ್ಲಿ ದೂರುದಾರರು ಮತ್ತು ಎದುರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ಈ ಮೂಲಕ ತಿಳಿಸಿದೆ.

ಶಿವಮೊಗ್ಗ ನಾರಾಯಣ ಸೂಪರ್ ಸ್ಪೇಷಾಲಿಟಿ ಕ್ಲಿನಿಕ್‌ನಲ್ಲಿ

# ಉಚಿತ ಇಸಿಜಿ ತಪಾಸಣೆ

**ಶಿವಮೊಗ್ಗ:** ನಗರದ ಸಹ್ಯಾದ್ರಿ ನಾರಾಯಣ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆಯು ಕುವೆಂಪು ರಸ್ತೆಯಲ್ಲಿರುವ ನಾರಾಯಣ ಸೂಪರ್ ಸ್ಪೇಷಾಲಿಟಿ ಕ್ಲಿನಿಕ್‌ನಲ್ಲಿ ಸೆಪ್ಟೆಂಬರ್ 17, 2025ರಂದು ಬೆಳಿಗ್ಗೆ 8 ಗಂಟೆಯಿಂದ ಉಚಿತ ಇಸಿಜಿ ತಪಾಸಣೆಯನ್ನು ನಡೆಸಲಿದೆ.

ಭಾರತದ ಪ್ರಮುಖ ಆರೋಗ್ಯ ಸೇವಾ ಸಂಸ್ಥೆಯಾದ ನಾರಾಯಣ ಹೆಲ್ತ್, ಸರ್ಕಾರದ 'ಸ್ವಸ್ಥ ನಾರಿ, ಸಶಕ್ತ ಕುಟುಂಬ ಅಭಿಯಾನ'ಕ್ಕೆ ಬೆಂಬಲವಾಗಿ ಮಹಿಳೆಯರಿಗಾಗಿ ಉಚಿತ ಇಸಿಜಿ ತಪಾಸಣಾ ಶಿಬಿರಗಳನ್ನು ಆಯೋಜಿಸಿದೆ. ಶಿವಮೊಗ್ಗದ ಸಹ್ಯಾದ್ರಿ ನಾರಾಯಣ ಮಲ್ಟಿ–ಸ್ಪೆಷಾಲಿಟಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಶ್ರೀ ವರ್ಗಿಸ್ ಪಿ ಜಾನ್ ಅವರು ಮಹಿಳೆಯರು ಈ ಶಿಬಿರದ ಸದುಪಯೋಗ ಪಡಿಸಿಕೊಳ್ಳುವಂತೆ ವಿನಂತಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: 98864–13131ಅಥವಾ ಭೇಟಿ ನೀಡಿ: https://www.narayanahealth.org/

# ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ವಿಶ್ವಕರ್ಮ ಮಹಾಸಭಾ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಸೆ.17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಶ್ರೀ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದು, ಶಿವಮೊಗ್ಗ ನಗರ ಕ್ಷೇತ್ರ ಶಾಸಕರಾದ ಎಸ್.ಎನ್.ಚನ್ನಬಸಪ್ಪ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನಸಭೆ ಹಾಗೂ ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರ ಅಧ್ಯಕ್ಷರುಗಳು, ಜಿಲ್ಲಾ ವಿಶ್ವಕರ್ಮ ಮಹಾಸಭಾ ಅಧ್ಯಕ್ಷರು, ಕಾಳಿಕಾ ಪರಮೇಶ್ವರಿ ದೇವಸ್ಥಾನ ಸಮಿತಿಯ ಅಧ್ಯಕ್ಷರು, ಜಿಲ್ಲಾಧಿಕಾರಿ, ಜಿ.ಪಂ ಸಿಇಓ, ಪೊಲೀಸ್ ಅಧೀಕ್ಷಕರು, ಮಹಾನಗರ ಪಾಲಿಕೆ ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯ ನಿರ್ದೇಶಕರು ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ರಾಷ್ಟ್ರೀ ಯ ವಿಶ್ವಕರ್ಮ ವಂಶಿ ಸೇನೆಯ ಜಿಲ್ಲಾಧ್ಯಕ್ಷರಾದ ಪಿ.ಜಿ. ಅನಿತಲಕ್ಷ್ಮೀ ಆಚಾರ್ಯ ವಿಶೇಷ ಉಪನ್ಯಾಸ ನೀಡುವರು.

## ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಪ್ರಗತಿ ಪರಿಶೀಲನೆ

# ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಪರಿಹಾರ ನೀಡಿ : ಸಿ.ಎನ್.ಶ್ರೀಧರ್



**ಗದಗ :** ಜಿಲ್ಲೆಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಎಂಬ ವಿನೂತನ ಕಾರ್ಯಕ್ರಮವನ್ನು ಅಗಸ್ಟ 15 ರಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಚಾಲನೆ ನೀಡಿದ್ದಾರೆ. ಪ್ರಭುವಿನೆಡೆಗೆ ಪ್ರಭುತ್ವದಲ್ಲಿ ಬರುವ ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಪರಿಹಾರ ನೀಡುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಜರುಗಿದ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಶಿಷ್ಟ ವಿನೂತನ ಕಾರ್ಯಕ್ರಮ ಪ್ರಭುವಿನೆಡೆಗೆ ಕಾರ್ಯಕ್ರಮವಾಗಿದೆ. ಜಿಲ್ಲಾ ಕ್ರೀಡಾಂಗಣ ಸೇರಿದಂತೆ ನಗರದಲ್ಲಿ ಮೂರು ಕಡೆ ಪ್ರ.ಪ್ರ. ಯಂತ್ರ ಅಳವಡಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಈ ಯಂತ್ರದ ಮೂಲಕ ಬಟನ್ ಒತ್ತಿ ಹೇಳಿಕೊಳ್ಳುವ ಮೂಲಕ ಶೀಘ್ರ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಲಿದೆ ಎಂದರು.

ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಮೇಲ್ವಿಚಾರಣೆಗಾಗಿ ಈಗಾಗಲೇ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ.ಕಂಬಾಳಿಮಠ ಅವರನ್ನು ಕಾರ್ಯಕ್ರಮದ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿಲಾಗಿದ್ದು ಅವರು ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಮೇಲುಸ್ತುವಾರಿ ಮಾಡಲಿದ್ದಾರೆ.

ಎಲ್ಲ ಇಲಾಖೆ ಅಧಿಕಾರಿಗಳು ಪ್ರ.ಪ್ರ ದಲ್ಲಿ ದಾಖಲಾದ ದೂರುಗಳಿಗೆ ಪರಿಹಾರ ನೀಡಿ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ದಾಖಲೆಗಳೊಂದಿಗೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಆರಂಭಿಕವಾಗಿ 10 ಅಂಶಗಳನ್ನು ಒಳಗೊಂಡಂತೆ ಸಾರ್ವಜನಿಕರು ದೂರುಗಳನ್ನು ಸಲ್ಲಿಸಲು ಅವಕಾಶ ಒದಗಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ಸಹಾಯ, ತುರ್ತು ವೈದ್ಯಕೀಯ ಸೇವೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತೆ ಕ್ರಮ, ಕಾನೂನು ಬಾಹಿರ ಹಾಗೂ ಸಾಮಾಜಿಕ ವಿದ್ರೋಹ ಚಟುವಟಿಕೆ ವಿರುದ್ಧ ಕ್ರಮ, ಜಮೀನು ಹಕ್ಕು ಪತ್ರ , ಪಿಂಚಣಿ ವಿಷಯಗಳಿಗೆ ಸಂಬಂಧಿಸಿದಂತೆ ಮತ್ತು ಪಂಚಾಯತಿಗಳ ಕೆಲ ಸಮಸ್ಯೆಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ. ಸಂಬಂಧಿತ ಇಲಾಖಾಧಿಕಾರಿಗಳು ದೂರು ಅಥವಾ ಸಮಸ್ಯೆ ದಾಖಲಾದ ತಕ್ಷಣ ಅದರ ಪರಿಹಾರಕ್ಕೆ ಕಾರ್ಯ ಪವೃತ್ತರಾಗಬೇಕು. ಯಾವುದೇ ಕಾರಣಕ್ಕೂ ವಿಳಂಬಕ್ಕೆ ಆಸ್ಪದ ಇಲ್ಲ. ಬೇಜವಾಬ್ದಾರಿ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಅನಿವಾರ್ಯ ಎಂದು ಜಿಲ್ಲಾಧಿಕಾರಿ ಶ್ರೀಧರ್ ಅವರು ಎಚ್ಚರಿಸಿದರು.

ಹಾರಿಕೆ ಉತ್ತರಕ್ಕೆ ಅವಕಾಶವಿಲ್ಲ. ದೂರಿಗೆ ಪರಿಹಾರ ಇಲ್ಲದಿದ್ದಲ್ಲಿ ಸಕಾರಣದೊಂದಿಗೆ ಉತ್ತರ ನೀಡುವುದು. ಮುಂದಿನ ದಿನಮಾನಗಳಲ್ಲಿ ಮಾಸಿಕವಾಗಿ ಪ್ರಗತಿ ನಡೆಸಲಾಗುವುದು.

ಇಲಾಖಾ ಮುಖ್ಯಸ್ಥರೇ ಸಭೆಗೆ ಹಾಜರಾಗಬೇಕು.

ಜೊತೆಗೆ ಜಿಲ್ಲಾ ನೋಡಲ್ ಅಧಿಕಾರಿಗೆ ಪ್ರಗತಿ ವರದಿಯನ್ನು ಸಭೆಗೂ ಮುಂಚಿತವಾಗಿ ಸಲ್ಲಿಸಬೇಕು. ಈ ಎಲ್ಲ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಪ್ರ.ಪ್ರ. ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಮಹಾತ್ವಾಕಾಂಕ್ಷಿ ಕಾರ್ಯಕ್ರಮ ಇದಾಗಿದ್ದು ಆಡಳಿತ ವ್ಯವಸ್ಥೆ ಚುರುಕುಗೊಳಿಸಲು ಹಾಗೂ ಸಾರ್ವಜನಿಕರಿಗೆ ತ್ವರಿತವಾಗಿ ಸಮಸ್ಯೆಗೆ ಪರಿಹಾರ ಒದಗಿಸಲು ಪ್ರ.ಪ್ರ. ಜಾರಿಗೊಳಿಸಲಾಗಿದೆ. ಇದರ ಯಶಸ್ಸಿಗೆ ಅಧಿಕಾರಿ ವರ್ಗ ಶ್ರಮ ವಹಿಸಿ ಕಾರ್ಯನಿರ್ವಹಿಸಬೇಕು, ನಿರ್ಲಕ್ಷ, ವಿಳಂಬ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ಅನಿವಾರ್ಯ ಎಂಬ ಸೂಚನೆಯನ್ನು ಜಿಲ್ಲಾಧಿಕಾರಿಗಳ ಸಭೆಯಲ್ಲಿ ಸ್ಪಷ್ಟಪಡಿಸಿದರು.

ಜಿಲ್ಲಾ ನೋಡಲ್ ಅಧಿಕಾರಿ ಎ.ಎ.ಕಂಬಾಳಿಮಠ ಮಾತನಾಡಿ ಪ್ರ.ಪ್ರ. ಕಾರ್ಯಕ್ರಮ ಜಾರಿ ಆರಂಭದಿಂದ ಈವರೆಗೆ ಒಟ್ಟು 13 ಸಮಸ್ಯೆ/ ದೂರು ದಾಖಲಾಗಿದ್ದು ಸಂಬಂಧಿತ ಇಲಾಖೆಗಳಿಗೆ ಪರಿಹಾರಕ್ಕೆ ಸೂಚಿಸಲಾಗಿದೆ. ಶಿಕ್ಷಣ ಇಲಾಖೆ , ಲೋಕೋಪಯೋಗಿ ಇಲಾಖೆ , ನಗರಸಭೆ, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಾರ್ವಜನಿಕರು ಸಮಸ್ಯೆಗಳನ್ನು ತಿಳಿಸಿದ್ದು ಶೀಘ್ರ ಪರಿಹಾರ ದೊರಕಿಸಿ ವರದಿ ನೀಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಆಹಾರ ಇಲಾಖೆ ಉಪನಿರ್ದೇಶಕ ರಮೇಶ, ಡಿಡಿಎಲ್ ಆರ್ ರುದ್ರಣ್ಣಗೌಡ,ಜಿ.ಜೆ, ಡಿಡಿಪಿಐ ಆರ್. ಎಸ್.ಬುರುಡಿ, ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ , ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಶ್ರೀಮತಿ ವಸ್ತ್ರದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಪತಿ ಕೊಂದ ಪತ್ನಿ– ಆಕೆ ಪ್ರಿಯಕರನಿಗೆ ಜೀವಾವಧಿ ಶಿಕ್ಷೆ


**ಚಿಕ್ಕಮಗಳೂರು:** ಪತಿಯನ್ನು ಹತ್ಯೆಗೈದ ಆರೋಪದಲ್ಲಿ ಪತ್ನಿ ಹಾಗೂ ಆಕೆಯ ಪ್ರಿಯಕರನಿಗೆ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಕಠಿಣ ಜೀವಾವಧಿ ಶಿಕ್ಷೆ ಹಾಗೂ 60 ಸಾವಿರ ರೂ.ಗಳ ದಂಡ ವಿಧಿಸಿ ತೀರ್ಪು ನೀಡಿದೆ.

ಸಖರಾಯಪಟ್ಟಣ ಸಮೀಪದ ದೊಡ್ಡಿಹಟ್ಟಿಯಲ್ಲಿ ಹುಲಿಕೆರೆ ವಾಸಿ ಪ್ರದೀಪ ಪತ್ನಿ ರಾಗಿಣಿ, ಇಬ್ಬರು ಮಕ್ಕಳೊಂದಿಗೆ ವಾಸವಾಗಿದ್ದ. ಶ್ರೀನಿವಾಸ ಎಂಬಾತನೊಂದಿಗೆ ಪ್ರದೀಪ ಗಾರೆ ಕೆಲಸ ಮಾಡಿಕೊಂಡಿದ್ದ. ಈ ನಡುವೆ ಶ್ರೀನಿವಾಸನಿಗೆ ರಾಗಿಣಿಯ ಪರಿಚಯವಾಗಿದ್ದು, ಇಬ್ಬರ ನಡುವೆ ಅನೈತಿಕ ಸಂಬಂಧ ಬೆಳೆದಿತ್ತೆನ್ನಲಾಗಿದೆ.

ಈ ವಿಚಾರ ಪ್ರದೀಪನಿಗೆ ಗೊತ್ತಾದ ಬಳಿಕ ಪ್ರದೀಪ ಗಲಾಟೆ ಮಾಡಿ ಅಡ್ಡಿಯಾಗಿದ್ದ. ಈ ಹಿನ್ನೆಲೆಯಲ್ಲಿ ರಾಗಿಣಿ ಹಾಗೂ ಶ್ರೀನಿವಾಸ ಸೇರಿ ಪ್ರದೀಪನನ್ನು ಮುಗಿಸಲು ಸಂಚು ರೂಪಿಸಿದ್ದರು. 2020ರ ನವೆಂಬರ್ 20 ರಂದು ಸಂಜೆ 7.30ರ ಸುಮಾರಿಗೆ ಮಕ್ಕಳನ್ನು ಪಕ್ಕದ ಮನೆಗೆ ಟಿ.ವಿ. ನೋಡಲು ಕಳುಹಿಸಲಾಗಿತ್ತು. ರಾತ್ರಿ 9.30ರ ಸುಮಾರಿಗೆ ರಾಗಿಣಿ, ಶ್ರೀನಿವಾಸ ಪ್ರದೀಪ ಮಾತನಾಡುತ್ತಾ ಕುಳಿತಿದ್ದರೆನ್ನಲಾಗಿದೆ. ಈ ಸಂದರ್ಭದಲ್ಲಿ ರಾಗಿಣಿ ಹಾಗೂ ಶ್ರೀನಿವಾಸ್ ಸೇರಿ ವೇಲ್‌ನಿಂದ ಪ್ರದೀಪನ ಕುತ್ತಿಗೆ ಬಿಗಿದಿದ್ದು, ಕೇವಲ ಐದು–ಹತ್ತು ನಿಮಿಷಗಳಲ್ಲಿ ಆತ ಸಾವಿಗೀಡಾಗಿದ್ದ ಎಂದು ಹೇಳಲಾಗಿದೆ.

ಸ್ಥಳದಲ್ಲಿ ಬಿದ್ದಿದ್ದ ರಕ್ತವನ್ನು ಪ್ರದೀಪ ಧರಿಸಿದ್ದ ಬಟ್ಟೆ ಹಾಗೂ ಮನೆಯಲ್ಲಿದ್ದ ಇನ್ನೊಂದು ಬಟ್ಟೆಯನ್ನು ಬಳಸಿ ಒರೆಸಿದ್ದು, ಪ್ರದೀಪನ ಸಾವನ್ನು ಸಹಜವೆಂದು ಬಿಂಬಿಸಲು ಪ್ರಯತ್ನಿಸಿ, ಶವವನ್ನು ಕೊಠಡಿಯ ಮಂಚದ ಮೇಲೆ ಮಲಗಿಸಿದ್ದರು. ಬಳಿಕ ಆತನನ್ನು ಹತ್ಯೆ ಮಾಡಲು ಬಳಸಿದ ಬಟ್ಟೆಗಳನ್ನು ಶ್ರೀನಿವಾಸ ಚೆಟ್ಟಿಪಾಳ್ಯ ಗೇಟ್‌ನ ಕೂಡುಹಳ್ಳಿ ಸೇತುವೆ ಕೆಳಕ್ಕೆ ಎಸೆದಿದ್ದ ಎನ್ನಲಾಗಿದೆ. ಈ ಬಗ್ಗೆ ದೂರು ದೊರೆತ ಹಿನ್ನೆಲೆಯಲ್ಲಿ ಅಂದಿನ ಕಡೂರು ಪೊಲೀಸ್ ವೃತ್ತ ನಿರೀಕ್ಷಕ ಡಿ.ಎಸ್.ಮಂಜುನಾಥ್ ಅವರು, ಕೊಲೆ ಪ್ರಕರಣ ದಾಖಲಿಸಿ, ತನಿಖೆ ಕೈಗೊಂಡು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.ಈ ಬಗ್ಗೆ ವಿಚಾರಣೆ ನಡೆಯುತ್ತಿದ್ದ ಸಂದರ್ಭ ಕಡೂರು ಪೊಲೀಸ್ ವೃತ್ತ ಕಚೇರಿಯ ಎಎಸ್‌ಐ ದೇವೇಂದ್ರಕುಮಾರ್ ಅವರು ನ್ಯಾಯಾಲಯಕ್ಕೆ ಸಾಕ್ಷಿದಾರರನ್ನು ಹಾಜರುಪಡಿಸುವಲ್ಲಿ ಯಶಸ್ವಿಯಾಗಿದ್ದರು. ಈ ಬಗ್ಗೆ ವಿಚಾರಣೆ ನಡೆಸಿದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ಸಿ.ಭಾನುಮತಿ ಅವರು, ಇಬ್ಬರು ಆರೋಪಿಗಳಿಗೆ ಭಾರತೀಯ ದಂಡ ಸಂಹಿತೆ ಕಲಂ 302 ಐಪಿಸಿ ಪ್ರಕಾರ ಕಠಿಣ ಜೀವಾವಧಿ ಶಿಕ್ಷೆ ಹಾಗೂ 60 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ದಂಡ ತೆರಲು ತಪ್ಪಿದಲ್ಲಿ ಮತ್ತೆ 6 ತಿಂಗಳು ಶಿಕ್ಷೆ ಅನುಭವಿಸುವಂತೆಯೂ ತೀರ್ಪಿನಲ್ಲಿ ತಿಳಿಸಲಾಗಿದೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ಹೆಚ್.ಎಸ್.ಲೋಹಿತಾಶ್ವಾಚಾರ್ ವಾದ ಮಂಡಿಸಿದ್ದರು.

# ದೇಶಭಕ್ತಿ ಮತ್ತು ದೈವ ಭಕ್ತಿಯನ್ನು ಜನರಲ್ಲಿ ಮೂಡಿಸುವುದೇ ಗಣೇಶೋತ್ಸವದ ಉದ್ದೇಶ



**ಚಿಕ್ಕಮಗಳೂರು:** ದೇಶಭಕ್ತಿ ಮತ್ತು ದೈವಭಕ್ತಿಯನ್ನುಜನರಲ್ಲಿ ಮೂಡಿಸುವುದೇಗಣೇಶೋತ್ಸವದಉದ್ದೇಶಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಹೇಳಿದರು.

ಅವರುಇಂದು ನಗರದ ರಾಮನಹಳ್ಳಿ ಬಡಾವಣೆಯಲ್ಲಿ ಫ್ಲವರ್ ಬಾಯ್ಸ್ ವತಿಯಿಂದಏರ್ಪಡಿಸಲಾಗಿದ್ದ 26ನೇ ವರ್ಷದಗಣೇಶೋತ್ಸವ ಮೆರವಣಿಗೆಗೆ ಚಾಲನೆ ನೀಡಿಜಿಲ್ಲೆಯಲ್ಲಿ ಪ್ರಥಮವಾಗಿಅದ್ದೂರಿರಥ ಸಿದ್ಧಪಡಿಸಿ ವಿಜೃಂಭಣೆಯಿಂದಆಚರಿಸುತ್ತಿರುವುದು ಶ್ಲಾಘನೀಯಎಂದರು.

ಜಾತೀಯತೆ ಮತ್ತುಅಸ್ಪೃಶ್ಯತೆಗೆಜಾಗಇಲ್ಲದಂತೆ ನೋಡಿಕೊಳ್ಳುವುದು ಗುರಿಯಾಗಿದ್ದು, ನಾವೆಲ್ಲಾ ಹಿಂದೂ ಬಂಧು ಎಂಬ ಮನೋಭಾವ ಬೆಳೆಸಬೇಕೆಂಬುದು ಗಣೇಶೋತ್ಸವಆಚರಣೆಯಉದ್ದೇಶಎಂದರು.

ರಾಮನಹಳ್ಳಿಯಲ್ಲಿ ಆಯೋಜಿಸಿರುವ ಗಣೇಶೋತ್ಸವದೈವಭಕ್ತಿಜೊತೆಗೆದೇಶಭಕ್ತಿಜೋಡಿಸುವ ಪ್ರತೀಕವಾಗಿದೆ. ಜಾತೀಯತೆ, ಅಸ್ಪೃಶ್ಯತೆದೂರಮಾಡಿ, ನಾವೆಲ್ಲಾ ಹಿಂದೂ ಬಂಧುತ್ವ ಭಾವನೆ ಬೆಳೆಯಲು ಗಟ್ಟಿಗೊಳಿಸಲಿ ಎಂದು ಶುಭಹಾರೈಸಿದರು.

ಅರ್ಜುನನ ನೇತೃತ್ವದಲ್ಲಿಅಭಿಮನ್ಯುಎಲ್ಲಾ ಸವಾಲುಗಳನ್ನು ಎದುರಿಸಿದ್ದು ಇತಿಹಾಸವಾಗಿದ್ದು, ಅದೇರೀತಿ ಹಿಂದೂ ಸಮಾಜಕ್ಕೆ ಬರುವ ಸವಾಲು ಮತ್ತುದೇಶಕ್ಕೆ ಬರುವ ಸವಾಲನ್ನು ಎದುರಿಸಿ ಜಯಶಾಲಿಯಾಗಲಿ ಎಂದು ಹೇಳಿದರು.

ಹೂವಾಡಿಗರ ಸಮುದಾಯ ಭವನ ನಿರ್ಮಾಣಕ್ಕೆತನು, ಮನ, ಧನ ನೀಡಿ ಸಹಕರಿಸಿ ಬೆಂಬಲಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಫ್ಲವರ್ ಬಾಯ್ಸ್‌ಯುವಕರ ಬಳಗದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರುಅತೀ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿ



**ಶಿವಮೊಗ್ಗ:** ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರ ಕಚೇರಿ,ಶಿವಮೊಗ್ಗ ಮತ್ತು ಶಿವಮೊಗ್ಗ ಜಿಲ್ಲಾ ಅಮೆಚೂರ್ ಬಾಕ್ಸಿಂಗ್ ಅಸೋಸಿಯೇಷನ್ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ 14/ 17 ವರ್ಷ ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಜಿಲ್ಲಾ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿಯನ್ನು ಶಿವಮೊಗ್ಗದ ನೆಹರು ಒಳಾಂಗಣ ಕ್ರೀಡಾಂಗಣದಲ್ಲಿ ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಕಾಳಾನಾಯ್ಕ ಉದ್ಘಾಟಿಸಿದರು ಈ ಸಂದರ್ಭದಲ್ಲಿ ಕಾರ್ಯದರ್ಶಿ ಮಹೇಶ್ ಉಲ್ಲತ್ತಿ ಶಿವಮೊಗ್ಗ ಜಿಲ್ಲಾ ಅಮೆಚೂರು ಬಾಕ್ಸಿಂಗ್ ಅಸೋಸಿಯೇಷನ್ ಅಧ್ಯಕ್ಷ ಶಿವಮೊಗ್ಗ ವಿನೋದ್ ಕಾರ್ಯದರ್ಶಿ ಮೀನಾಕ್ಷಿ ತೀರ್ಪುಗಾರರಾದ ಹರ್ಷಿತ್ ಪ್ರೀತಿ ಶ್ರೀ ಮತ್ತು ಬಾಕ್ಸಿಂಗ್ ಕೋಚ್ ಕಾವ್ಯ ಶ್ರೀಹರ್ಷ ಉಪಸ್ಥಿತರಿದ್ದರು

# ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಕ್ರೀಡಾಕೂಟ ಉದ್ಘಾಟನೆ



**ಚಿಕ್ಕಮಗಳೂರು;** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸೆಪ್ಟಂಬರ್ 16 ರಂದು ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ನಡೆಯಲಿವೆ.

ಬೆಳಿಗ್ಗೆ 10.30ಕ್ಕೆ ಕೆಂಪನಹಳ್ಳಿಯ ಆಶಾಕಿರಣ ಅಂಧ ಮಕ್ಕಳ ವಸತಿಯುತ ಪಾಠಶಾಲೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ ವೈ.ಆಲದಾರ್ತಿ ವಹಿಸಲಿದ್ದು, ಆಶಾಕಿರಣ ಅಂಧ ಮಕ್ಕಳ ವಸತಿಯುತ ಪಾಠಶಾಲೆಯ ಅಧ್ಯಕ್ಷ ಡಾ.ಜೆ.ಪಿ.ಕೃಷ್ಣೇಗೌಡ ಕ್ರೀಡಾ ಸ್ಪರ್ಧೆಗಳನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್. ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ, ಕನಕರಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಅರಳಗುಪ್ಪೆ ಮಲ್ಲೇಗೌಡ ಜಿಲ್ಲಾ ಆಸ್ಪತ್ರೆಯ ಸರ್ಜನ್ ಡಾ.ಚಂದ್ರಶೇಖರ್, ನಿವೃತ್ತ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎ.ಗೋಪಾಲಕೃಷ್ಣ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ವೀರಭದ್ರಯ್ಯ ಮಾಜಿಗೌಡ್ರ, ಮುಂತಾದವರು ಭಾಗವಹಿಸುವರು.

ವಯೋಮಿತಿ ಆಧಾರದ ಮೇಲೆ ಗುಂಪುಗಳಾಗಿ ವಿಂಗಡಿಸಿ ಪ್ರತಿ ಗುಂಪಿನಲ್ಲಿ ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳನ್ನು ಹಮ್ಮಿಕೊಂಡಿದ್ದು, ಕ್ರೀಡಾ ಸ್ಪರ್ಧೆಗಳಲ್ಲಿ 60 ರಿಂದ 70 ವರ್ಷದವರಿಗೆ ಸಂಗೀತ ಕುರ್ಚಿ, 60 ರಿಂದ 69 ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರಿಗೆ ಪ್ರತ್ಯೇಕವಾಗಿ ಬಿರುಸಿನ ನಡಿಗೆ, 60 ರಿಂದ 69 ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರಿಗೆ ಪ್ರತ್ಯೇಕವಾಗಿ ಬಕೆಟ್‌ನಲ್ಲಿ ಬಾಲ್ ಎಸೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸಾಂಸ್ಕೃತಿಕ ವಿಭಾಗದಲ್ಲಿ 60 ರಿಂದ 69 ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರಿಗೆ ಪ್ರತ್ಯೇಕವಾಗಿ ಗಾಯನ ಸ್ಪರ್ಧೆ ಹಾಗೂ ಏಕಪಾತ್ರಾಭಿನಯ ಸ್ಪರ್ಧೆಗಳನ್ನು ಪ್ರತ್ಯೇಕವಾಗಿ ನಡೆಸಲಾಗುತ್ತಿದೆ. ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ತಮ್ಮ ವಯಸ್ಸಿನ ದಾಖಲೆಯನ್ನು ಕಡ್ಡಾಯವಾಗಿ ತರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಅಖಿಲ ಭಾರತ ಪದ್ಮಶಾಲಿ ಸಂಘದ ಕಾರ್ಯದರ್ಶಿಯಾಗಿ ಅವ್ವಾರ್ ಮಂಜುನಾಥ್ ನೇಮಕ



**ಬಳ್ಳಾರಿ:** ಅಖಿಲ ಭಾರತ ಪದ್ಮಶಾಲಿ ಸಂಘದ ನೂತನ ಕಾರ್ಯದರ್ಶಿಯಾಗಿ ಬಳ್ಳಾರಿಯ ಅವ್ವಾರು ಮಂಜುನಾಥ್ ಅವರು ನೇಮಕಗೊಂಡಿದ್ದಾರೆ.

ಅಖಿಲ ಭಾರತ ಪದ್ಮಶಾಲಿ ಸಂಘದ ಅಧ್ಯಕ್ಷರಾದ ಕಂದಗಟ್ಲ ಸ್ವಾಮಿ ಪದ್ಮಶಾಲಿ ಅವರು ಅವ್ವಾರು ಮಂಜುನಾಥ್ ಪದ್ಮಶಾಲಿ ಅವರನ್ನು ನೇಮಕ ಮಾಡಿ ಆದೇಶ ಜಾರಿ ಮಾಡಿದ್ದಾರೆ.

ಅವ್ವಾರು ಮಂಜುನಾಥ್ ಪದ್ಮಶಾಲಿ ಅವರು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾಗಿ – ಹಾಗೂ ಬಳ್ಳಾರಿ ಜಿಲ್ಲೆ ಪದ್ಮಶಾಲಿ ಸಂಘದ ಅಧ್ಯಕ್ಷರಾಗಿ–ವಿವಿಧ ಸಂಘ – ಸಂಸ್ಥೆಗಳ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ.

# ಸೌಹಾರ್ದ ಸಂಸ್ಥೆಗಳ ಕಪಿಮುಷ್ಟಿಗೆ ರಾಜ್ಯ ಸರ್ಕಾರ ಯತ್ನ



**ಚಿಕ್ಕಮಗಳೂರು :** ಸೌಹಾರ್ದ ಸಹಕಾರಿ ಸಂಸ್ಥೆಗಳನ್ನು ತನ್ನ ಕಪಿಮುಷ್ಟಿಯಲ್ಲಿಟ್ಟುಕೊಳ್ಳಲು ರಾಜ್ಯಸರ್ಕಾರ ಯತ್ನಿಸುತ್ತಿದೆ ಎಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ.ನಂಜನಗೌಡ ಆಪಾದಿಸಿದರು.

ನಗರದ ಎಂಎಲ್‌ವಿ ಸಭಾಂಗಣದಲ್ಲಿ ದೈವಜ್ಞ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ರಜತಮಹೋತ್ಸವ ಹಾಗೂ ಸೌಹಾರ್ದ ಸಹಕಾರಿ ಕಾರ್ಯಕ್ರಮವನ್ನು ಭಾನುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ಸರ್ಕಾರ ಸಹಕಾರಿ ಕಾಯ್ದೆಗೆ ಅನೇಕ ಮಾರಕ ತಿದ್ದುಪಡಿಯನ್ನು ಇತ್ತೀಚೆಗೆ ಅಂಗೀಕರಿಸಿದೆ. ಸೌಹಾರ್ದ ಕ್ಷೇತ್ರ ಉಳಿಸುವುದೇ ಕಷ್ಟಕರವೆಂಬ ಪರಿಸ್ಥಿತಿ ನಿರ್ಮಾಣಗೊಂಡಿದೆ. ಇದರ ವಿರುದ್ಧ ಹೋರಾಟವನ್ನು ಸಾರ್ವತ್ರಿಕವಾಗಿ ಹಾಗೂ ನ್ಯಾಯಾಲಯದಲ್ಲಿ ನಡೆಸಲಾಗುವುದೆಂದ ನಂಜನಗೌಡ, ರಾಜ್ಯದಲ್ಲಿರುವ ಸುಮಾರು ಆರೂವರೆಸಾವಿರ ಸೌಹಾರ್ದ ಸಹಕಾರಿ ಸಂಸ್ಥೆಗಳ ರಕ್ಷಣೆ–ಉಳಿವು–ಬೆಳವಣಿಗಾಗಿ ಎಲ್ಲ ಸಹಕಾರಿಗಳೂ ಸರ್ಕಾರದ ಮೇಲೆ ಒತ್ತಡ ತರಬೇಕಾಗಿದೆ ಎಂದು ಅವರು ಕರೆ ನೀಡಿದರು.

ಸಹಕಾರಿ ಸಂಸ್ಥೆಗಳನ್ನು ಸಂಗ್ರಹಿಸಿದ ಠೇವಣಿಯ ಶೇ.20ರಷ್ಟು ಮೊತ್ತವನ್ನು ಆಪದ್ಧನವಾಗಿ ಹೂಡಿಕೆ ಮಾಡುವ ಪರಿಪಾಠವಿದೆ. ಈ ಎಸ್‌ಎಸ್‌ಆರ್‌ಎಫ್ ಮೊಬಲಗನ್ನು ಡಿಸಿಸಿ ಬ್ಯಾಂಕ್, ಅಪೆಕ್ಸ್ ಸೇರಿದಂತೆ ಸಹಕಾರಿ ಬ್ಯಾಂಕ್‌ಗಳಲ್ಲಿ ಇರಿಸುವುದು ಕಡ್ಡಾಯ ಮಾಡಲಾಗಿದೆ. ಈ ಹಿಂದೆ ರಾಷ್ಟ್ರೀಕೃತ ಬ್ಯಾಂಕ್‌ನಲ್ಲೂ ಹೂಡಿಕೆ ಮಾಡಲಾಗುತ್ತಿತ್ತು. ಪ್ರಸ್ತುತ ತಿದ್ದುಪಡಿ ಅನ್ವಯ ಪೂರ್ವಾನುಮತಿ ಅಗತ್ಯ. ಸರ್ಕಾರಿ ಇಲಾಖೆಯ ಅನುಮತಿ ಎಂದರೆ ಹೇಗೆ–ಏನೆಂಬುದು ಎಲ್ಲರಿಗೂ ಅರಿವಿದೆ. ರಾಜ್ಯದ 21ಡಿಸಿಸಿ ಬ್ಯಾಂಕ್‌ಗಳಲ್ಲಿ 5–6ಮಾತ್ರ ಸುಸ್ಥಿತಿಯಲ್ಲಿದ್ದು, ಉಳಿದೆಲ್ಲವೂ ನಮ್ಮ ಹಣವನ್ನು ನಮ್ಮ ಕಾಲಮಿತಿಯೊಳಗೆ ನೀಡುವ ಸಾಮರ್ಥ್ಯ ಹೊಂದಿಲ್ಲ.

ಸಹಕಾರಿ ಸಂಸ್ಥೆಗಳ ನಿರ್ದೇಶಕರು ಪ್ರತಿವರ್ಷ ತಮ್ಮ ಆಸ್ತಿ ಆದಾಯ ವೆಚ್ಚವನ್ನು ಘೋಷಣೆ ಮಾಡಿಕೊಳ್ಳುವುದು ಕಡ್ಡಾಯಗೊಳಿಸಲಾಗಿದೆ. ವಾಸ್ತವವಾಗಿ ಶಾಸನಸಭಾ ಚುನಾಯಿತ ಪ್ರತಿನಿಧಿಗಳಿಗೆ ಘೋಷಣೆ ಕಡ್ಡಾಯವಾಗಿದ್ದರೂ ಶೇ.100ರಷ್ಟು ಪಾಲನೆಯಾಗುತ್ತಿಲ್ಲ. ಸಹಕಾರಿ ಸಂಸ್ಥೆಯ ಯಾವೊಬ್ಬ ಸದಸ್ಯ ವಿವಿಧ ಕಾರಣಗಳಿಗೆ ಘೋಷಣೆ ಮಾಡದಿದ್ದರೆ ಅದನ್ನೆ ನೆಪವಾಗಿ ಇಡೀ ಸಂಸ್ಥೆಯನ್ನೆ ಆಹುತಿ ಪಡೆಯುವ ಅವಕಾಶ ಸರ್ಕಾರ ಪಡೆಯಲಿದೆ ಎಂದರು.

ಸಾಮಾಜಿಕ ಮತ್ತು ಆರ್ಥಿಕ ಸಮಾನತೆ ಸಹಕಾರಿ ತತ್ತ್ವವಾಗಿದೆ. ಈಗಾಗಲೇ ಎಲ್ಲ ಸಹಕಾರಿ ಸಂಸ್ಥಗಳಲ್ಲೂ ಮಹಿಳೆ, ಪರಿಶಿಷ್ಟ ವರ್ಗ ಸೇರಿದಂತೆ ಮೀಸಲಾತಿ ನಿರ್ದೇಶಕ ಸ್ಥಾನಗಳಿಗೆ ಜಾರಿಯಲ್ಲಿದೆ. ಆದರೆ ಸಂಸ್ಥೆಗಳನ್ನು ಪ್ರತಿನಿಧಿಸುವ ಸ್ಥಾನಗಳಿಗೂ ಮೀಸಲಾತಿ ಎಷ್ಟು ಸೂಕ್ತ ಎಂಬುದು ಚರ್ಚಾಸ್ಪದ ಎಂದ ನಂಜನಗೌಡ, ಸೌಹಾರ್ದ ಸಹಕಾರಿಗೆ ಮಾರಕವಾದ ತಿದ್ದುಪಡಿಗಳನ್ನು ಸರ್ಕಾರ ಕೂಡಲೇ ಹಿಂಪಡೆಯಬೇಕೆಂದು ಒತ್ತಾಯಿಸಿದರು.

ದೈವಜ್ಞ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷೆ ಶಾಲಿನಿರಾಯ್ಕರ್ ಸಮಾರಂಭದ ಅಧ್ಯಕ್ಷತೆವಹಿಸಿ ಮಾತನಾಡಿ ಕಳೆದ 13ವರ್ಷಗಳಿಂದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲು ಅವಕಾಶ ನೀಡಲಾಗಿದೆ. ಪ್ರಸಕ್ತಸಾಲಿನಲ್ಲಿ 13ಲಕ್ಷರೂ. ಲಾಭವಾಗಿದ್ದು, ಷೇರುದಾರರಿಗೆ ಶೇ.12ರ ಲಾಭಾಂಶ ವಿತರಿಸಲು ಇಂದು ಬೆಳಗ್ಗೆ ನಡೆದ ಸರ್ವಸದಸ್ಯರ ಮಹಾಸಭೆಯಲ್ಲಿ ತೀರ್ಮಾನಕೈಗೊಳ್ಳಲಾಗಿದೆ ಎಂದರು.

ದೈವಜ್ಞ ಸೊಸೈಟಿಯ ಉಪಾಧ್ಯಕ್ಷ ಎಚ್.ಕೆ.ಸುರೇಶಶೇಟ್, ನಿರ್ದೇಶಕರುಗಳಾದ ಕೆ.ವಿ.ಮಹೇಂದ್ರ, ತಾರಾಮತಿ, ದೀಪಾಪ್ರಕಾಶ, ವಿ.ರಮೇಶ್, ಸುಧೀರ್, ಬಿ.ಜಿ.ಪ್ರಕಾಶ್, ಆನಂದ, ಶ್ರೀಧರ್, ಸಲಹೆಗಾರ ಅಶೋಕ ಆರ್. ರಾಯ್ಕರ್, ಸಿಇಓ ಕೆ.ಎಸ್.ರಮೇಶ್ ಸೇರಿದಂತೆ ಆಡಳಿತ ಮಂಡಳಿಯನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಯಿತು.

ಸಲಹೆಗಾರ ಅಶೋಕ್‌ರಾಯ್ಕರ್ ಸ್ವಾಗತಿಸಿ, 400ಜನರ 4ಲಕ್ಷರೂ.ದಿಂದ ಪ್ರಾರಂಭಗೊಂಡ ಸೊಸೈಟಿಯಲ್ಲಿ ಇಂದು 900ಕ್ಕೂ ಹೆಚ್ಚು ಸದಸ್ಯರಿದ್ದು ಸುಮಾರು 44ಕೋಟಿ ರೂ.ಗಳ ವ್ಯವಹಾರ ನಡೆಸುವ ಹಂತಕ್ಕೆ ಬೆಳೆದಿದೆ. ಶೇ.90ರಷ್ಟು ವಸೂಲಾತಿ ಸಾಧಿಸಿರುವುದು ಹೆಮ್ಮೆಯ ಸಂಗತಿ ಎಂದರು.

ರಜತಮಹೋತ್ಸವದ ಅಂಗವಾಗಿ ಸಂಘದ ಹಿಂದಿನ ಅಧ್ಯಕ್ಷರಾಗಿ ಸೇವೆಸಲ್ಲಿಸಿದ್ದ ರಾಮಸುಬ್ರಾಯಶೇಟ್, ನಾಗರಾಜ್ ಮತ್ತು ಅಣ್ಣಪ್ಪ ಎಂ.ಕುಡಾಲ್ಕರ್, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಇಂದ್ರೇಶ್, ಗುರುಪ್ರಸಾದ್, ರಾಜು, ಲಕ್ಷ್ಮಣಾಚಾರ್, ಮಂಜುನಾಥ್, ರಾಘವೇಂದ್ರ, ಪತ್ರಕರ್ತ ಪ್ರಭುಲಿಂಗಶಾಸ್ತ್ರಿ ಮತ್ತಿತರರನ್ನು ಮುಖ್ಯಅತಿಥಿಗಳೊಂದಿಗೆ ಸನ್ಮಾನಿಸಲಾಯಿತು. ಲತಾಸುಧೀರ್ ಪ್ರಾರ್ಥಿಸಿ, ನಿರ್ದೇಶಕ ಶ್ರೀಕಾಂತ ವಂದಿಸಿದರು. ಸಹಕಾರಿ ಯೂನಿಯನ್‌ನ ಇಂದ್ರೇಶ್ ನಿರೂಪಿಸಿದರು.

# ನಾಳೆ ಮರಾಠ ಸಮಾಜದ ಅಮೂಲ್ಯ ಸಭೆ

## ಸರ್ವರೂ ಆಗಮಿಸಲು ಲಗಾನ್ ಸತ್ಯನಾರಾಯಣರಾವ್ ಮನವಿ



**ಶಿವಮೊಗ್ಗ:** ಪ್ರಸಕ್ತ ಸೆ. 22 ರಿಂದ ನಡೆಯುತ್ತಿರುವ ಸಾಮಾಜಿಕ ಶೈಕ್ಷಣಿಕ ಹಾಗೂ ಜಾತಿ ಸಮೀಕ್ಷೆಯಲ್ಲಿ ಮರಾಠ ಸಮುದಾಯವು 16, 17 ಹಾಗೂ 18ರ ಅಂಕಣದಲ್ಲಿ ಯಾವ ರೀತಿ ಭರ್ತಿ ಮಾಡಬೇಕು. ಈ ಸಮಾಜ 2ಎ ಗೆ ಹೋಗಲು ಯಾವ ನಿಲುವು ಕೈಗೊಳ್ಳಬೇಕು ಎಂಬುದರ ಬಗ್ಗೆ ಮಹತ್ತರವಾದ ನಿರ್ಧಾರ ಕೈಗೊಳ್ಳಲು ಸೆಪ್ಟೆಂಬರ್ 16ರ ನಾಳೆ ಬೆಳಿಗ್ಗೆ 11 ಗಂಟೆಗೆ ಶಿವಮೊಗ್ಗದ ಲಗನ ಕಲ್ಯಾಣ ಮಂದಿರದಲ್ಲಿ ಅಮೂಲ್ಯ ಸಭೆಯನ್ನು ಆಯೋಜಿಸಲಾಗಿದೆ ಎಂದು ಸಮಾಜದ ಪ್ರಮುಖರು, ನಗರಸಭೆ ಮಾಜಿ ಅಧ್ಯಕ್ಷರೂ ಆದ ಎಲ್. ಸತ್ಯನಾರಾಯಣರಾವ್ ತಿಳಿಸಿದ್ದಾರೆ.

ರಾಜ್ಯಾದ್ಯಂತ ಹೊಸದಾಗಿ ನಡೆಸುತ್ತಿರುವ ಸಮೀಕ್ಷೆ ಬಗ್ಗೆ ರಾಜ್ಯಾದ್ಯಂತ ಸಮಾಜದವರು ಜಾತಿ ಗಣತಿ ಅರ್ಜಿ ನಮೂನೆ ಯಲ್ಲಿ ಕಾಲಂ 16,17,18, ರಲ್ಲಿ ನಾವುಗಳು ಏನು ನಮೂದಿಸಿದರೆ ಸರ್ಕಾರದ ಹೆಚ್ಚು ಸವಲತ್ತುಗಳನ್ನು ಪಡೆಯಲು ಸಾಧ್ಯ ಎಂಬುದು ನಿರ್ಧಾರವಾಗಬೇಕಿದೆ. ನಾವುಗಳು 2ಎ ಗೆ ಹೋಗೋಕೆ ಯಾವ ನಿಲುವು ಕೈಗೊಳ್ಳಬೇಕೆಂದು ಬೆಂಗಳೂರು ನಗರದಲ್ಲಿ ಸಮಾಜದ ಹಿರಿಯರು ಮಾಜಿ ಸಚಿವರಾದ ಪಿ.ಜಿ.ಅರ್. ಸಿಂಧ್ಯಾ ರವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿತ್ತು ಎಂದಿದ್ದಾರೆ.

ಈ ಸಭೆಯಲ್ಲಿ ಸಚಿವರಾದ ಸಂತೋಷ್ ಲಾಡ್, ಹಾನಗಲ್ ಶಾಸಕರಾದ ಶ್ರೀನಿವಾಸ್ ಮಾನೆ, ವಿಧಾನ ಪರಿಷತ್ ಸದಸ್ಯರಾದ ಎಂ ಜಿ. ಮೂಳೆ, ರಾಜ್ಯದ ಸಮಾಜದ ಎಲ್ಲಾ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು ಜಿಲ್ಲಾ ಮುಖಂಡರುಗಳು ಭಾಗವಹಿಸಿದ್ದರು. ಈ ಸಭೆಯಲ್ಲಿ ಚರ್ಚಿಸಿ ಹಲವು ಮಹತ್ತರ ತೀರ್ಮಾನ ಕೈಗೊಳ್ಳಲಾಗಿದ್ದು ಅದನ್ನು ತಿಳಿಸಲು ಹಾನಗಲ್ ಶಾಸಕರಾದ ಶ್ರೀನಿವಾಸ್ ಮಾನೆಯವರು ಶಿವಮೊಗ್ಗಕ್ಕೆ ನಾಳೆ ಆಗಮಿಸಲಿದ್ದಾರೆಂದು ತಿಳಿಸಿದ್ದಾರೆ.

ನಾಳಿನ ಮಂಗಳವಾರ ಬೆಳಿಗ್ಗೆ 11 ಘಂಟೆಗೆ ಶಿವಮೊಗ್ಗದ ಲಗನಾ ಕಲ್ಯಾಣ ಮಂಟಪದಲ್ಲಿ ಸಭೆಯನ್ನು ಈ ಕರೆಯಲಾಗಿದೆ ಈ ಸಭೆಯಲ್ಲಿ ಭಾಗವಹಿಸಲು ಶಿವಮೊಗ್ಗ ಜಿಲ್ಲೆಯ ಸಮಾಜದ ಬಾಂಧವರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಲು ಎಲ್. ಸತ್ಯನಾರಾಯಣರಾವ್ ಕೋರಿದ್ದಾರೆ.

# ಸೈಕಲ್ ಜಾಥಾಗೆ ಚಾಲನೆ




**ಹಾಸನ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜಕಲ್ಯಾಣಇಲಾಖೆಯ ವತಿಯಿಂದಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಅಂಗವಾಗಿ ಏರ್ಪಡಿಸಲಾಗಿದ್ದ ಸೈಕಲ್‌ಜಾಥಾಕಾರ್ಯಕ್ರಮಕ್ಕೆಜಿಲ್ಲಾಧಿಕಾರಿಗಳ ಕಚೇರಿಆವರಣದಲ್ಲಿಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರಲ್ಲದೆ, ಮಾನ್ಯಜಿಲ್ಲಾಧಿಕಾರಿಅವರು ಸ್ವತಃ ಸೈಕಲ್ ಚಲಾಯಿಸುವ ಮೂಲಕ ನಗರದಲ್ಲಿ ಸಂಚಾರಿಸಿ ನನ್ನ ಮತ ನನ್ನ ಹಕ್ಕು ಎಂಬುದರಕುರಿತುಜಾಗೃತಿ ಮೂಡಿಸಲಾಯಿತು.

ಜಿಲ್ಲಾಧಿಕಾರಿಗಳು ಸೈಕಲ್‌ಜಾಥಾಗೆ ಚಾಲನೆ ನೀಡಿ ಮಾತನಾಡಿಹಾಸನ ಜಿಲ್ಲೆಯ ಸಮಸ್ತ ಜನತೆಗೂ ಪ್ರಜಾಪ್ರಭುತ್ವ ದಿನಾಚರಣೆ ಶುಭಾಶಯಗಳನ್ನು ಕೋರಿದಅವರುಪ್ರಜೆಗಳಿಂದ, ಪ್ರಜೆಗಳಿಗಾಗಿ, ಪ್ರಜೆಗಳಿಗೋಸ್ಕರ ಇರುವ ಪ್ರಜಾಪ್ರಭುತ್ವವನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಮತಚಲಾಯಿಸುವ ಮೂಲಕ ಬಲಪಡಿಸಬೇಕುಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಬಿ.ಆರ್. ಪೂರ್ಣಿಮಾಅವರು ಮಾತನಾಡಿದೇಶವನ್ನುಅಭಿವೃದ್ಧಿರಾಷ್ಟ್ರವನ್ನಾಗಿ ಮುನ್ನೆಡೆಸಲು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತಚಲಾಯಿಸಬೇಕುಎಂದು ತಿಳಿಸಿದರು.

ಕಾರ್ಯಕ್ರಮದ ಪ್ರಾರಂಭದಲ್ಲಿಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿಗೌರವ ಸಲ್ಲಿಸಿದರು.

ಸಮಾಜಕಲ್ಯಾಣ ಇಲಾಖೆ ಉಪ ನಿರ್ದೇಶಕರಾದದೂದ್ ಫಿರ್ ಹಾಗೂ ಮತ್ತಿತರರು ಹಾಜರಿದ್ದರು.

ಸೈಕಲ್‌ಜಾಥಾವು ಜಿಲ್ಲಾಧಿಕಾರಿಗಳ ಕಚೇರಿಯಿಂದ ಪ್ರಾರಂಭಗೊಂಡುಎನ್, ಆರ್, ಸರ್ಕಲ್, ಹೇಮಾವತಿ ಪ್ರತಿಮೆ, ಕಲಾ ಭವನದ ಮೂಲಕ ಸಾಲಗಾಮೆ ರಸ್ತೆ ಮಾರ್ಗವಾಗಿ ವಿಜ್ಞಾನಕಾಲೇಜು ಬಳಿಯಿಂದ ಆರ್.ಸಿ.ರಸ್ತೆ ಮೂಲಕ ಸಾಗಿ ಗಂಧದಕೋಠಿ ಸರ್ಕಲ್ ನಿಂದಅಂಬೇಡ್ಕರ್ ಭವನದಲ್ಲಿ ಪೂರ್ಣಗೊಂಡಿತ್ತು.

# ಸೆ. 18ರಂದು ಜಿಲ್ಲಾ ಮಟ್ಟದ ಈಜು ಸ್ಪರ್ಧೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಶ್ರೀ ರಾಮಕೃಷ್ಣ ವಿದ್ಯಾನಿಕೇತನ, ಗೋಪಾಳ ಇದರ ಸಂಯುಕ್ತಾಶ್ರಯದಲ್ಲಿ 2025 – 26ರ ಸಾಲಿನ 14 ರಿಂದ 17 ವಯೋಮಿತಿಯ ಬಾಲಕ, ಬಾಲಕಿಯರ ಈಜು ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ಗೋಪಾಳದ ರಾಮಕೃಷ್ಣ ವಿದ್ಯಾ ನಿಕೇತನದ ಪಕ್ಕದಲ್ಲಿರುವ ಕ್ರೀಡಾ ಸಂಕೀರ್ಣದ ಈಜು ಕೊಳದಲ್ಲಿ ಈ ಸ್ಪರ್ಧೆ ನಡೆಯುತ್ತಿದ್ದು, ಭಾಗವಹಿಸುವ ಮಕ್ಕಳು ಹಾಜರಾಗುವಂತೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಪ್ರಕಾಶ್ ಕೋರಿದ್ದಾರೆ.ಅಂದು ಬೆಳಗ್ಗೆ 10 ಗಂಟೆಗೆ ಈ ಕಾರ್ಯಕ್ರಮವನ್ನು ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಮಂಜುನಾಥ ಅವರು ಉದ್ಘಾಟಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಮಕೃಷ್ಣ ವಿದ್ಯಾನಿಕೇತನದ ಅಧ್ಯಕ್ಷ ಡಾ. ಡಿ.ಆರ್. ನಾಗೇಶ್ ವಹಿಸಿದ್ದಾರೆ. ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಪ್ರಕಾಶ್, ರಾಮಕೃಷ್ಣ ವಿದ್ಯಾನಿಕೇತನದ ಕಾರ್ಯದರ್ಶಿ ಶೋಭಾ ವೆಂಕಟರಮಣ ಹಾಗೂ ಇತರರು ಪಾಲ್ಗೊಳ್ಳಲಿದ್ದಾರೆ.

ನಿಯಮಗಳು: ಸೆಪ್ಟೆಂಬರ್ 18ರ ಬೆಳಿಗ್ಗೆ 9ಗಂಟೆಯೊಳಗೆ ಈಜುಕೊಳದ ಬಳಿ ಸ್ಪರ್ಧಾಳುಗಳು ಆಗಮಿಸಿ ವರದಿ ಮಾಡಿಕೊಳ್ಳಬೇಕು.ಬೇರೆ ತಾಲೂಕಿನ ಸ್ಪರ್ದಾಳುಗಳು ತಮ್ಮ ತಾಲೂಕಿನ ಟಿ ಓ ಪಿ ಲಾಗಿನ್ ನಲ್ಲಿ ಅಪ್ಲೋಡ್ ಮಾಡಿದ ಎಲಿಜಬಿಲಿಟಿ ಸರ್ಟಿಫಿಕೇಟ್ ಅನ್ನು ಕಡ್ಡಾಯವಾಗಿ ತರತಕ್ಕದ್ದು.

ಎಲ್ಲಾ ಸ್ಪರ್ದಾಳು ಸ್ಪರ್ದಾಳುಗಳು ಕಡ್ಡಾಯವಾಗಿ ಈಜು ಸಮವಸ್ತ್ರವನ್ನು ಧರಿಸಬೇಕು.

# ಹೆಚ್.ಎ.ಎಲ್ ನಲ್ಲಿ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿಆಹ್ವಾನ

ಹಾಸನ: ಹಿಂದೂಸ್ಥಾನ್‌ಏರೋನ್ಯಾಟಿಕ್ಸ (ಲಿ) ಟೆಕ್ನಿಕಲ್‌ಟ್ರೈನಿಂಗ್ ಇನ್ಸ್ಟಿಟ್ಯೂಟ್ ಬೆಂಗಳೂರು–17 ರವರಿಂದ ಫಿಟ್ಟರ್, ಟರ್ನರ್, ಮೇಷಿನಿಷ್ಟ್, ಎಲೆಕ್ಟ್ರೀಷಿಯನ್, ವೆಲ್ಡರ್, ಫೌಂಡ್ರೀ ಮ್ಯಾನ್, ಶೀಟ್ ಮೆಟಲ್ ವರ್ಕರ್, ಟ್ರೇಡ್‌ಕಂಪ್ಯೂಟರ್‌ಆಪರೇಟರ್ ಮತ್ತು ಪ್ರೋಗ್ರಾಮಿಂಗ್ ಅಸಿಸ್ಟೆಂಟ್, ಕಾರ್ ಪೇಂಟರ್, ಟೂಲ್‌ಅಂಡ್‌ಡೈ ಮೇಕರ್, ಸಿಎನ್ ಸಿ ಪ್ರೋಗ್ರಾಮರ್ ಹಾಗೂ ಆಪರೇಟರ್, ಮೆಕಾನಿಕ್‌ರೆಫ್ರೀಜರೇಷನ್ ಮತ್ತುಏರ್‌ಕಂಡೀಷನಿಂಗ್ ಗಳಿಗೆ ಫುಲ್‌ಟರ್ಮ್‌ಅಪ್ರೆಂಟಿಸ್‌ಟ್ರೈನಿಂಗ್‌ತರಬೇತಿ ನೀಡುವವರಿದ್ದು, ಅಸಕ್ತ ಅರ್ಹ ಅಭ್ಯರ್ಥಿಗಳು ಉದ್ಯೋಗಾಧಿಕಾರಿಗಳು, ಜಿಲ್ಲಾಉದ್ಯೋಗ ವಿನಿಮಯಕೇಂದ್ರ. ಹಾಸನ– ರವರನ್ನುಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿದಈ–ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ. ವಿದ್ಯಾರ್ಹತೆ:ಐಟಿಐಟ್ರೇಡ್ ಹೊಂದಿರಬೇಕು, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾVhttps://apprenticeshipindia.gov.in/candidate-registration ನಲ್ಲಿ ನೋಂದಾಯಿಸಿ ಅರ್ಜಿ ನಮೂನೆಯಲ್ಲಿಅಪ್ರೆಂಟಿಸ್ ನೋಂದಣಿ ಸಂಖ್ಯೆ ನಮೂದಿಸುವುದು ಹಾಗೂ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಸ್ಟೈಫಂಡ್( ಸರ್ಕಾರ ನಿಗಧಿಪಡಿಸಿದಂತೆ) ನೀಡಲಾಗುವುದು. ಭರ್ತಿ ಮಾಡಿದಅರ್ಜಿಯನ್ನು ಈ ಕಚೇರಿಗೆ ಸಲ್ಲಿಸಲುಕೊನೆಯ ದಿನಾಂಕ: 30–09–2025 ಅರ್ಜಿಯೊಂದಿಗೆಅಭ್ಯರ್ಥಿಯಇತ್ತೀಚಿನ ಪಾಸ್ ಪೋರ್ಟ ಆಳತೆಯ ಭಾವಚಿತ್ರ ಅಂಟಿಸಿ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಐ.ಟಿ.ಐಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಎನ್.ಟಿ.ಸಿ ಸರ್ಟಿಫೀಕೆಟ್, ಆಧಾರ್‌ಕಾರ್ಡ್ ಮತ್ತು ಪಾನ್‌ಕಾರ್ಡ್‌ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ : ಉದ್ಯೋಗಾಧಿಕಾರಿಗಳು ಜಿಲ್ಲಾಉದ್ಯೋಗ ವಿನಿಮಯಕಚೇರಿ, ಹಾಸನ ರವರನ್ನುಕಚೇರಿ ವೇಳೆಯಲ್ಲಿ ಅಥವಾದೂರವಾಣಿ ಸಂಖ್ಯೆ: 08172–296374 ರಲ್ಲಿ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದಾಗಿದೆಎಂದುಜಿಲ್ಲಾಉದ್ಯೋಗ ವಿನಿಮಯಕಚೇರಿಯಉದ್ಯೋಗಾಧಿಕಾರಿ ತಿಳಿಸಿದ್ದಾರೆ.

## ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

**ಹಾಸನ :** ಹೊಳೆನರಸೀಪುರ ತಾಲ್ಲೂಕು, ಸೆಸ್ಕಾಂ ಹಂಗರಹಳ್ಳಿ ಉಪವಿಭಾಗದದೊಡ್ಡಕುಂಚೇವು ಶಾಖಾ ವ್ಯಾಪ್ತಿಯಲ್ಲಿ ಬರುವ 66/11 ಕೆ.ವಿ ಹಡವನಹಳ್ಳಿ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಫ್6–ಮಾರಶೆಟ್ಟಿಹಳ್ಳಿ ನಿರಂತರಜ್ಯೋತಿ ಮಾರ್ಗವನ್ನುನಿರ್ವಹಣೆಮಾಡಬೇಕಾಗಿರುವುದರಿಂದಸೆ.17 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 06ಗಂಟೆಯವರೆಗೆ ಎಫ್5– ಉಣ್ಣೆನಹಳ್ಳಿ ಐ.ಪಿ, ಎಫ್6– ಮಾರಶೆಟ್ಟಿಹಳ್ಳಿ ಎನ್.ಜೆ.ವೈ ಮತ್ತು ಎಫ್8– ತಟ್ಟೆಕೆರೆ 11 ಕೆ.ವಿ ಮಾರ್ಗಗಳನ್ನು ಮಾರ್ಗ ಮುಕ್ತಕತೆ ಪಡೆಯುವುದರಿಂದಉಣ್ಣೇನಹಳ್ಳಿ, ಕೆ.ಕೆ.ಹೊಸುರು, ಗುಳಿಸಾತೇನಹಳ್ಳಿ, ಮಾರಶೆಟ್ಟಿಹಳ್ಳಿ, ಮಲ್ಲಸಮುದ್ರ, ಕಟ್ಟೆಹೊಸಳ್ಳಿ ಹಾಗೂ ಈ ಗ್ರಾಮಗಳ ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆಎಂದು ಹಂಗರಹಳ್ಳಿ ಸೆಸ್ಕ್‌ನ ಕಾ ಮತ್ತು ಪಾ ಉಪ ವಿಭಾಗದ ಸಹಾಯಕಕಾರ್ಯನಿರ್ವಾಹಕಇಂಜಿನಿಯರ್ ತಿಳಿಸಿದ್ದಾರೆ.

# ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆ



**ಶಿವಮೊಗ್ಗ:** ಸೂಗೂರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಸೂಗೂರಿನ ತುಂಗಭದ್ರ ಪ್ರೌಢಶಾಲೆಯಲ್ಲಿ ನಡೆಯಿತು. ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಪ್ರವೀಣ್ ಬುಳ್ಳಾಪುರ ವಹಿಸಿದ್ದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಶಿವಮೂರ್ತಿ, ನಿರ್ದೇಶಕರಾದ ವೀರೇಶ್ ಕ್ಯಾತನ ಕೊಪ್ಪ, ಪ್ರದೀಪ್, ಶಾಂತಿವೀರಪ್ಪ, ಶಿವಕುಮಾರ್, ಪ್ರದೀಪ್ ಶಿವಪ್ಪ,

ಮಂಜುನಾಥ್, ಕೇಶವ, ಶೃತಿ, ಶೋಭಾ, ಕಾರ್ಯದರ್ಶಿ ಪಂಚಾಕ್ಷರಿ, ಸಿಬ್ಬಂದಿಗಳಾದ ಶಶಿ, ಮಲ್ಲಿಕಾರ್ಜುನ್, ರವಿ ಹಾಗೂ ಕ್ಯಾತನ ಕೊಪ್ಪ ಸೂಗೂರು ಲಿಂಗಪುರ ಗೋರವಿನಕಟ್ಟೆ, ಬಳ್ಳಾಪುರ ಗ್ರಾಮದ ಸರ್ವ ಸದಸ್ಯರು ಭಾಗವಹಿಸಿದರು.

# ಕಲಾವಿದರು ಪ್ರತಿಭೆಯನ್ನುಅಂಜಿಕೆಯಿಲ್ಲದೆ ಪ್ರದರ್ಶಿಸಬೇಕು



**ಚಿಕ್ಕಮಗಳೂರು:** ಕಲಾವಿದರು ತಮ್ಮಲ್ಲಿರುವ ಪ್ರತಿಭೆಯನ್ನುಅಂಜಿಕೆಯಿಲ್ಲದೆ ಪ್ರದರ್ಶಿಸಬೇಕು. ವೇದಿಕೆಗಳನ್ನು ಸದುಪಯೋಗಪಡಿಸಿಕೊಂಡು ಆತ್ಮಸ್ಥೈರ್ಯದಿಂದ ಮುಂದೆ ಬರಬೇಕುಎಂದು ಮಿಸೆಸ್‌ಇಂಡಿಯಾ ಪ್ರಶಸ್ತಿ ಪುರಸ್ಕೃತರಾದಡಾ.ಪ್ರತಿಭಾ ಸಾಲಿಯಾನ್ ಹೇಳಿದರು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ರಾಜ್ಯಮಟ್ಟದ ವಿ.ಕೆ.ರಘು ವಾಯ್ಸ್‌ಆಫ್ ನೇಚರ್ ಸಂಗೀತಗಾಯನಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಹುತೇಕಕಲಾವಿದರಿಗೆ ಅವಕಾಶಗಳು ದೊರೆಯುವುದು ವಿರಳ.ಇಲ್ಲಿನ ವಾಯ್ಸ್‌ಆಫ್ ನೇಚರ್‌ಇಂತಹಎಲೆಮರೆಕಾಯಿಯಂತಿರುವಕಲಾವಿದರನ್ನು ಪ್ರೋತ್ಸಾಹಿಸುವ ಉದ್ದೇಶದಿಂದರಾಜ್ಯಮಟ್ಟದಗಾಯನಕಾರ್ಯಕ್ರಮ ಹಮ್ಮಿಕೊಂಡಿರುವುದು ವಿಶೇಷ. ದನಿಯಿದ್ದವರಿಗೆಇದೊಂದು ಸುವರ್ಣ ಅವಕಾಶ. ಇಲ್ಲಿ ಅರಳಿದ ಕಲಾವಿದರ ಪಯಣರಾಜ್ಯಮಟ್ಟದವರೆಗೂ ಸಾಗಲಿ ಎಂದು ಹಾರೈಸಿದರು.

ಮೇಘಮಾಲೆ ಚಲನಚಿತ್ರದ ನಾಯಕ ನಟ ಸುನಾದ್‌ರಾಜ್ ಮಾತನಾಡಿ, ತಮ್ಮಲ್ಲಿರುವಕಲೆಯನ್ನು ಸಾರ್ವಜನಿಕವಾಗಿ ಪ್ರದರ್ಶಿಸಿದರೆ ನಮ್ಮ ಮನಸ್ಸು ಅರಳುತ್ತದೆ.ವೀಕ್ಷಕರಿಗೂ ಮುದ ನೀಡುತ್ತದೆ.ಸಂಗೀತಎಂತಹವರನ್ನೂ ಮಂತ್ರ ಮುಗ್ಧರನ್ನಾಗಿಸುತ್ತದೆಎಂದರು.

ಸಿನೆಮಾ ನಿರ್ದೇಶಕಅಶೋಕ್‌ಕಡಬ ಮಾತನಾಡಿ, ಎಲ್ಲರಲ್ಲೂಒಂದಲ್ಲಒಂದು ಪ್ರತಿಭೆಇದ್ದೇಇರುತ್ತದೆ.ಅಂತಹ ಪ್ರತಿಭೆಯನ್ನು ಹೊರತರಲುಇಂತಹ ಕಾರ್ಯಕ್ರಮಗಳು ಸಹಕಾರಿಎಂದರು.

ಕಾರ್ಯಕ್ರಮದಆಯೋಜಕ ವಕೀಲ, ನೋಟರಿ, ಕಲಾವಿದ ವಿ.ಕೆ.ರಘು ಮಾತನಾಡಿ ಶುಭಹಾರೈಸಿದರು.ಬೆಂಗಳೂರು, ಮಂಗಳೂರು, ಕಾರವಾರ, ಮೈಸೂರು, ಹಾಸನ ಮತ್ತಿತರೆಜಿಲ್ಲೆಯಿದ 100 ಕ್ಕೂ ಹೆಚ್ಚು ಕಲಾವಿದರು ಆಗಮಿಸಿದ್ದರು. ಮೂಡಿಗೆರೆ ಪೂರ್ಣಚಂದ್ರ ತೇಜಸ್ವಿ ಜಾನಪದಕಲಾವಿದರತಂಡಜಾನಪದ ಗೀತಗಳ ಮೂಲಕ ಜನಮನ ಸೆಳೆಯಿತು.

ಕನ್ನಡ ಸಾಹಿತ್ಯ ಪರಿಷತ್‌ತಾಲೂಕುಅಧ್ಯಕ್ಷ ಮಾವಿನಕೆರೆದಯಾನಂದ್, ಕಲಾವಿದ ಎ.ಎನ್. ಮೂರ್ತಿ,

ಜಯರಾಂ ಮತ್ತಿತರರಿದ್ದರು. ಕಲಾವಿದರಾದ ಬಕ್ಕಿ ಮಂಜುನಾಥ, ಸ್ವಾಮಿ ಸೋಮಶೇಖರ, ಮೂರ್ತಿ, ಹರೀಶ್, ವಿರೂಪಾಕ್ಷ, ನಿರ್ಮಾಪಕ ಮಾದೇಶ್, ಸಿನೆಮಾ ಕೆಮೆರಾಮನ್ ಸಿದ್ದು, ಪ್ರತಿಭಾ ಸಾಲಿಯಾನ್ ಮತ್ತಿತರರನ್ನುಗೌರವಿಸಲಾಯಿತು.ವಾಗಡಿ ವಿರೂಪಾಕ್ಷ ನಿರೂಪಣೆ ಮಾಡಿದರು.

# ಮಕ್ಕಳ ಬೆಳವಣಿಗೆಗೆ ಪೋಷಕರ ಪಾತ್ರ ಮಹತ್ವ




**ಶಿವಮೊಗ್ಗ :** ಮಕ್ಕಳ ಬೆಳವಣಿಗೆಗೆ ಮತ್ತು ವಿಕಾಸದಲ್ಲಿ ಪೋಷಕರ ಪಾತ್ರ ಮಹತ್ವ ಎಂದು ಮಕ್ಕಳ ಸಮಾಲೋಚನಗಾರರಾದ ಡಾ. ಐಶ್ವರ್ಯ ಹೇಳಿದರು.

ಅವರು ನಗರದ ಡೆಲ್ಲಿ ವರ್ಡ್ ಶಾಲೆಯಲ್ಲಿ ಆಯೋಜಿಸಿದ್ದ ಪೋಷಕರ ಕೇಂದ್ರ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಬದಲಾದ ಸಾಮಾಜಿಕ ಹಾಗೂ ಶೈಕ್ಷಣಿಕ ವ್ಯವಸ್ಥೆಯಿಂದಾಗಿ ಮಕ್ಕಳು, ವಿದ್ಯಾರ್ಥಿಗಳು ನಾನಾ ಕಾರಣಗಳಿಂದ ಒತ್ತಡಕ್ಕೆ ಸಿಲುಕುತ್ತಿದ್ದು, ಸಮಸ್ಯೆ ಎದುರಿಸುವ ಮನೋಧೈರ್ಯವಿಲ್ಲದೇ ದುಡುಕು ತೀರ್ಮಾನ ಕೈಗೊಳ್ಳುವುದು ಹೆಚ್ಚಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಪೋಷಕರೇ ಮಕ್ಕಳ ಮೇಲೆ ಓದುವಿಕೆಯ ಒತ್ತಡ ಹೇರುವುದು ಸಲ್ಲದು. ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಮತ್ತು ಅದೋಪತನಕ್ಕೆ ಪೋಷಕರೇ ಕಾರಣ. ಮಕ್ಕಳ ಮೇಲಿನ ಅತಿಯಾದ ಪ್ರೀತಿ ಮಕ್ಕಳನ್ನು ದಾರಿ ತಪ್ಪಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲೆ ದಿವ್ಯ ಶೆಟ್ಟಿಯವರು ಮಾತನಾಡಿ ಮಕ್ಕಳಲ್ಲಿ ಮೊಬೈಲ್ ಗೀಳನ್ನು ತಪ್ಪಿಸಿ ಕಲಿಕೆಯ ಉತ್ಸಾಹ ಹೆಚ್ಚಿಸಿ ಎಂದು ಪೋಷಕರಿಗೆ ಹೇಳಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಆಂಥೋನಿ ಕ್ಲೈಂಟೇನ್, ಸಹನಾ, ಶಾಲೆಯ ಶಿಕ್ಷಕರು, ಪೋಷಕರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಲ್ಲಾಕ್ಷೇತ್ರದಲ್ಲಿ ಪ್ರಜೆಗಳ ಭಾಗವಹಿಸುವಿಕೆ ಸಂಕೇತ ಪ್ರಜಾಪ್ರಭುತ್ವ : ಶ್ರೇಯಸ್ ಪಟೇಲ್

**ಹಾಸನ :** ಪ್ರಜೆಗಳುಇಂದುಎಲ್ಲಾಕ್ಷೇತ್ರದಲ್ಲಿ,ರಂಗದಲ್ಲಿಯೂಭಾಗವಹಿಸುತ್ತಿರುವುದರ ಸಂಕೇತ ಪ್ರಜಾಪ್ರಭುತ್ವವಾಗಿದೆ. ನಾವೆಲ್ಲರೂಇಂದುಶಾಸಕರು ಸಂಸದರಾಗಿದ್ದೇವೆಎಂದರೆಅದು ಪ್ರಜಾಪ್ರಭುತ್ವದಅಡಿಯಲ್ಲಿಎಂದು ಸಂಸದರಾದ ಶ್ರೇಯಸ್ ಎಂ ಪಟೇಲ್‌ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜಕಲ್ಯಾಣಇಲಾಖೆಯ ವತಿಯಿಂದನಗರದಡಾ.ಬಿ.ಆರ್‌ಅಂಬೇಡ್ಕರ್ ಭವನದಲ್ಲಿಂದುಆಯೋಜಿಸಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದಅವರುಡಾ.ಬಿ.ಆರ್‌ಅಂಬೇಡ್ಕರ್‌ಅವರಕೊಡುಗೆಯಿಂದ ನಾವೆಲ್ಲರೂಇಂದು ಸ್ವತಂತ್ರರಾಗಿದ್ದೇವೆ. ಸಂವಿಧಾನ ಪುಸ್ತಕವನ್ನು ಪಡೆದುಕೊಳ್ಳುವುದಷ್ಟೇ ಅಲ್ಲದೆಅಂಬೇಡ್ಕರ್‌ಅವರುಅದರಲ್ಲಿ ಹಾಕಿ ಕೊಟ್ಟಿರುವಂತಹ ಅಂಶಗಳನ್ನು ತಿಳಿದುಕೊಳ್ಳುವ ಕೆಲಸ ಮಾಡಬೇಕು. ಜೊತೆಗೆ ಮುಂದಿನ ಪೀಳಿಗೆಗೆ ಅವುಗಳ ಕುರಿತಾಗಿ ಮಾಹಿತಿಯನ್ನು ತಿಳಿಸುವ ಕೆಲಸವನ್ನು ಮಾಡುವಜವಾಬ್ದಾರಿ ಅಧಿಕಾರಿಗಳು,ಚುನಾಯಿತರು,ಅಕ್ಷರಸ್ಥರಾದನಮ್ಮೆಲ್ಲರದುಎಂದರಲ್ಲದೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಶಾಸಕರಾದ ಸ್ವರೂಪ್ ಪ್ರಕಾಶ್‌ಅವರುಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿಸಂವಿಧಾನದಲ್ಲಿಇರುವಕಾರ್ಯಾಂಗ, ಶಾಸಕಾಂಗ, ನ್ಯಾಯಾಂಗಡಾ.ಬಿ.ಆರ್‌ಅಂಬೇಡ್ಕರ್‌ಅವರು ಹಾಕಿ ಕೊಟ್ಟಿರುವಂತಹ ಅಂಶಗಳಾಗಿವೆ. ಚುನಾವಣೆ ಸಂದರ್ಭದಲ್ಲಿರೆಸಾರ್ಟ್ ಹೋಟೆಲ್‌ಗಳಲ್ಲಿ ರಜೆಗಳನ್ನು ನೀಡಬೇಕೆಂದು ಸರ್ಕಾರದಿಂದಆದೇಶ ಬರುತ್ತದೆ. ಆದರೆಜನರು ರಜೆಯನ್ನುತೆಗೆದುಕೊಂಡು ಪ್ರವಾಸ ಮಾಡಲು ಹೋಗುವಂತಹ ಸ್ಥಿತಿಗಳು ಬಂದಿದೆ ಹಾಗಾಗಿ ರಾಷ್ಟ್ರದಕಟ್ಟಕಡೆಯ ವ್ಯಕ್ತಿಗೂ ನಮ್ಮ ಸಂವಿಧಾನದ ಹಕ್ಕುಗಳು ಸೌಲಭ್ಯಗಳು ಸಿಗಬೇಕು ಎಂದು ಹೇಳಿದ್ದಾರೆ.

ಪ್ರಸ್ತುತವಾಗಿಪ್ರಪಂಚದ ವಿವಿಧ ದೇಶಗಳಲ್ಲಿ ರಾಜಕೀಯಅವ್ಯವಸ್ಥೆಗಳನ್ನು ಕಾಣುತ್ತಿದ್ದೇವೆ. ಸಂವಿಧಾನವನ್ನು ರಚಿಸಿರುವ ಡಾ.ಬಿ.ಆರ್‌ಅಂಬೇಡ್ಕರ್‌ಅವರಿಗೆನಾವೆಲ್ಲರೂಗೌರವವನ್ನುಕೊಡುವ ಮೂಲಕ ಸಂವಿಧಾನವನ್ನು ಉಳಿಸಬೇಕು ಮತ್ತುಮುಂದಿನ ಪೀಳಿಗೆಗೆ ಪ್ರಜಾಪ್ರಭುತ್ವದ ಹಕ್ಕುಗಳ ಕುರಿತಾಗಿ ತಿಳಿಸಬೇಕು ಎಂದರು.

ಜಿಲ್ಲಾಧಿಕಾರಿ ಲತಾಕುಮಾರಿಅವರು ಮಾತನಾಡಿ ಪ್ರಜಾಪ್ರಭುತ್ವ ನಮ್ಮದೇಶದ ಜೀವಾಳವಾಗಿದೆ.ಅದು ಸಂವಿಧಾನದ ಮೂಲಕ ನಮಗೆ ದೊರೆತಿದೆ. ಪ್ರತಿಯೊಬ್ಬರು ಆ ಪ್ರಕ್ರಿಯೆಯಲ್ಲಿ ಭಾಗವಹಿಸಿಅದನ್ನು ಮತ ಚಲಾಯಿಸುವ ಮೂಲಕ ಉಳಿಸಬೇಕು. ಮತ ಚಲಾಯಿಸಲು ನಿರ್ಲಕ್ಷ ಮಾಡಬಾರದು. ಪ್ರಜಾಪ್ರಭುತ್ವ ಸದೃಢವಾಗಬೇಕೆಂದರೆ ಪ್ರತಿಯೊಬ್ಬರು ಮತವನ್ನು ಚಲಾಯಿಸಬೇಕು. ಕಡ್ಡಾಯವಾಗಿ ನಾನು ಮತಚಲಾಯಿಸುತ್ತೇನೆ ಮತ್ತು ಪ್ರಜಾಪ್ರಭುತ್ವದ ಪ್ರಕ್ರಿಯೆಯಲ್ಲಿ ಭಾಗವಹಿಸುತ್ತೇನೆಎಂದು ಸಂಕಲ್ಪ ಮಾಡಬೇಕುಎಂದು ತಿಳಿಸಿದರು.

## ಸಾವಿನಲ್ಲೂ ಸಾರ್ಥಕತೆ ಮೆರೆದ ಗಾಯತ್ರಮ್ಮ

**ದಾವಣಗೆರೆ:** ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ತೆಗ್ಗಿನಹಳ್ಳಿ ಗ್ರಾಮದ ನಿವಾಸಿ ದಿವಂಗತ ಬೀರಪ್ಪ ಅವರ ಪತ್ನಿ ಗಾಯತ್ರಮ್ಮ ಮೆದುಳು ನಿಷ್ಕ್ರಿಯೆಗೊಂಡಿದ್ದರಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಸೆಪ್ಟೆಂಬರ್ 12 ರಂದು ಗಾಯತ್ರಮ್ಮ ಮೃತರಾದರು. ಮೃತರ ಚಲನೆ ಇರುವ ದೇಹದ ಉಳಿದ ಭಾಗದ ಅಂಗಾಂಗಳಾದ ಹೃದಯ, ಕಿಡ್ನಿ, ಲಿವರ್, ಶ್ವಾಸಕೋಶ ಮತ್ತು ಎರಡು ಕಣ್ಣಿನ ಪೊರೆಯನ್ನು ಬೆಂಗಳೂರು ಹೆಚ್ ಎಎಲ್ ರಸ್ತೆಯಲ್ಲಿನ ಮಣಿಪಾಲ್ ಆಸ್ಪತ್ರೆಗೆ ದಾನ ಮಾಡುವ ಮೂಲಕ ಸಾವಿನಲ್ಲೂ ಸರ್ಥಕೆ ಮೆರೆದಿದ್ದಾರೆ. ತಾಯಿಯ ನೆನಪಿಗಾಗಿ ಬೇರೆಯವರ ಜೀವ ಉಳಿಸಲು ಅಂಗಾಂಗ ದಾನ ಮಾಡಲು ಅವರ ಮಕ್ಕಳಾದ ಸಂತೋಷ, ಸಂಗೀತ, ಚೈತ್ರಾ, ಪ್ರಶಾಂತ್ ಅವರ ಕರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಅಂಗಾಂಗ ದಾನವು ನಿಯಮಾವಳಿ ರೀತ್ಯಾ ನಡೆಯಲಿದೆ. ಇದೇ ರೀತಿ ಮೃತರಾದವರ ಅಂಗಾಂಗ ದಾನ ಮಾಡುವ ಮೂಲಕ ಜೀವ ಉಳಿಸಲು ಮುಂದಾಗಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

## ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

**ದಾವಣಗೆರೆ:** ಜಿಲ್ಲಾಧಿ ಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ

## ವಿಶ್ವಕರ್ಮ ಜಯಂತಿ

**ದಾವಣಗೆರೆ:** ಜಿಲ್ಲಾಡಳಿತದಿಂದ ಸೆಪ್ಟೆಂಬರ್ 17 ರಂದು ಬೆಳಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದಲ್ಲಿ ವಿಶ್ವಕರ್ಮ ಜಯಂತಿಯನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರದ ರವಿಚಂದ್ರ ತಿಳಿಸಿದ್ದಾರೆ.

## ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಹೆಚ್.ಎ.ಎಲ್ ಬೆಂಗಳೂರು ಇವರು ಐ.ಟಿ.ಐ. (ಫಿಟ್ಟರ್, ಟರ್ನರ್, ಮೆಷಿನಿಸ್ಟ್, ಎಲೆಕ್ಟ್ರೀಷಿಯನ್, ವೆಲ್ಡರ್, ಕಾಪರ್‌ಂಟರ್, ಫೌಂಡ್ರಿಮನ್, ಶೀಟ್ ಮೆಟಲ್ ವರ್ಕರ್, ಟೂಲ್ ಅಂಡ್ ಡೈ ಮೇಕರ್, ಪ್ರೊಗ್ರಾಮರ್ ಕಮ್ ಆಪರೇಟರ್) & (ಮೆಕ್ಯಾನಿಕ್ ರೆಫ್ರಿಜರೇಷನ್ ಅಂಡ್ ಏರ್ ಕಂಡಿಷನ್) ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಸೆಪ್ಟೆಂಬರ್ 24 ರೊಳಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾಡಳಿತ ಭವನ, 1ನೇ ಮಹಡಿ, ಬಿ–ಬ್ಲಾಕ್, ಪಿ.ಬಿ. ರಸ್ತೆ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು. ಅಭ್ಯರ್ಥಿಗಳು https://apprenticeshipindia.gov.in ಈ ವೆಬ್ಸೈಟ್ನಲ್ಲಿ ಅಪ್ರೆಂಟೀಸ್ಗಾಗಿ ನೋಂದಾಯಿಸಿ, ಕಡ್ಡಾಯವಾಗಿ ನೋಂದಣಿ ಸಂಖ್ಯೆಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ, ದಾವಣಗೆರೆ ದೂ.ಸಂ::08192–259446, ಮೋಬೈಲ್ ಸಂಖ್ಯೆ:7406323294 ಸಂಪರ್ಕಿಸಬೇಕೆಂದು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

## ಮೆಕ್ಕೆಜೋಳ ಬೆಳೆಗೆ ಹೊಸ ಕಳೆನಾಶಕ

**ದಾವಣಗೆರೆ/ ಚಿತ್ರದುರ್ಗ:** ಭಾರತದ ಪ್ರಮುಖ ವೈವಿಧ್ಯಮಯ ಕೃಷಿ ಉದ್ಯಮಗಳಲ್ಲಿ ಒಂದಾಗಿರುವ ಗೋದ್ರೇಜ್ ಅಗ್ರೋವೆಟ್ ಲಿಮಿಟೆಡ್ (ಗೋದ್ರೇಜ್ ಅಗ್ರೋವೆಟ್), ವಿಶೇಷವಾಗಿ ಮೆಕ್ಕೆಜೋಳ ಬೆಳೆಗೆ ಹೊಸ ಕಳೆನಾಶಕವನ್ನು ಪರಿಚಯಿಸಿದೆ.

ಐಎಕೆ ಜಪಾನ್ ಸಹಯೋಗದಲ್ಲಿ ಅಭಿವೃದ್ಧಿಪಡಿಸಲಾಗಿರುವ ಕಳೆನಾಶಕ 'ಅಶಿತಕ' ಭಾರತದಲ್ಲಿ ಮೆಕ್ಕೆಜೋಳ ರೈತರು ಎದುರಿಸುತ್ತಿರುವ ಪ್ರಮುಖ ಸವಾಲಾಗಿರುವ ಹುಲ್ಲು ಮತ್ತು ಅಗಲವಾದ ಎಲೆ ಹೊಂದಿರುವ ಕಳೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಹೊಸ ಪರಿಹಾರವಾಗಿದೆ.

ಮೆಕ್ಕೆಜೋಳ ಬೆಳೆಗೆ ಕಳೆ ಬಾಧೆ ಪ್ರಮುಖ ಸಮಸ್ಯೆಯಾಗಿದ್ದು, ಆರಂಭಿಕ ಬೆಳವಣಿಗೆಯ ಹಂತಗಳಲ್ಲಿ,

ಅಶಿತಕವನ್ನು 2 ರಿಂದ 4 ಎಲೆಗಳ ಹಂತದಲ್ಲಿ ಅನ್ವಯಿಸಿದರೆ, ಕಳೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬಹುದು. ಎಂದು ಗೋದ್ರೇಜ್ ಅಗ್ರೋವೆಟ್ ಬೆಳೆ ಸಂರಕ್ಷಣಾ ವಹಿವಾಟಿನ ಸಿಇಒ ರಾಜವೇಲು ಎನ್.ಕೆ. ಪ್ರಕಟಣೆಯಲ್ಲಿ ಹೇಳಿದ್ದಾರೆ.

ಮೆಕ್ಕೆಜೋಳದಲ್ಲಿ ಅಶಿತಕದ ಪರಿಣಾಮಕಾರಿ ಕಳೆ ನಿಯಂತ್ರಣವು ಬೆಳೆ–ಕಳೆ ಸ್ಪರ್ಧೆಯನ್ನು ನಿಯಂತ್ರಿಸುತ್ತದೆ. ಸೀಮಿತ ಪ್ರಮಾಣದಲ್ಲಿ ಮಣ್ಣಿನ ತೇವಾಂಶ ಮತ್ತು ಪೋಷಕಾಂಶಗಳ ಉತ್ತಮ ಬಳಕೆಗೆ ಚಾಲನೆ ನೀಡುತ್ತದೆ. ಹೂಬಿಡುವ ಮತ್ತು ಧಾನ್ಯ ಭರ್ತಿಯಾಗುವ ಮಹತ್ವದ ಹಂತಗಳಲ್ಲಿ ಸಸ್ಯದ ಆರೋಗ್ಯವನ್ನು ರಕ್ಷಿಸುತ್ತದೆ ಎಂದು ವಿವರಿಸಿದ್ದಾರೆ.

2 ರಿಂದ 4 ಎಲೆಗಳ ಹಂತದಲಿ ಎಕರೆಗೆ 400 ಮಿಲಿ ದ್ರಾವಕದೊಂದಿಗೆ ಬಳಸಿ ಕಳೆಗಳನ್ನು ಮೊದಲೇ ನಿಯಂತ್ರಿಸಬಹುದಾಗಿದೆ. ಇದು ಹೆಚ್ಚು ಸ್ಥಿರವಾದ ಉತ್ಪಾದನೆ, ಉತ್ತಮ ಧಾನ್ಯದ ಗುಣಮಟ್ಟ ಮತ್ತು ವಿಶೇಷವಾಗಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಏರಿಳಿತದಿಂದ ಕೂಡಿರುವ ಕೃಷಿ ಆದಾಯದ ವಿರುದ್ಧ ಬಲಿಷ್ಠ ರಕ್ಷಣೆ ಒದಗಿಸುತ್ತದೆ ಎಂದು ಹೇಳಿದ್ದಾರೆ.

# ತಂದೆ–ತಾಯಿ ಪೋಷಣೆ ಮಾಡದಿದ್ದರೆ ಆಸ್ತಿ ವಾಪಸು



**ಚಿಕ್ಕಮಗಳೂರು:** ತಂದೆ ತಾಯಿಯಿಂದ ಆಸ್ತಿಯನ್ನು ಪಡೆದ ನಂತರ ಅವರ ಪಾಲನೆ, ಪೋಷಣೆ ಮಾಡದಿದ್ದರೆ ಕಾನೂನಿನ ಮೂಲಕ ಆಸ್ತಿ ವಾಪಸ್ಸು ಪಡೆದುಕೊಳ್ಳುವ ಅವಕಾಶವಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ನಗರದ ಕೆಂಪನಹಳ್ಳಿಯ ಆಶಾಕಿರಣ ಅಂಧ ಮಕ್ಕಳ ವಸತಿಯುತ ಪಾಠಶಾಲೆಯಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಇಂದು ಆಯೋಜಿಸಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹಿರಿಯರ ಹಿತದೃಷ್ಟಿಯನ್ನು ಕಾಪಾಡುವ ಸಲುವಾಗಿ ಹಿರಿಯರ ಪೋಷಣೆ ಮತ್ತು ಸಂರಕ್ಷಣೆ ಕಾಯ್ದೆ ಜಾರಿಗೆ ಬಂದಿದೆ ಎಂದ ಅವರು, ಜಿಲ್ಲಾ ಕಾನೂನು ಪ್ರಾಧಿಕಾರವು ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗೆ ತಮ್ಮ ಹಕ್ಕುಗಳು ಮತ್ತು ಕಾನೂನಿನ ಬಗ್ಗೆ ಅರಿವು ಮೂಡಿಸುವ ಕೆಲಸವನ್ನು ಕೂಡ ಮಾಡುತ್ತಿದೆ ಎಂದು ಹೇಳಿದರು.

ಈ ದಿನ ಹಿರಿಯರ ಹಕ್ಕುಗಳನ್ನು ಗೌರವಿಸಲು ಮತ್ತು ಅವರ ಮಾರ್ಗದರ್ಶನವನ್ನು ಅನುಸರಿಸಲು ನಮಗೆ ಸ್ಫೂರ್ತಿ ನೀಡುತ್ತದೆ. ಈ ದಿನವನ್ನು ಸುಂದರಗೊಳಿಸಲು, ನಿಮ್ಮ ಅಜ್ಜಿಯರು ಮತ್ತು ಮನೆಯಲ್ಲಿ ವಾಸಿಸುವ ಇತರ ಹಿರಿಯರೊಂದಿಗೆ ಸಮಯ ಕಳೆಯಿರಿ. ಅವರಿಗೆ ಇದಕ್ಕಿಂತ ಉತ್ತಮವಾದ ಉಡುಗೊರೆ ಇನ್ನೊಂದಿಲ್ಲ ಎಂದು ಹೇಳಿದರು.

ಆಶಾಕಿರಣ ಅಂಧ ಮಕ್ಕಳ ವಸತಿಯುತ ಪಾಠಶಾಲೆ ಅಧ್ಯಕರಾದ ಡಾ.ಜೆ.ಪಿ.ಕೃಷ್ಣೇಗೌಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಇಡೀ ಜಗತ್ತಿನಲ್ಲಿ 800 ಕೋಟಿ ಜನ 221 ದೇಶಗಳಲ್ಲಿ ಇಂದು ವಿಶೇಷವಾಗಿ ಹಿರಿಯರನ್ನು ಗೌರವಿಸುವ ದಿನವನ್ನು ಆಚರಿಸುತ್ತಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ಈ ದಿನವು ಸಮಾಜಕ್ಕೆ ಹಿರಿಯ ನಾಗರಿಕರ ಕೊಡುಗೆಯನ್ನು ಗುರುತಿಸಲು ಹಾಗೂ ಅವರ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು, ಅವರಿಗೆ ಪರಿಹರಿಸುವ ಮಾರ್ಗಗಳನ್ನು ತಿಳಿಸಲು ಅವಕಾಶ ಕಲ್ಪಿಸುತ್ತದೆ. ಯುವಕರ ಜೀವನವು ವೇಗವಾಗಿ ಓಡುತ್ತಿದೆ. ಈ ಸಮಯದಲ್ಲಿ ಮನೆಯಲ್ಲಿರುವ ವೃದ್ಧರು ಒಂಟಿತನಕ್ಕೆ ಗುರಿಯಾಗುತ್ತಾರೆ. ಇಂದು ವಿಶ್ವ ಹಿರಿಯ ನಾಗರಿಕರ ದಿನದ ಸಂದರ್ಭದಲ್ಲಿ ನಿಮ್ಮ ಮನೆಯ ಹಿರಿಯರೊಂದಿಗೆ ಕೆಲವು ಸುಂದರ ಕ್ಷಣಗಳನ್ನು ಕಳೆಯುವಂತೆ ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲದಾರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ದಿನದ ಅಂಗವಾಗಿ ಹಿರಿಯ ನಾಗರಿಕರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇದರಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಗಳಿಸಿದವರಿಗೆ ಬಹುಮಾನ ವಿತರಣೆ ಅಥವಾ ಸನ್ಮಾನ ಮಾಡಲಾಗುತ್ತದೆ ಎಂದು ಹೇಳಿದರು.

ಯುವಜನತೆ ಹಿರಿಯರಿಗೆ ಭಾರತೀಯ ಸಂಪ್ರದಾಯದಂತೆ ಗೌರವ ನೀಡಬೇಕು. ಜೊತೆಗೆ ಅವರ ಅನುಭವಗಳನ್ನು ಪಡೆದುಕೊಂಡು ಮುಂದೆ ತಮ್ಮ ಜೀವನಕ್ಕೂ ಕೂಡ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಅಭಿವೃದ್ಧಿ ಇಲಾಖೆಯ ಡಿ.ಸಂತೋಷ್, ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಗೋಪಾಲಕೃಷ್ಣ, ಜಿ.ಪಂ. ಉಪ ಕಾರ್ಯದರ್ಶಿ ಶಂಕರ ಕೊರವರ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಕ್ಕಳ ಬೆಳವಣಿಗೆಗೆ ಪೋಷಕರ ಪಾತ್ರ ಮಹತ್ವ




**ಶಿವಮೊಗ್ಗ :** ಮಕ್ಕಳ ಬೆಳವಣಿಗೆಗೆ ಮತ್ತು ವಿಕಾಸದಲ್ಲಿ ಪೋಷಕರ ಪಾತ್ರ ಮಹತ್ವ ಎಂದು ಮಕ್ಕಳ ಸಮಾಲೋಚನಗಾರರಾದ ಡಾ. ಐಶ್ವರ್ಯ ಹೇಳಿದರು.

ಅವರು ನಗರದ ಡೆಲ್ಲಿ ವರ್ಡ್ ಶಾಲೆಯಲ್ಲಿ ಆಯೋಜಿಸಿದ್ದ ಪೋಷಕರ ಕೇಂದ್ರ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಬದಲಾದ ಸಾಮಾಜಿಕ ಹಾಗೂ ಶೈಕ್ಷಣಿಕ ವ್ಯವಸ್ಥೆಯಿಂದಾಗಿ ಮಕ್ಕಳು, ವಿದ್ಯಾರ್ಥಿಗಳು ನಾನಾ ಕಾರಣಗಳಿಂದ ಒತ್ತಡಕ್ಕೆ ಸಿಲುಕುತ್ತಿದ್ದು, ಸಮಸ್ಯೆ ಎದುರಿಸುವ ಮನೋಧೈರ್ಯವಿಲ್ಲದೇ ದುಡುಕು ತೀರ್ಮಾನ ಕೈಗೊಳ್ಳುವುದು ಹೆಚ್ಚಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಪೋಷಕರೇ ಮಕ್ಕಳ ಮೇಲೆ ಓದುವಿಕೆಯ ಒತ್ತಡ ಹೇರುವುದು ಸಲ್ಲದು. ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಮತ್ತು ಅದೋಪತನಕ್ಕೆ ಪೋಷಕರೇ ಕಾರಣ. ಮಕ್ಕಳ ಮೇಲಿನ ಅತಿಯಾದ ಪ್ರೀತಿ ಮಕ್ಕಳನ್ನು ದಾರಿ ತಪ್ಪಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲೆ ದಿವ್ಯ ಶೆಟ್ಟಿಯವರು ಮಾತನಾಡಿ ಮಕ್ಕಳಲ್ಲಿ ಮೊಬೈಲ್ ಗೀಳನ್ನು ತಪ್ಪಿಸಿ ಕಲಿಕೆಯ ಉತ್ಸಾಹ ಹೆಚ್ಚಿಸಿ ಎಂದು ಪೋಷಕರಿಗೆ ಹೇಳಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಆಂಥೋನಿ ಕ್ಲೆಂಟೇನ್, ಸಹನಾ, ಶಾಲೆಯ ಶಿಕ್ಷಕರು, ಪೋಷಕರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಇಂದು ಪ್ರಧಾನಿ ಮೋದಿ ಹುಟ್ಟುಹಬ್ಬ; ವಿಶೇಷ ಪೂಜೆ



**ದಾವಣಗೆರೆ:** ಭಾರತೀಯ ಜನತಾ ಪಾರ್ಟಿ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಿಂದ ಸೆ.17 ರಂದು ಬೆಳಿಗ್ಗೆ 9.30 ಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ 75ನೇ ಹುಟ್ಟುಹಬ್ಬದ ಪ್ರಯುಕ್ತ ನಗರದ ದೊಡ್ಡಪೇಟೆಯಲ್ಲಿರುವ ಶ್ರೀ ಗಣಪತಿ ದೇವಸ್ಥಾನದಲ್ಲಿ ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್ ಹಾಗೂ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಅವರ ನೇತೃತ್ವದಲ್ಲಿ ವಿಶೇಷ ಪೂಜೆ ಸಲ್ಲಿಸುವುದರೊಂದಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ದೇಶಕ್ಕೆ ಸೇವೆ ಸಲ್ಲಿಸಿರುವ ಮಹಾನೀಯರಾದ ಛತ್ರಪತಿ ಶಿವಾಜಿ, ಶ್ರೀ ರಾಜ ವೀರಮದಕರಿನಾಯಕ, ಬಸವಣ್ಣ, ಸಂಗೊಳ್ಳಿ ರಾಯಣ್ಣ, ದೇವರಾಜ ಅರಸ್, ಭಗತ್ ಸಿಂಗ್ ಅವರ ಪುತ್ಥಳಿಗಳನ್ನು ಸ್ವಚ್ಛಗೊಳಿಸುವುದರೊಂದಿಗೆ, ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಲಾಗುತ್ತದೆ.

ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿ ಸ್ವಚ್ಛಗೊಳಿಸಿ ಬೆಳಿಗ್ಗೆ 11ಗಂಟೆಗೆ ಹಾಲಿನ ಅಭಿಷೇಕ ಮಾಡುವ ಮೂಲಕ ಸಿಹಿ ವಿತರಿಸಿ, ಪ್ರಧಾನಿಯವರ ಜನ್ಮ ದಿನವನ್ನು ಆಚರಿಸಲಾಗುವುದು. ಆದ್ದರಿಂದ ಈ ಎಲ್ಲಾ ಕಾರ್ಯಕ್ರಮಗಳಿಗೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ವಿಭಾಗದ ಪ್ರಧಾನ ಕಾರ್ಯದರ್ಶಿ ರಾಜು ನೀಲಗುಂದ ಕೋರಿದ್ದಾರೆ.

### ಜಿಟಿ–ಜಿಟಿ ಮಳೆಯಿಂದಾಗಿ ಅಂಟಿದ ಕೊಳೆ ರೋಗ

## ರೈತರಿಗೆ ಕಣ್ಣೀರು ತರಿಸಿದ ಈರುಳ್ಳಿ




**ಜಗಳೂರು:** ಈರುಳ್ಳಿ ಬೆಳೆಗೆ ಕೊಳೆ ರೋಗ ದೊಡ್ಡ ಸಮಸ್ಯೆಯಾಗಿದ್ದು, ಬೆಳೆ ಸಂಪೂರ್ಣವಾಗಿ ನಾಶವಾಗುತ್ತಿದೆ. ಇದರಿಂದ ರೈತರು ಕಣ್ಣೀರು ಹಾಕುವ ಪರಿಸ್ಥಿತಿ ಬಂದಿದೆ. ಬೆಳೆಗಾರರು ಸಾಕಷ್ಟು ನಷ್ಟ ಅನುಭವಿಸುತ್ತಿದ್ದು, ಸಾಲದ ಸುಳಿಯಲ್ಲಿ ಸಿಲುಕುವಂತಾಗಿದೆ.

ಪ್ರತಿ ವರ್ಷ ಹೆಚ್ಚು ಈರುಳ್ಳಿ ಬೆಳೆಯುತ್ತಿದ್ದ ತಾಲೂಕಿನ ರೈತರು ಈ ಬಾರಿ 1150 ಎಕರೆ ಪ್ರದೇಶದಲ್ಲಿ ಮಾತ್ರ ಬಿತ್ತನೆ ಮಾಡಿದ್ದಾರೆ. ಆದರೆ ಅತಿಯಾದ ಮಳೆಯಿಂದ ಕೊಳೆರೋಗ ವ್ಯಾಪಕವಾಗಿ ಹರಡುತ್ತಿದೆ. ವಿವಿಧ ಬೆಳೆಗಳನ್ನು ಬೆಳೆದು ಕೈ ಸುಟ್ಟುಕೊಂಡಿರುವ ರೈತರು ಆರ್ಥಿಕವಾಗಿ ಜಜ್ಜರಿತರಾಗಿದ್ದಾರೆ. ಕೆಲ ದಿನಗಳಿಂದ ತಾಲೂಕಿನ ಬಹುತೇಕ ಕಡೆ ಜಿಟಿ ಜಿಟಿ ಮಳೆ ಸುರಿಯುತ್ತಿದ್ದು, ಈರುಳ್ಳಿ ರೈತರ ಕೈಗೆಟುಕದಂತಾಗಿದೆ. ಕಂಗಾಲಾದ ಬೆಳೆಗಾರರು: ತಾಲೂಕಿನ ಜಮ್ಮಾಪುರ, ತೋರಣಗಟ್ಟೆ, ದೊಣೆಗಳ್ಳಿ, ಬಿದರಕೆರೆ, ಕ್ಯಾಸೇನಹಳ್ಳಿ, ಕಲ್ಲೇದೇವರಪುರ ವ್ಯಾಪ್ತಿಯಲ್ಲಿ ಬೆಳೆ ಒಕ್ಕಣೆ ಸಮೀಪಿಸುತ್ತಿವಂತೆ ಕೊಳೆ ರೋಗ ರೈತರ ಸಂತಸವನ್ನು ಕಸಿದಿದೆ. ಅಲ್ಲದೇ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸೂಚಿಸಿದ ಔಷಧೋಪಚಾರಕ್ಕೂ ರೋಗ ನಿಯಂತ್ರಣವಾಗಿಲ್ಲ.

ಬೆಳೆಗೆ ಹೂಡಿದ ಬಂಡವಾಳವೂ ಬರಲಿಲ್ಲ. ಬೆಳೆಯೂ ಕೈಗೆ ಸಿಗಲಿಲ್ಲ ಎಂಬಂತಾಗಿದೆ. ಹೀಗಾಗಿ ರೈತರು ಬೆಳೆ ನಾಶಪಡಿಸಿ ಪರ್ಯಾಯ ಬೆಳೆಗಾಗಿ ಜಮೀನನ್ನು ಹದ ಮಾಡಿಕೊಳ್ಳುತ್ತಿದ್ದಾರೆ. ಮತ್ತೊಂದೆಡೆ ನಾಶಪಡಿಸಿದ ಈರುಳ್ಳಿ ಬೆಳೆಗೆ ಸರ್ಕಾರ ಪರಿಹಾರ ನೀಡಿ ನಮ್ಮ ಸಂಕಷ್ಟಕ್ಕೆ ಸ್ಪಂದಿಸಲಿ ಎಂಬುದು ರೈತರ ಆಗ್ರಹವಾಗಿದೆ.

## ಪದ್ಮಭೂಷಣ ಪುಟ್ಟರಾಜರ 15 ನೇ ಪುಣ್ಯಾರಾಧನೆ



**ಗದಗ :** ಗಾನ ಗಂಧರ್ವ ಕಲಾ ಟ್ರಸ್ಟ್ (ರಿ). ಗದಗ– ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು ಸಹಕಾರದೊಂದಿಗೆ ಸೆ .17 ರಂದು ಸಂಜೆ 6 ಗಂಟೆಗೆ ವಿವೇಕಾನಂದ ಬಡಾವಣೆಯ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ನಡೆಯಲಿದೆ.

ಪೂಜ್ಯ. ಪುಟ್ಟರಾಜ ಗವಾಯಿಗಳವರ 15ನೇ ಪುಣ್ಯಾರಾಧನೆ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ 2ನೇ ವಾರ್ಷಿಕೋತ್ಸವದ ದಿವ್ಯ ಸಾನಿದ್ಯವನ್ನು .ಮ. ನಿ. ಪ್ರ. ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹಠಯೋಗಿ ಕೊಟ್ಟೂರೇಶ್ವರ ಮಠ, ಸುಕ್ಷೇತ್ರ ಹರ್ಲಾಪುರ ನಡೆಯಲಿದೆ.

ಮುಂಡರಗಿ ಬ್ರಹನ್ಮಠದ ಡಾ. ವೀರೇಶ್ವರ ಶರಣರ ಸಮ್ಮುಖದಲ್ಲಿ

ಗಾನಗಂಧರ್ವ ಕಲಾ ಟ್ರಸ್ಟ್ ಬಿ. ಎಂ. ಪಂಚಾಕ್ಷರಿ ಅಧ್ಯಕ್ಷ ಇವರ ಅಧ್ಯಕ್ಷತೆ ವಹಿಸುವರು.

ರಾಜೀವ ಗಾಂಧಿ ನಗರ ಪೊಲೀಸ್ ಠಾಣೆಯ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪಿ ಎಸ್ ಐ . ಮಾರುತಿ. ಎಸ್. ಜೋಗದಂಡಕರ ಕಾರ್ಯಕ್ರಮ ಉದ್ಘಾಟನೆ ಮಾಡಲ್ಲಿದ್ದಾರೆ.

ಕಾರ್ಯಕ್ರಮದ ಅತಿಥಿಗಗಳಾಗಿ ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ, ಡಾ. ಬಸವರಾಜ ಬಳ್ಳಾರಿ.ಗಣ್ಯ ವರ್ತಕ ಶರಣಪ್ಪ,ಸಂಗಪ್ಪ ಗುಡಿಮನಿ, ನವರತ್ನ ಜ್ಯೂವೆಲರ್ಸ್ ಮಾಲೀಕ ಸಿದ್ದಲಿಂಗೇಶ ಮುರಶಿಳ್ಳಿನ ಆಗಮಿಸುವರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಉಮೇಶ ಸಿ. ಕಪ್ಪತ್ತನವರ, ಶ ದ್ರುವಕುಮಾರ ಬಸಪ್ಪ ಮೆಣಸಿನಕಾಯಿ, ಅಂಬಾದಾಸ ಜಮಾದಾರರಿಗೆ ಸನ್ಮಾನ ನಡೆಯಲಿದೆ.

ಹೊಸಪೇಟೆ ಗುಂಡಿಭಾರತ ಗಾಯನ,ಪುಟ್ಟರಾಜೇಶ ಗುತ್ತರಗಿ. ಪುಣೆಯವರಿಂದ ತಬಲಾ ಹಾಗೂ ಹಾರ್ಮೋನಿಯಂ ಸೇವೆ, ಗದಗ ಹರ್ಷತ್ ಕುಮಾರ್ ಸ್ವರನಮನ ಕಾರ್ಯಕ್ರಮ ನಡೆಸಿಕೊಡುವರು. ಗದಗ ಹರ್ಷತ್ ಕುಮಾರ್ ಎಂ. ಕಲಕಂಬಿ ಭರತನಾಟ್ಯ, ನಾದಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ಹಾಡು – ನೃತ್ಯಗಳ ಪ್ರದರ್ಶನ ನಡೆಯಲಿದೆ ಎಂದು ಗಾನಗಂಧರ್ವ ಕಲಾಟ್ರಸ್ಟ್ ಕಾರ್ಯದರ್ಶಿ ಸಿದ್ದಲಿಂಗಯ್ಯ ಶಾಸ್ತ್ರಿ ಎಸ್. ಗಡ್ಡದಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯೆ ಎಂಬುದು ಸಾಧಕನ ಸ್ವತ್ತೇ ಹೊರತು ಸೋಮಾರಿಯದಲ್ಲ

**ದಾವಣಗೆರೆ:** ವಿದ್ಯೆ ಎಂಬುದು ಸಾಧಕನ ಸ್ವತ್ತೇ ಹೊರತು ಸೋಮಾರಿಯದಲ್ಲ, ಶಿಕ್ಷಣ ಎಂಬ ಮೂರಕ್ಷರ ಇಲ್ಲದೇ ಹೋದರೆ ಅಂತಹವರ ಬಾಳು ಅಂದಕಾರದಲ್ಲಿ ಮುಳುಗಿ ಹೋಗಲಿದೆ ಎಂದು ಜೆಜೆಎಂ ಮೆಡಿಕಲ್ ಕಾಲೇಜಿನ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞೆ ಡಾ.ಶುಕ್ಲಾ ಶೆಟ್ಟಿ ಹೇಳಿದರು.

ಮಂಗಳವಾರ ನಗರದ ಡಿಆರ್‌ಎಂ ವಿಜ್ಞಾನ ಕಾಲೇಜಿನ 2025–26ನೇ ಸಾಲಿನ ಸಹಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಹೊಂಗಿರಣ 2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯೆ ಎಂಬುವುದು ಸೋಮಾರಿಗಳ ಸೊತ್ತಲ್ಲ, ಶಿಕ್ಷಣ ಎಂಬ ಮೂರಕ್ಷರ ಇಲ್ಲದೇ ಹೋದರೆ ಅಂತಹವರ ಬಾಳು ಅಂದಕಾರದಲ್ಲಿ ಮುಳುಗಿ ಹೋಗಲಿದೆ. ಹಾಗಾಗೀ ಪ್ರತಿಯೊಬ್ಬರು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ಅವರು ಕಿವಿ ಮಾತು ಹೇಳಿದರು.

ಜೀವನದಲ್ಲಿ ಉತ್ತಮ ಸಂಸ್ಕಾರ ರೂಢಿಸಿಕೊಂಡು ತಮ್ಮ ಹಾಗೂ ದೇಶದ ಅಭಿವೃದ್ಧಿಗೆ ಮುಂದಾಗಬೇಕು. ಕಾಲೇಜಿಗೆ ಹಾಗೂ ತಮಗೆ ವಿದ್ಯೆ ಕಲಿಸಿದ ಗುರುಗಳಿಗೆ ಹೆಮ್ಮೆ ತರುವ ಹಾಗೆ ಸಾಧನೆ ಮಾಡಬೇಕು ಎಂದು ನುಡಿದರು.

ಕಾಲೇಜಿನ ಪ್ರಾಣಿಶಾಸ್ತ್ರ ವಿಭಾಗದ ಡಾ|| ಮಂಜುನಾಥ ಬಸಪ್ಪ ಚನ್ನಿ ಪಿಎಚ್ಡಿ ಪಡೆದಿದ್ದು ಹಾಗೂ ಡಾ|| ಹರೀಶ್ ಅವರು ಯುವ ವಿಜ್ಞಾನ ಪ್ರಶಸ್ತಿ ಪಡೆದಿದ್ದು, ಇಬ್ಬರನ್ನು ಸನ್ಮಾನಿಸಲಾಯಿತು. ಇದೇ ವೇಳೆ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ಎಲ್ಲರನ್ನು ರಂಜಿಸಿತು.

ಪಿಎಚ್ಡಿ ಪಡೆದಿದ್ದು ಹಾಗೂ ಡಾ|| ಹರೀಶ್ ಅವರು ಯುವ ವಿಜ್ಞಾನ ಪ್ರಶಸ್ತಿ ಪಡೆದಿದ್ದು, ಇಬ್ಬರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಕಾರ್ಯಕ್ರಮದಲ್ಲಿ ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನ ಕಾರ್ಯದರ್ಶಿ ಶಿವನಕೆರೆ ಬಸವಲಿಂಗಪ್ಪ, ಕಾಲೇಜಿನ ಪ್ರಾಂಶುಪಾಲೆ ಎಂ.ಪಿ.ರೂಪಶ್ರೀ, ಡಾ.ಟಿ.ಮಂಜುರಾಜ್, ಶಿವಪ್ಪ ಮುಳ್ಳೂರು, ಆಡಿ ವಸಂತ್ ನಾಯಕ್ ಸೇರಿದಂತೆ 2025–26ನೇ ಸಾಲಿನ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು, ಕಾಲೇಜಿನ ಬೋಧಕ, ಬೋಧಕೇತರ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

## ಪೈಥೋನ್ ವೆಬ್ ಡೆವೆಲಪ್ಪರ್ ಪ್ರಮಾಣಪತ್ರ ತರಬೇತಿ




**ದಾವಣಗೆರೆ:** ಬಾಪೂಜಿ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗವು ಐಸಿಟಿ ಅಕಾಡೆಮಿಯ ಸಹಯೋಗದಲ್ಲಿ ಹಾಗೂ ಇನ್ಫೋಸಿಸ್ ಫೌಂಡೇಶನ್ ಪ್ರಾಯೋಜಿತ ಸಿಎಸ್ ಆರ್ ಉಪಕ್ರಮದಡಿ ಪೈಥೋನ್ ವೆಬ್ ಡೆವೆಲಪ್ಪರ್ ಪ್ರಮಾಣಪತ್ರ ತರಬೇತಿ ಕಾರ್ಯಕ್ರಮವನ್ನು ಕಾಲೇಜಿನ ಸಿಎಸ್ ಇ ಪ್ರಯೋಗಾಲಯದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥೆ ಡಾ. ಸಿ. ಆರ್. ನಿರ್ಮಲಾ ಅಧ್ಯಕ್ಷತೆ ವಹಿಸಿದ್ದರು. ಐಸಿಟಿ ಅಕಾಡೆಮಿ ಉಪ ವ್ಯವಸ್ಥಾಪಕ ಡಿ. ವಿಷ್ಣು ಪ್ರಸಾದ್, ಪ್ರವೀಣ್ ವಿ. ಗಸ್ತಿ, ಎಂ.ಎಸ್. ಜಕವುಲ್ಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಸಹಪ್ರಾಧ್ಯಾಪಕಿ ಡಾ. ಜಿ. ಆರ್. ಉಷಾ ತರಬೇತಿ ಕಾರ್ಯಕ್ರಮ ಪರಿಚಯಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**